# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್, ಬಿ, ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 297 ₹4, SUNDAY, 21 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26



## ರಾಜ್ಯದಲ್ಲಿಂದು ಹೊಸದಾಗಿ 105 ಕೊರೋನಾ ಪ್ರಕರಣ ದೃಢ

ಬೆಂಗಳೂರು: ಕಳೆದ 24 ಗಂಟೆಗಳಲ್ಲಿ ರಾಜ್ಯದಲ್ಲಿ 105 ಹೊಸ ಕೊರೋನಾ ಪ್ರಕರಣ ದೃಢಪಟ್ಟಿದೆ. 77 ಸೋಂಕಿತರು ಗುಣಮುಖರಾಗಿದ್ದು, ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ. ಸಾವಿನ ಸಂಖ್ಯೆ ಶೂನ್ಯವಾಗಿದ್ದು, ಸಕ್ರಿಯ ಪ್ರಕರಣಗಳ ಸಂಖ್ಯೆ 483 ಆಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಾಹಿತಿ ನೀಡಿದೆ.

ರಾಜಧಾನಿ ಬೆಂಗಳೂರಿನಲ್ಲಿ 26 ಪಾಸಿಟಿವ್ ಪ್ರಕರಣ ಕಂಡುಬಂದಿದ್ದು, 27 ಸೋಂಕಿತರು ಗುಣಮುಖರಾಗಿದ್ದಾರೆ. ಸಕ್ರಿಯ ಪ್ರಕರಣಗಳ ಸಂಖ್ಯೆ 229 ಆಗಿದೆ. ಉಳಿದಂತೆ ರಾಯಚೂರಿನಲ್ಲಿ 10, ಮೈಸೂರು 9, ಬೆಂಗಳೂರು ಗ್ರಾಮಾಂತರ, ಕೊಡಗು, ವಿಜಯನಗರ ಜಿಲ್ಲೆಯಲ್ಲಿ 7, ಚಿತ್ರದುರ್ಗ 6, ಬಳ್ಳಾರಿ 6, ಧಾರವಾಡ, ಕಲಬುರಗಿ 5, ತುಮಕೂರಿನಲ್ಲಿ 4 ಪ್ರಕರಣಗಳು ವರದಿಯಾಗಿದೆ.

ಕಳೆದ 24 ಗಂಟೆಗಳಲ್ಲಿ 6,133 ಪ್ರಕರಣಗಳನ್ನು ಪರೀಕ್ಷಿಸಲಾಗಿದೆ. ಈ ಪೈಕಿ 5,373 ಆರ್ ಟಿಪಿಸಿಆರ್ ಹಾಗೂ 760 RaT ಟೆಸ್ಟ್ ಮಾಡಲಾಗಿದೆಯ ಪಾಸಿಟಿವಿಟಿ ದರ ಶೇ. 1.71 ರಷ್ಟಿದ್ದು, ಮರಣ ಪ್ರಮಾಣ ದರ ಶೇ.0. 00 ಆಗಿದೆ.

# 30 ಲಕ್ಷ ರೈತರ ಖಾತೆಗೆ ವಾರದಲ್ಲಿ ಮೊದಲ ಕಂತಿನ ಬರ ಪರಿಹಾರ: ಕೃಷ್ಣ ಬೈರೇಗೌಡ

ಬೆಂಗಳೂರು: ಫ್ರೂಟ್ಸ್ ತಂತ್ರಾಂಶದಲ್ಲಿ ಶೇ.75ರಷ್ಟು ರೈತರ ಸಂಪೂರ್ಣ ಜಮೀನು ಮಾಹಿತಿಯನ್ನು ದಾಖಲಿಸಲಾಗಿದ್ದು, ವಾರದಲ್ಲಿ 30 ಲಕ್ಷ ರೈತರಿಗೆ ಮೊದಲ ಕಂತಿನ ಬರ ಪರಿಹಾರದ ಹಣ ಬ್ಯಾಂಕ್ ಖಾತೆಗೆ ತಲುಪಿಸಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ಬರ ಪರಿಹಾರದ ಮೊದಲ ಕಂತಿನ ಹಣವನ್ನು ಶೀಘ್ರವೇ ರೈತರಿಗೆ ತಲುಪಿಸಲು ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಉಪ ವಿಭಾಗಾಧಿಕಾರಿಗಳ ಜತೆಗಿನ ಮಾಸಿಕ ಸಭೆಯ ಬಳಿಕ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.




ರೈತರಿಗೆ ಬರ ಹಾಗೂ ಮಳೆಹಾನಿ ಪರಿಹಾರ ತಲುಪಿಸುವ ವಿಚಾರದಲ್ಲೂ ಈ ಹಿಂದೆ ಭಾರೀ ಅವ್ಯವಹಾರಗಳು ನಡೆದಿವೆ. ಯಾರದೋ ಜಮೀನಿಗೆ ಇನ್ಯಾರೋ ಪರಿಹಾರ ಪಡೆದಿರುವ ಪ್ರಕರಣಗಳು ನನ್ನ ಗಮನಕ್ಕೆ ಬಂದಿದೆ. ಕಡೂರು ತಾಲೂಕೊಂದರಲ್ಲೇ 6 ಕೋಟಿ ರೂ. ಅಕ್ರಮವಾಗಿದೆ. ಹಣ ದುರ್ಬಳಕೆಯಾದವರ ಪಟ್ಟಿ ನನ್ನಲ್ಲಿದೆ. ಹಾನಗಲ್, ಶಿಗ್ಗಾಂವಿಯಲ್ಲೂ ಇಂತಹ ಪ್ರಕರಣಗಳು ಕಂಡುಬಂದಿದೆ ಎಂದರು.

ಈ ಹಿಂದೆ ಫ್ರೂಟ್ಸ್ ಡೇಟಾಬೇಸ್‌ನಲ್ಲಿ 7.7 ಲಕ್ಷ ರೈತರ ಮಾಹಿತಿಯೇ ಇರಲಿಲ್ಲ. ಈಗ ಹೊಸದಾಗಿ ಸೇರಿಸಲಾಗಿದೆ. 34 ಲಕ್ಷ ರೈತರ ಜಮೀನು ಮಾಹಿತಿಯನ್ನು ಈ ತಂತ್ರಾಂಶದಲ್ಲಿ ದಾಖಲಿಸಲಾಗಿದೆ. ಬಿಟ್ಟುಹೋಗಿರುವ ಅರ್ಹ ರೈತರ ಮಾಹಿತಿಯನ್ನು ಮತ್ತೆ ದಾಖಲಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಕಳೆದ 15 ದಿನಗಳಿಂದ ನಮ್ಮ ಅಧಿಕಾರಿಗಳು ರಜೆ ತೆಗೆದುಕೊಳ್ಳದೆ ಕೆಲಸ ಮಾಡಿದ್ದು, ರೈತರ ಹಣ ದುರುಪಯೋಗವಾಗದಂತೆ ಅವರಿಗೆ ತಲುಪಿಸಲಾಗುವುದು. ಈಗಾಗಲೇ ಈ ಪ್ರಕ್ರಿಯೆ ಆರಂಭವಾಗಿದ್ದು, 15 ಲಕ್ಷಕ್ಕೂ ಅಧಿಕ ರೈತರಿಗೆ ಈಗಾಗಲೇ ಹಣ ತಲುಪಿಸಲಾಗಿದೆ. ಮುಂದಿನ ವಾರದೊಳಗೆ 30 ಲಕ್ಷ ರೈತರಿಗೆ ಪರಿಹಾರದ ಹಣ ತಲುಪಲಿದೆ ಎಂದು ವಿವರಿಸಿದರು.

ರಾಜ್ಯದ ಎಲ್ಲ ತಾಲೂಕು ಕಚೇರಿಗಳನ್ನು ಆಧುನೀಕರಣಗೊಳಿಸಲು ನಿರ್ಧರಿಸಲಾಗಿದೆ. ಫೆಬ್ರವರಿ ಮೊದಲ ವಾರದಿಂದ 31 ತಾಲೂಕುಗಳಲ್ಲಿ ಈ ಪ್ರಕ್ರಿಯೆ ಪ್ರಾರಂಭವಾಗುತ್ತದೆ. ಫೆ.1ರಿಂದ ಎಲ್ಲ ಕಚೇರಿಗಳಲ್ಲಿ ಇ–ಕಡತ ಕಡ್ಡಾಯಗೊಳಿಸುತ್ತೇವೆ. ತಪ್ಪಿದರೆ ಅಧಿಕಾರಿಗಳಿಗೆ ನೋಟಿಸ್ ನೀಡಲಾಗುವುದು ಎಂದರು.

## ರಾಮೇಶ್ವರಂ: ತಣ್ಣೀರಲ್ಲಿ ಮುಳುಗಿ ರಾಮನಾಥಸ್ವಾಮಿ ದರ್ಶನ ಪಡೆದ ಪ್ರಧಾನಿ

ರಾಮೇಶ್ವರಂ: ಜನವರಿ 22 ರಂದು ಅಯೋಧ್ಯೆ ರಾಮ ಮಂದಿರದಲ್ಲಿ ಪ್ರಾಣ ಪ್ರತಿಷ್ಠಾನ ಇರುವುದರಿಂದ ಯೋಗಿಯಂತೆ ಕೆಲವು ಆಚರಣೆಯಲ್ಲಿ ನಿರತರಾಗಿರುವ ಪ್ರಧಾನಿ ನರೇಂದ್ರ ಮೋದಿ ತಮಿಳುನಾಡಿನ ರಾಮೇಶ್ವರಂನಲ್ಲಿ ಸಮುದ್ರದಲ್ಲಿ ಮಿಂದೆಳುವ ಮೂಲಕ ಮತ್ತೊಮ್ಮೆ ದೇಶದ ಗಮನ ಸೆಳೆದಿದ್ದಾರೆ.



ಅಗ್ನಿತೀರ್ಥ ಕಡಲತೀರದಲ್ಲಿ ತಣ್ಣೀರಿನಲ್ಲಿ ಪವಿತ್ರ ಸ್ನಾನ ಮಾಡಿದ ನಂತರ ರುದ್ರಾಕ್ಷಿ ಮಾಲೆಯೊಂದಿಗೆ ಮಂತ್ರ ಜಪಿಸುತ್ತಾ ದೇವಾಲಯಕ್ಕೆ ಆಗಮಿಸಿದ ಪ್ರಧಾನಿ ಮೋದಿ, ಪುರಾತನ ರಾಮನಾಥಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಅವರಿಗೆ ಆರ್ಚಕರಿಂದ ಸಾಂಪ್ರದಾಯಿಕ ಗೌರವ ನೀಡಲಾಯಿತು. ಇದಾದ ನಂತರ ದೇಗುಲದಲ್ಲಿ ನಡೆಯುವ ‘ಭಜನೆ’ಯಲ್ಲಿಯೂ ಮೋದಿ ಭಾಗವಹಿಸಿದ್ದರು.

ತಮಿಳುನಾಡಿನ ರಾಮನಾಥಪುರಂ ಜಿಲ್ಲೆಯ ರಾಮೇಶ್ವರಂ ದ್ವೀಪದಲ್ಲಿರುವ ಶಿವ ದೇವಾಲಯವು ರಾಮಾಯಣದೊಂದಿಗೆ ಸಂಪರ್ಕ ಹೊಂದಿದೆ, ಏಕೆಂದರೆ ಇಲ್ಲಿರುವ ಶಿವಲಿಂಗವನ್ನು ಶ್ರೀರಾಮ ಸ್ಥಾಪಿಸಿದನೆಂಬ ಪ್ರತೀತಿ ಇದೆ. ಶ್ರೀರಾಮ ಮತ್ತು ಸೀತಾದೇವಿ ಇಲ್ಲಿ ಈ ಶಿವಲಿಂಗವನ್ನು ಪೂಜಿಸಿ, ಪ್ರಾರ್ಥನೆ ಸಲ್ಲಿಸಿದ್ದರು ಎಂದು ಹೇಳಲಾಗಿದೆ.

# ಬೆಳಗಾವಿಯಿಂದ 6, ಚಿಕ್ಕೋಡಿಯಿಂದ 10 ಆಕಾಂಕ್ಷಿಗಳ ಅರ್ಜಿ ಹೈಕಮಾಂಡ್ ಗೆ ಸಲ್ಲಿಕೆ: ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದಿಂದ 10, ಚಿಕ್ಕೋಡಿ ಕ್ಷೇತ್ರದಿಂದ 6 ಆಕಾಂಕ್ಷಿಗಳ ಅರ್ಜಿ ಸಲ್ಲಿಕೆ ಯಾಗಿದ್ದು, ಅರ್ಜಿಗಳನ್ನು ಹೈಕಮಾಂಡ್ ಗೆ ಸಲ್ಲಿಸಲಾಗಿದೆ ಎಂದು ಲೋಕೋಪಯೋಗಿ ಇಲಾಖೆ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ನಗರದ ಕಾಂಗ್ರೆಸ್ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಲೋಕಸಭಾ ಚುನಾವಣಾ ಸಿದ್ದತೆ ಬಗ್ಗೆ ಈಗಾಗಲೇ ದೆಹಲಿ ಮತ್ತು ಬೆಂಗಳೂರಿನಲ್ಲಿ ಸಭೆ ನಡೆಸಿದ್ದು, ಇನ್ನೊಂದು ವಾರದಲ್ಲಿ ಚುನಾವಣಾ ತಯಾರಿ ಚುರುಕುಗೊಳ್ಳಲಿದೆ ಎಂದು ತಿಳಿಸಿದರು.

ಲೋಕಸಭಾ ಚುನಾವಣೆಯಲ್ಲಿ ಸಚಿವರಿಗೆ



ಯಾವುದೇ ಮಾನದಂಡ ವಿಲ್ಲ. ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಎಲ್ಲರೂ ಶಕ್ತಿ ಮೀರಿ ಪ್ರಯತ್ನಿಸುತ್ತೇವೆ. ಆದರೆ 28 ಕ್ಷೇತ್ರಗಳಲ್ಲಿಯೂ ಗೆಲುವು ಸಾಧಿಸಕು ಸಾಧ್ಯವಿಲ್ಲ. ಹೀಗಾಗಿ ತೆಲೆದಂಡ ಎಂಬುವುದು ಸುಳ್ಳು. ಇಂತಹ ಯಾವುದೇ ವಿಚಾರಗಳು ಹೈಕಮಾಂಡ್ ಮುಂದಿಲ್ಲವೆಂದು ಹೇಳಿದರು.

ಇನ್ನು ಲೋಕಸಭಾ ಚುನಾವಣೆಗಾಗಿ ಎಐಸಿಸಿ, ಕೆಪಿಸಿಸಿ ಹಾಗೂ ಸಿಎಂ ಅವರಿಂದ ಆಂತರಿಕ ಸಮೀಕ್ಷೆ ನಡೆದಿದೆ ಎಂದರು.

ಅಯೋಧ್ಯೆಗೆ ಹೋದರೆ ಅಷ್ಟೇ ಹಿಂದುತ್ವ ಆಗಲು ಸಾಧ್ಯವಿಲ್ಲ. ಸ್ವತಃ ಪ್ರಧಾನಿ ಮೋದಿ ಅವರೇ ಜ 22ಕ್ಕೆ ಅಯೋಧ್ಯೆ ಗೆ ಬರಬೇಡಿ ಎಂದು ಹೇಳಿದ್ದಾರೆ. ಸಿಎಂ ಸಿದ್ದರಾಮಯ್ಯನವರು ಜ. 22ನೇ ತಾರೀಖು ಬಿಟ್ಟು ಬೇರೆ ದಿನಗಳಲ್ಲಿ ಅಯೋಧ್ಯೆ ಗೆ ಹೋಗುವುದಾಗಿ ಹೇಳಿದ್ದಾರೆ. ಕಾರಣ ಈ ವಿಷಯಕ್ಕೆ ರಾಜಕೀಯ ಬೆರೆಸುವುದು ಸರಿಯಲ್ಲ. ಅನೇಕ ಸ್ವಾಮೀಜಿ ಗಳು ಇನ್ನೂ ರಾಮ ಮಂದಿರ ನಿರ್ಮಾಣ ಕಾರ್ಯ ಪೂರ್ವಗೊಂಡಿಲ್ಲ. ಅದಕ್ಕಾಗಿ ನಾವು ಕಾರ್ಯಕ್ರಮಕ್ಕೆ ಹೋಗುತ್ತಿಲ್ಲವೆಂದು ತಮ್ಮ ಅಭಿಪ್ರಾಯವನ್ನು ತಿಳಿಸಿದ್ದಾರೆ. ಈ ಬಗ್ಗೆ ಎಲ್ಲಾ ನಿರ್ಧಾರಗಳನ್ನು ರಾಮ ಮಂದಿರ ಟ್ರಸ್ಟ್ ನವರು ತೆಗೆದುಕೊಳ್ಳುತ್ತಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಶ್ಯಾಮ್ ಘಾಟಗೆ, ಬೆಳಗಾವಿ ಜಿಲ್ಲಾ ಕಾಂಗ್ರೆಸ್ ಗ್ರಾಮೀಣ ಅಧ್ಯಕ್ಷ ವಿನಯ ನಾವಲಗಟ್ಟಿ, ಕೆಪಿಸಿಸಿ ಸದಸ್ಯ ಕಿರಣ ಸಾಧುನ್ನವರ್, ಕಾಂಗ್ರೆಸ್ ಮುಖಂಡರಾದ ರಾಜಾ ಸಲೀಂ, ಬಸವರಾಜ ಶೇಂಗಾವಿ ಇದ್ದರು.



## 3ನೇ ದಿನಕ್ಕೆ ಕಾಲಿಟ್ಟ ರಾಹುಲ್ ಗಾಂಧಿ ನ್ಯಾಯ್ ಯಾತ್ರೆ

ಅಸ್ಸಾಂ: ಕಾಂಗೆಸ್ ನಾಯಕ ರಾಹುಲ್ ಗಾಂಧಿ ಕೈಗೊಂಡಿರುವ 'ಭಾರತ್ ಜೋಡೋ ನ್ಯಾಯ್ ಯಾತ್ರೆ’ ಮೂರನೇ ದಿನಕ್ಕೆ ಕಾಲಿಟ್ಟಿದೆ. ಶನಿವಾರ ಬೆಳಗ್ಗೆ ಲಖಿಂಪುರ ಜಿಲ್ಲೆಯಿಂದ ಪುನರಾರಂಭಿಸಿತು.

ಯಾತ್ರೆಯು ಗೋವಿಂದಪುರ (ಲಾಲುಕ್) ನಲ್ಲಿ ವಿರಾಮವನ್ನು ತೆಗೆದುಕೊಳ್ಳಲಿದ್ದು, ಅಲ್ಲಿ ಹಿರಿಯ ನಾಯಕ ಜೈರಾಮ್ ರಮೇಶ್, ಜಿತೇಂದ್ರ ಸಿಂಗ್, ಭೂಪೇನ್ ಬೋರಾ ಮತ್ತು ದೇಬಬ್ರತ ಸೈಕಿಯಾ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ಮಧ್ಯಾಹ್ನ ಹರ್ಮುಟಿಯಿಂದ ಪ್ರಯಾಣ ಪುನರಾರಂಭಿಸಿ ಗುಮ್ಟೋ ಮೂಲಕ ಅರುಣಾಚಲ ಪ್ರದೇಶವನ್ನು ಪ್ರವೇಶಿಸಲಿದ್ದು, ಅಲ್ಲಿ ಧ್ವಜ ಹಸ್ತಾಂತರ ಸಮಾರಂಭ ನಡೆಯಲಿದೆ. ನಿಗದಿಯಂತೆ ಇಟಾನಗರ ಸಮೀಪದ ಚಿಂಪು ಗ್ರಾಮದಲ್ಲಿ ರಾತ್ರಿ ತಂಗಲಿದೆ. ಯಾತ್ರೆ ಭಾನುವಾರ ಅಸ್ಸಾಂಗೆ ಮರಳಲಿದೆ. ಅಸ್ಸಾಂನ ಕಲಿಯಾಬೋರ್‌ನಲ್ಲಿ ಸಾರ್ವಜನಿಕ ರ್ಯಾಲಿಯನ್ನು ಸಹ ನಿಗದಿಪಡಿಸಲಾಗಿದೆ, ಇದರಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಇತರ ಪ್ರಮುಖ ನಾಯಕರು ಭಾಗವಹಿಸಲಿದ್ದಾರೆ.

## ವಿಶ್ವದ ಅತಿ ಎತ್ತರದ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆ ಅನಾವರಣ

ಆಂಧ್ರ ಪ್ರದೇಶದ: ವಿಜಯವಾಡದ ಸ್ವರಾಜ್ ಮೈದಾನದಲ್ಲಿ ಸಿಎಂ ವೈಎಸ್ ಜಗನ್ ಮೋಹನ್ ರೆಡ್ಡಿ ವಿಶ್ವದ ಅತಿ ಎತ್ತರದ ಡಾ. ಬಿ.ಆರ್.ಅಂಬೇಡ್ಕರ್ ಪ್ರತಿಮೆ ಅನಾವರಣಗೊಳಿಸಿದ್ದಾರೆ. ಸಾಮಾಜಿಕ ನ್ಯಾಯದ ಪ್ರತಿಮೆ ಇದಾಗಿದ್ದು 125 ಅಡಿ ಎತ್ತರವಾಗಿದೆ.



ಪ್ರತಿಮೆ ನಿರ್ಮಾಣದ ಯೋಜನೆಗೆ ಒಟ್ಟು 404.35 ಕೋಟಿ ರೂಪಾಯಿ ವೆಚ್ಚವಾಗಿದೆ. ಪ್ರತಿಮೆಯ ಸುತ್ತಮುತ್ತ 18.81 ಎಕರೆ ಭೂಮಿಯಲ್ಲಿ ಉದ್ಯಾನವನ ನಿರ್ಮಿಸಲಾಗಿದೆ. ಪ್ರತಿಮೆ ಅನಾವರಣದ ವೇಳೆ ಆಕರ್ಷಕ ಸಿಡಿಮದ್ದುಗಳನ್ನು ಸಿಡಿಸಲಾಯಿತು.

ಇದು ದೇಶದ ಸಂವಿಧಾನ ಸಂಸ್ಥಾಪಕನ ಡಾ. ಬಿ.ಆರ್. ಅಂಬೇಡ್ಕರ್ ಅವರ ಬೃಹತ್ ಪ್ರತಿಮೆ ಆಗಿದೆ. ಜಗತ್ತಿನಲ್ಲಿ ಅವರ ಇಷ್ಟು ಎತ್ತರ ಪ್ರತಿಮೆ ಇನ್ನೊಂದು ಇಲ್ಲ ಎಂದು ಆಂಧ್ರ ಸರ್ಕಾರ ಹೇಳಿದೆ. ಸ್ವಾತಂತ್ರ್ಯ, ಸಮಾನತೆ, ಸಾಮಾಜಿಕ ನ್ಯಾಯದ ಸಂಕೇತವಾಗಿ ಈ ಪ್ರತಿಮೆ ನಿಲ್ಲಲಿದೆ.

## ಶೇ.60ರಷ್ಟು ಕಡ್ಡಾಯ ಕನ್ನಡ ನಾಮಫಲಕ: 35 ಸಾವಿರ ಅಂಗಡಿಗಳಿಗೆ ಬಿಬಿಎಂಪಿ ನೋಟಿಸ್

ಬೆಂಗಳೂರು: ಸಿಲಿಕಾನ್ ಸಿಟಿ ಬೆಂಗಳೂರಿನ ವಾಣಿಜ್ಯ ಅಂಗಡಿಗಳ ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡ ಬಳಕೆಯನ್ನು ಕಡ್ಡಾಯಗೊಳಿಸಿರುವ ಬಿಬಿಎಂಪಿ, ನಿಯಮ ಪಾಲಿಸದ ಸುಮಾರು 35 ಸಾವಿರಕ್ಕೂ ಹೆಚ್ಚು ಅಂಗಡಿಗಳಿಗೆ ನೋಟಿಸ್ ಜಾರಿ ಮಾಡಿದೆ.

ನಗರದಲ್ಲಿರುವ ಆರ್ಟಿರಿಯಲ್ ಹಾಗೂ ಸಬ್ ಆರ್ಟಿರಿಯಲ್ ರಸ್ತೆಗಳಲ್ಲಿ ಬರುವ ವಾಣಿಜ್ಯ ಮಳಿಗೆಗಳು, ಅಂಗಡಿ ಮುಂಗಟ್ಟುಗಳು ಹಾಗೂ ಎಲ್ಲಾ ವಲಯದ ಉದ್ದಿಮೆಗಳನ್ನು ಫೆಬ್ರವರಿಯೊಳಗೆ ಸರ್ವೇ ಕಾರ್ಯ ಪೂರ್ಣಗೊಳಿಸಬೇಕು. ಕನ್ನಡ ಭಾಷೆಯ ನಾಮಫಲಕ ಅಳವಡಿಸುವಂತೆ ತಿಳುವಳಿಕೆ ಪತ್ರ ನೀಡಬೇಕು.

ಆಯಾ ವಲಯ ವ್ಯಾಪ್ತಿಯಲ್ಲಿ ಯಾವುದೇ ಒತ್ತಡಕ್ಕೆ ಮಣಿಯದೆ ಕನ್ನಡ ಭಾಷೆಯನ್ನು ಬಳಸದ ಉದ್ದಿಮೆಗಳ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸರ್ಕಾರ ಬಿಬಿಎಂಪಿಗೆ ಸೂಚಿಸಿತ್ತು. ಅದರಂತೆ ಕಾರ್ಯಾಚರಣೆ ನಡೆಸಿದ ಬಿಬಿಎಂಪಿ ಅಧಿಕಾರಿಗಳು, 35 ಸಾವಿರಕ್ಕೂ



ಹೆಚ್ಚು ಅಂಗಡಿಗಳಿಗೆ ನೋಟಿಸ್ ಜಾರಿ ಮಾಡಿದೆ.

ಈ ಕುರಿತು ಪಾಲಿಕೆಯ ಮುಖ್ಯ ಆರೋಗ್ಯಾಧಿಕಾರಿ ಸಿರಾಜ್ ಅಹಮದ್ ಮದನಿ ಮಾತನಾಡಿ, ಮುಖ್ಯ ಆಯುಕ್ತರ ನಿರ್ದೇಶನದ ಮೇರೆಗೆ ಎಂಟು ಬಿಬಿಎಂಪಿ ವಲಯಗಳಲ್ಲಿ ಸಮೀಕ್ಷೆ ನಡೆಸಲಾಗಿದ್ದು, ಅಧಿಕಾರಿಗಳು ಅಂಗಡಿಗಳಿಗೆ ನೋಟಿಸ್ ಜಾರಿ ಮಾಡಿ, ನಿಯಮ ಪಾಲಿಸುವಂತೆ ಸೂಚಿಸಿದ್ದಾರೆ. ಫೆ.28ರ ನಂತರವೂ ನಿಯಮ ಪಾಲನೆ ಮಾಡದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.


ಎಲ್ಲಾ ಎಂಟು ವಲಯಗಳಲ್ಲಿರುವ ಸುಮಾರು 35 ಸಾವಿರ ಅಂಗಡಿ ಮಾಲೀಕರಿಗೆ ನೋಟಿಸ್ಗಳನ್ನು ನೀಡಲಾಗಿದೆ. ನೋಟಿಸ್ ಬಳಿಕವೂ ಆದೇಶವನ್ನು ಅನುಸರಿಸದ ಅಂಗಡಿಗಳನ್ನು ಬಂದ್ ಮಾಡಿಸುವುದು ಅಥವಾ ಲೈಸೆನ್ಸ್ ರದ್ದುಪಡಿಸುವ ಕುರಿತು ಎಚ್ಚರಿಕೆ ನೀಡಲಾಗಿದೆ ಎಂದು ತಿಳಿಸಿದರು.

**ಹೊಟೆಲ್ ಮಾಲೀಕರಲ್ಲಿ ಗೊಂದಲ**

ಬಿಬಿಎಂಪಿ ಆದೇಶ ಇದೀಗ ಹೊಟೆಲ್ ಮಾಲೀಕರಲ್ಲಿ ಗೊಂದಲಕ್ಕೆ ಕಾರಣವಾಗಿದ್ದು, ಕೇವಲ ಹೊರಗಿನ ಬೋರ್ಡ್‌ನಲ್ಲಿ ಕನ್ನಡ ಹಾಕಿದ್ರೆ ಸಾಕಾ..? ಅಥವಾ ಮೆನು ಬೋರ್ಡ್ ಕೂಡ ಬದಲಾವಣೆ ಮಾಡ್ಬೇಕಾ? ಅನ್ನೋ ಬಗ್ಗೆ ಹೋಟೆಲ್ ಮಾಲೀಕರ ಸಂಘ ಬಿಬಿಎಂಪಿಗೆ ಪತ್ರ ಬರೆದಿದೆ.

## ಜ. 22 ರಂದು ರಾಮ ಪ್ರಾಣ ಪ್ರತಿಷ್ಠಾಪನೆ: ಸರ್ಕಾರಿ ರಜೆ ಘೋಷಣೆ ಬಗ್ಗೆ ನಿರ್ಧಾರವಾಗಿಲ್ಲ: ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಅಯೋಧ್ಯೆಯಲ್ಲಿ ಜನವರಿ 22ರಂದು ನಡೆಯುವ ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆ ಸಮಾರಂಭ ಅಂದು ರಾಜ್ಯದಲ್ಲಿ ಸರ್ಕಾರಿ ರಜೆ ಘೋಷಿಸುವ ಬಗ್ಗೆ ಯಾವುದೇ ನಿರ್ಧಾರ ಕೈಗೊಂಡಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.



ಜನವರಿ 22 ರಂದು ರಜೆ ನೀಡಬೇಕೆಂಬ ಬಿಜೆಪಿಯ ಬೇಡಿಕೆ ಕುರಿತು ಪ್ರತಿಕ್ರಿಯಿಸಿದ ಸಿದ್ದರಾಮಯ್ಯ , ಮನವಿ ಪತ್ರವನ್ನು ಇನ್ನೂ ನೋಡಿಲ್ಲ. ನೋಡುತ್ತೇನೆ ಎಂದು ಅವರು ಸುದ್ದಿಗಾರರಿಗೆ ತಿಳಿಸಿದರು.

ರಾಮ ಪ್ರಾಣ ಪ್ರತಿಷ್ಠಾಪನೆ ದಿನದಿಂದು ರಾಜ್ಯದಲ್ಲಿ ರಜೆ ನೀಡಬೇಕೆಂದು ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಕೋಟಾ ಶ್ರೀನಿವಾಸ್ ಪೂಜಾರಿ ಮುಖ್ಯಮಂತ್ರಿಗೆ ಪತ್ರ ಬರೆದಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಕೂಡಾ ಇದೇ ಬೇಡಿಕೆಯನ್ನು ಮುಂದಿಟ್ಟಿದ್ದಾರೆ.

ಅಯೋಧ್ಯೆಗೆ ಹೋಗುತ್ತೀರಾ ಎಂಬ ಪ್ರಶ್ನೆಗೆ ಉತ್ತರಿಸಿದ ಸಿದ್ದರಾಮಯ್ಯ,‘ಇನ್ನೊಂದು ದಿನ ಅಲ್ಲಿಗೆ ಹೋಗುತ್ತೇನೆ ಎಂದು ಮೊದಲೇ ಹೇಳಿದ್ದೇನೆ. ನೀವು ಈ ಪ್ರಶ್ನೆಯನ್ನು ಏಕೆ ಪುನರಾವರ್ತಿಸುತ್ತೀರಿ’ ಎಂದು ಸುದ್ದಿಗಾರರನ್ನು ಕೇಳಿದರು.

ಈ ಮಧ್ಯೆ ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ವಿಜಯೇಂದ್ರ, ಕಿಷ್ಕಿಂಧಾ ಕ್ಷೇತ್ರವು ವಿಜಯನಗರ ಜಿಲ್ಲೆಯ ಹಂಪಿಯಲ್ಲಿರುವುದರಿಂದ ಶ್ರೀರಾಮನ ಸಂಬಂಧವನ್ನು ಗಮನದಲ್ಲಿಟ್ಟುಕೊಂಡು ಕರ್ನಾಟಕ ಸರ್ಕಾರ ಜನವರಿ 22 ರಂದು ರಜೆ ಘೋಷಿಸಲು ಪರಿಗಣಿಸಬೇಕು ಎಂದು ಹೇಳಿದರು. ರಾಮಾಯಣ ಮಹಾಕಾವ್ಯದ ಪ್ರಕಾರ, ಕಿಷ್ಕಿಂಧಾ ಕ್ಷೇತ್ರವು ವಾನರ ಸಾಮ್ರಾಜ್ಯವಾಗಿತ್ತು. ನೆರೆಯ ಕೊಪ್ಪಳ ಜಿಲ್ಲೆಯ ಅಂಜನಾದ್ರಿ ಬೆಟ್ಟವು ಶ್ರೀರಾಮನ ಕಟ್ಟಾ ಭಕ್ತ ಹನುಮಂತನ ಜನ್ಮಸ್ಥಳವಾಗಿತ್ತು.

"ಶ್ರೀರಾಮ ಮಂದಿರ ಉದ್ಘಾಟನೆ ಭಾರತಕ್ಕೆ ಮಾತ್ರವಲ್ಲದೆ ಪ್ರಪಂಚದಾದ್ಯಂತ ಐತಿಹಾಸಿಕ ಸಂದರ್ಭವಾಗಿದೆ, ಏಕೆಂದರೆ ಅನೇಕ ದೇಶಗಳು ಇದರ ಬಗ್ಗೆ ಸಂತೋಷಪಡುತ್ತಿವೆ. ಆಚರಣೆಗೆ ಅಡ್ಡಿಪಡಿಸುವ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ತಡೆಯಲು ರಾಜ್ಯ ಸರ್ಕಾರ ಎಚ್ಚೆತ್ತುಕೊಳ್ಳಬೇಕು ಎಂದು ವಿಜಯೇಂದ್ರ ಮನವಿ ಮಾಡಿದರು.

## ಖಾಸಗಿ ಕಂಪೆನಿಯ ರಜತ ಮಹೋತ್ಸವದಲ್ಲಿ ಅಪಘಾತ: ಸಿಇಓ ಸಾವು



ಹೈದರಾಬಾದ್: ಸಂಸ್ಥೆಯೊಂದರ ಬೆಳ್ಳಿ ಹಬ್ಬ ಸಂಭ್ರಮಾಚರಣೆ ವೇಳೆ ಸಂಭವಿಸಿದ ಅಪಘಾತದಲ್ಲಿ ಖಾಸಗಿ ಸಂಸ್ಥೆಯೊಂದರ ಸಿಇಓ (CEO) ಸಾವನ್ನಪ್ಪಿದ್ದು, ಮತ್ತೊಬ್ಬ ಅಧಿಕಾರಿ ಗಂಭೀರವಾಗಿ ಗಾಯಗೊಂಡ ಘಟನೆ ಹೈದರಾಬಾದ್ ನ ರಾಮೋಜಿ ಫಿಲ್ಮ್ ಸಿಟಿಯಲ್ಲಿ ನಡೆದಿದೆ. ಖಾಸಗಿ ಸಂಸ್ಥೆಯ ಬೆಳ್ಳಿ ಹಬ್ಬವನ್ನು ಗುರುವಾರ ಸಂಜೆ ಹೈದರಾಬಾದ್ ನ ರಾಮೋಜಿ ಫಿಲ್ಮ್ ಸಿಟಿಯಲ್ಲಿ ಆಯೋಜಿಸಲಾಗಿತ್ತು. ಇದರಲ್ಲಿ ಪಾಲ್ಗೊಳ್ಳಲು ಬಂದಿದ್ದ ಕಂಪೆನಿಯ ಸಿಇಓ ಸಂಜಯ್ ಷಾ ಮತ್ತು ಅವರ ಸಹೋದ್ಯೋಗಿ ಕಬ್ಬಿಣದ ಪಂಜರದೊಳಗೆ ಪ್ರವೇಶಿಸಿದರು. ಅದನ್ನು ಎತ್ತರದಿಂದ ಕೆಳಗೆ ಇಳಿಸಬೇಕಿತ್ತು. ಆಗ ಅದರ ಕಬ್ಬಿಣದ ಸರಪಳಿ ಒಂದು ಬದಿಯಲ್ಲಿ ಮುರಿದು ಇಬ್ಬರೂ ಕೆಳಗೆ ಬಿದ್ದಿದ್ದಾರೆ. ಗಂಭೀರ ಗಾಯಗೊಂಡ ಅವರನ್ನು ಆಸ್ಪತ್ರೆಗೆ ದಾಖಲಿಸಲಾಯಿತು. ಆದರೆ ಷಾ ಅವರು ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ. ಅವರ ಸಹೋದ್ಯೋಗಿಯ ಸ್ಥಿತಿ ಗಂಭೀರವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಕಂಪೆನಿಯ ಅಧಿಕಾರಿಯೊಬ್ಬರು ನೀಡಿದ ದೂರಿನ ಮೇರೆಗೆ ಫಿಲ್ಮ್ ಸಿಟಿ ಈವೆಂಟ್ ಮ್ಯಾನೇಜ್‌ಮೆಂಟ್ ಅಧಿಕಾರಿಗಳ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

## ಭಾರತ – ಮ್ಯಾನ್ಮಾರ್ ಗಡಿಯಲ್ಲೂ ಸೂಕ್ತ ಭದ್ರತೆ, ಮುಕ್ತ ಸಂಚಾರಕ್ಕೆ ಬ್ರೇಕ್: ಅಮಿತ್ ಶಾ

ಗುವಾಹಟಿ: ಭಾರತ – ಮ್ಯಾನ್ಮಾರ್ ಗಡಿಯಲ್ಲಿ ಜನರ ಮುಕ್ತ ಸಂಚಾರವನ್ನು ಸರ್ಕಾರ ತಡೆಯಲಿದೆ ಮತ್ತು ಬಾಂಗ್ಲಾದೇಶದಂತೆ ಮ್ಯಾನ್ಮಾರ್ ಗಡಿಯಲ್ಲೂ ಸೂಕ್ತ ಭದ್ರತೆ ಒದಗಿಸಲಾಗುವುದು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಶನಿವಾರ ಹೇಳಿದ್ದಾರೆ.

ಇಂದು ಅಸ್ಸಾಂ ಪೊಲೀಸ್ ಪಡೆಗೆ ಹೊಸದಾಗಿ ರಚಿಸಲಾದ ಐದು ಕಮಾಂಡೋ ಬೆಟಾಲಿಯನ್‌ಗಳ ಮೊದಲ ಬ್ಯಾಚ್‌ನ ಪಾಸಿಂಗ್ ಔಟ್ ಪರೇಡ್ ಉದ್ದೇಶಿಸಿ ಮಾತನಾಡಿದ ಅಮಿತ್ ಶಾ, ಮ್ಯಾನ್ಮಾರ್‌ನೊಂದಿಗೆ ಮುಕ್ತ–ಸಂಚಾರ ಸೌಲಭ್ಯವನ್ನು ಕೇಂದ್ರ ಸರ್ಕಾರ




ಮರುಪರಿಶೀಲಿಸುತ್ತಿದೆ ಎಂದು ತಿಳಿಸಿದರು.

ಭಾರತ–ಮ್ಯಾನ್ಮಾರ್ ಗಡಿಯಲ್ಲೂ ಬಾಂಗ್ಲಾದೇಶದ ಗಡಿಯಂತೆ ಸೂಕ್ತ ಭದ್ರತೆ ಒದಗಿಸಲಾಗುವುದು. ಭಾರತ ಸರ್ಕಾರವು ಮ್ಯಾನ್ಮಾರ್ ಜೊತೆಗಿನ ಮುಕ್ತ ಸಂಚಾರವನ್ನು ನಿಲ್ಲಿಸಲಿದೆ ಎಂದು ಅವರು ಹೇಳಿದರು.

ಕಳೆದ 10 ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ದೇಶದ ಕಾನೂನು ಮತ್ತು ಸುವ್ಯವಸ್ಥೆಯಲ್ಲಿ ಭಾರಿ ಬದಲಾವಣೆಯಾಗಿದೆ ಎಂದು ಅಮಿತ್ ಶಾ ತಿಳಿಸಿದರು.

ಕಾಂಗ್ರೆಸ್ ಅಧಿಕಾರಾವಧಿಯಲ್ಲಿ ಸರ್ಕಾರಿ ನೌಕರಿ ಪಡೆಯಲು ಜನರು ಲಂಚ ನೀಡಬೇಕಾಗಿತ್ತು ಎಂದು ಆರೋಪಿಸಿದ ಅವರು, ಬಿಜೆಪಿ ಆಡಳಿತದಲ್ಲಿ ಉದ್ಯೋಗಕ್ಕಾಗಿ ಒಂದು ಪೈಸೆಯೂ ನೀಡಬೇಕಾಗಿಲ್ಲ ಎಂದರು.

ಜನವರಿ 22 ರಂದು ಅಯೋಧ್ಯೆಯಲ್ಲಿ ರಾಮ ಮಂದಿರ ಉದ್ಘಾಟನಾ ಸಮಾರಂಭದ ಬಗ್ಗೆ ಮಾತನಾಡಿದ ಅಮಿತ್ ಶಾ, 550 ವರ್ಷಗಳ ನಂತರ ಭಗವಾನ್ ರಾಮ ತವರಿಗೆ ಮರಳುತ್ತಿದ್ದಾನೆಎಂದು ಹೇಳಿದರು.

# ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆ

## ಕಾರ್ಯಕ್ರಮಗಳ ಸಮರ್ಪಕ ಅನುಷ್ಠಾನಕ್ಕೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ

ಬೆಳಗಾವಿ: ಅಲ್ಪಸಂಖ್ಯಾತ ವರ್ಗಗಳ ಕಲ್ಯಾಣಕ್ಕಾಗಿ ರೂಪಿಸಲಾಗಿರುವ ಪ್ರಧಾನಮಂತ್ರಿಗಳ 15 ಹೊಸ ಅಂಶಗಳ ಕಾರ್ಯಕ್ರಮಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. ವಿನಾಕಾರಣ ನೆಪವೊಡ್ಡದೆ ನಿಗದಿತ ಅವಧಿಯೊಳಗೆ ಗುರಿ ಸಾಧಿಸಬೇಕು.

ಅಲ್ಪಸಂಖ್ಯಾತರ ಸಮುದಾಯಕ್ಕೆ ಶಿಕ್ಷಣ, ಕೌಶಲ್ಯ ಹಾಗೂ ಇತರೆ ಉದ್ಯೋಗಗಳಿಗೆ ತರಬೇತಿ ನೀಡಲು ಹೆಚ್ಚಿನ ಆದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶನಿವಾರ ನಡೆದ (ಜ.20) ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ಅವರು ಮಾತನಾಡಿದರು.

ವಿವಿಧ ಇಲಾಖೆಗಳು ಫಲಾನುಭವಿಗಳಿಗೆ ಯೋಜನೆಗಳ ಸೌಲಭ್ಯ ನೀಡಬೇಕಾದರೆ ಸ್ಥಳೀಯ ಶಾಸಕರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರನ್ನು ಆಹ್ವಾನಿಸಬೇಕು. ಇದರಿಂದ ಹೆಚ್ಚಿನ ಇಲಾಖಾ ಯೋಜನೆಗಳು ಪ್ರಾಚರವಾಗಲಿವೆ. ಅದರಂತೆ ಉಸ್ತುವಾರಿ ಸಚಿವರ ಜನ ಸ್ಪಂದನ ಕಾರ್ಯಕ್ರಮದಲ್ಲಿ ಸಚಿವರ ಮೂಲಕ ಯೋಜನೆಗಳನ್ನು ಜನರಿಗೆ ತಲುಪಿಸಬೇಕು ಎಂದು ಹೇಳಿದರು.

ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ವಿವಿಧ ಯೋಜನೆಗಳನ್ನು ಅರ್ಹರಿಗೆ ಸುಲಭ ರೀತಿಯಲ್ಲಿ ತಲುಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಶ್ರಮಿಸಬೇಕು ಎಂದು ತಿಳಿಸಿದರು.

**ಸಭೆಗೆ ಹಾಜರಾಗದ ಅಧಿಕಾರಿಗಳಿಗೆ ನೋಟಿಸ್ ಜಾರಿ:**

ತೋಟಗಾರಿಕೆ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹೆಸ್ಕಾಂ ಚಿಕ್ಕೋಡಿ ವಿಭಾಗ ಸೇರಿದಂತೆ ಕೆಲವು ಇಲಾಖೆಯ ಅಧಿಕಾರಿಗಳು ಸಭೆಗಳಿಗೆ ಹಾಜರಾಗುತಿಲ್ಲ. ಸಭೆಗಳಿಗೆ ಹಾಜರಾಗದ ಅಧಿಕಾರಿಗಳಿಗೆ ಕೂಡಲೇ ನೋಟಿಸ್ ಜಾರಿ ಮಾಡಲು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಸೂಚನೆ ನೀಡಿದರು.

**ಗುರಿ ಸಾಧನೆಗೆ ಸೂಚನೆ:**

ತೋಟಗಾರಿಕೆ ಇಲಾಖೆಯಿಂದ ವಿವಿಧ ಯೋಜನೆಗಳು ಸಮರ್ಪಕ ಬಳಕೆ ಆಗುತ್ತಿಲ್ಲ. ಯೋಜನೆಗಳ ಮಾಹಿತಿ ಜನರಿಗೆ ತಲುಪುತ್ತಿಲ್ಲ. ಅಧಿಕಾರಿಗಳು ಈ ಕುರಿತು ನಿರ್ಲಕ್ಷ್ಯ ತೋರಬಾರದು. ನಿಗದಿತ ಅವಧಿಯೊಳಗೆ ಗುರಿ ಸಾಧಿಸಬೇಕು ಎಂದು ಬೆಳಗಾವಿ ಉತ್ತರ ವಿಧಾನ ಸಭಾ ಮತ ಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ್ ಅವರು ಸೂಚಿಸಿದರು.



ಮೀನುಗಾರಿಕೆ ಇಲಾಖೆ ವತಿಯಿಂದ ಅಲ್ಪಸಂಖ್ಯಾತರ ಫಲಾನುಭವಿಗಳಿಗೆ ಬಲೆ ಹಾಗೂ ಇತ್ಯಾದಿ ಅಗತ್ಯ ಉಪಕರಣಗಳನ್ನು ನೀಡಲಾಗಿದೆ ಅದರ ಮಾಹಿತಿ ಕೂಡ ಇಲಾಖಾ ವೆಬ್ ಸೈಟ್ ಗಳಲ್ಲಿ ಪ್ರಕಟಿಸಲಾಗಿದೆ ಎಂದು ಮೀನುಗಾರಿಕೆ ಇಲಾಖೆಯ ಅಧಿಕಾರಿಗಳು ತಿಳಿಸಿದರು.

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ವತಿಯಿಂದ ಯುವಕರಿಗೆ ಉದ್ಯೋಗ ಅವಕಾಶ ಕಲ್ಪಿಸಲು, ಜಿಲ್ಲೆಯಲ್ಲಿ ಉದ್ಯೋಗ ಮೇಳಗಳನ್ನು ಆಯೋಜನೆ ಮಾಡಲಾಗುತ್ತಿದೆ. ಸುಮಾರು 30 ಅಲ್ಪಸಂಖ್ಯಾತರ ಯುವಕ ಯುವತಿಯರಿಗೆ ಈಗಾಗಲೇ ಉದ್ಯೋಗ ದೊರೆತಿವೆ. ವೃತಿ ಮಾರ್ಗದರ್ಶನ ಯೋಜನೆಯಡಿ ಸ್ಥಳೀಯ ಕಾಲೇಜುಗಲ್ಲಿ ಇಲಾಖೆಯಿಂದ ತರಬೇತಿ ನೀಡಲಾಗುತ್ತಿದೆ ಎಂದು ಸಂಬಂಧಿಸಿದ ಅಧಿಕಾರಿಗಳು ವಿವರಿಸಿದರು.

ಬೆಳಗಾವಿಯಲ್ಲಿ ಮಹಿಳಾ ಮತ್ತು ಪುರುಷರ ಐಟಿಐ ಕಾಲೇಜುಗಳಲ್ಲಿ ಮೀಸಲಾತಿ ಅನ್ವಯ ಈಗಾಗಲೇ ಪ್ರವೇಶ ನೀಡಲಾಗಿದೆ. ಅರ್ಜಿ ಸಲ್ಲಿಸಿದ ಎಲ್ಲ ಅಭ್ಯರ್ಥಿಗಳಿಗೆ ಪ್ರವೇಶಾತಿ ನೀಡಲಾಗುತ್ತಿದೆ.

ಮಹಿಳಾ ಐಟಿಐ ಕಾಲೇಜಿನಲ್ಲಿ ಕೂಡ ಈಗಾಗಲೇ 8 ಮುಸ್ಲಿಂ ಹಾಗೂ 13 ಜೈನ್ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಿ ನೀಡಲಾಗಿದೆ ಎಂದು ಅಧಿಕಾರಿಗಳು ವಿವರಿಸಿದರು.

ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಕ್ಕೆ ಬಹಳಷ್ಟು ಅರ್ಜಿ ಬಂದಿವೆ. ಸ್ಥಳೀಯ ಶಾಸಕರಿಂದ ಮಾಹಿತಿ ನೀಡಿ, ಕೂಡಲೇ ವಿವಿಧ ಯೋಜನೆಗಳಿಗೆ ಅರ್ಜಿ ಸಲ್ಲಿಸಿದ ಫಲಾನುಭವಿಗಳನ್ನು ಆಯ್ಕೆ ಮಾಡಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

**ಬ್ಯಾಂಕ್ ಅಧಿಕಾರಿಗಳನ್ನು ಸಂಪರ್ಕಿಸಿ ಅರ್ಹರಿಗೆ ಸಾಲ ಸೌಲಭ್ಯ ಒದಗಿಸಿ:**

ಡೇ–ನಲ್ಮ್ ಯೋಜನೆಯಡಿ ಅಲ್ಪಸಂಖ್ಯಾತರಿಗೆ ಈಗಾಗಲೇ ವಿವಿಧ ಸಾಲ ಸೌಲಭ್ಯ ಒದಗಿಸಲು ಬ್ಯಾಂಕ್ ಗಳಿಗೆ ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. ಆದರೆ 4 ಅರ್ಜಿಗಳಿಗೆ ಮಾತ್ರ ಬ್ಯಾಂಕ್ ನಿಂದ ಅಪ್ರೂವಲ್ ಆಗಿವೆ ಎಂದು ಮಹಾನಗರ ಪಾಲಿಕೆ ಅಧಿಕಾರಿಗಳು ಸಭೆಯಲ್ಲಿ ವಿವರಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಬ್ಯಾಂಕ್ ಗಳಿಗೆ ಖುದ್ದಾಗಿ ಸಂಪರ್ಕಿಸಿ ಅರ್ಜಿಗಳನ್ನು ಅಪ್ರೂವಲ್ ನೀಡಲು ಸೂಚಿಸಬೇಕು.

ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಅಲ್ಪಸಂಖ್ಯಾತರ ಸ್ವ ಸಹಾಯ ಗುಂಪುಗಳಿಗೆ ನೇರವಾಗಿ ಸಾಲ ಒದಗಿಸಬೇಕು.

ಸ್ವ–ಸಹಾಯ ಗುಂಪಿನ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಹಣ ಜಮಾ ಆಗುವವರೆಗೂ ಪಾಲಿಕೆ ಅಧಿಕಾರಿಗಳು ಜವಾಬ್ದಾರಿ ವಹಿಸಬೇಕು ಎಂದು ತಿಳಿಸಿದರು.

**ರೈತರಿಗೆ ಸಾಲ ಸೌಲಭ್ಯ:**

ಡಿಸಿಸಿ ಬ್ಯಾಂಕ್ ಮೂಲಕ 4 ಎಕರೆ ನೀರಾವರಿ ಜಮೀನು ಹೊಂದಿದ ರೈತರಿಗೆ 3% ಬಡ್ಡಿ ದರದಲ್ಲಿ ಟ್ರ್ಯಕ್ಟರ್ ಖರೀದಿಸಲು ಸಾಲ ನೀಡಲಾಗುವದು.

5 ಲಕ್ಷದ ವರೆಗೆ ಶೂನ್ಯ ಬಡ್ಡಿ ದರದಲ್ಲಿ ಅಲ್ಪಾವಧಿ ಬೆಳೆ ಸಾಲ ನೀಡಲಾಗುವದು ಎಂದು ಡಿಸಿಸಿ ಬ್ಯಾಂಕ್ ಜಿಲ್ಲಾ ವ್ಯವಸ್ಥಾಪಕ ಕಲಂದಾರ ತಿಳಿಸಿದರು.

ಸಹಕಾರ ಇಲಾಖೆಯಿಂದ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ 53 ಜನರಿಗೆ ಈಗಾಗಲೇ ದೀರ್ಘಾವಧಿ ಸಾಲ ನೀಡಲಾಗಿದೆ. ನೀರಾವರಿ ಜಮೀನು ಹೊಂದಿದ ರೈತರಿಗೆ ಶೇಕಡಾ 3% ಬಡ್ಡಿ ದರದಲ್ಲಿ 15 ಲಕ್ಷದ ವರೆಗೆ ಸಾಲ ನೀಡಲಾಗುವದು ಎಂದು ಸಹಕಾರ ಇಲಾಖೆ ಅಧಿಕಾರಿಗಳು ಹೇಳಿದರು.

ಅದೇ ರೀತಿಯಲ್ಲಿ ಪಶುಪಾಲನಾ ಇಲಾಖೆಯಿಂದ ಮುಖ್ಯಮಂತ್ರಿ ಅಮೃತ್ ಜೀವನ ಯೋಜನೆಯಡಿ ಹೈನುಗಾರಿಕೆ ಘಟಕ ಸ್ಥಾಪಿಸಲು ಈಗಾಗಲೇ ಸಹಾಯಧನ, ಸಾಲ ಸೌಲಭ್ಯ ನೀಡಲಾಗಿದೆ ಎಂದು ಸಂಬಂಧಿಸಿದ ಅಧಿಕಾರಿಗಳು ವಿವರಿಸಿದರು.

ವಿವಿಧ ಬ್ಯಾಂಕ್ ಗಳ ಬಡ್ಡಿ ದರ ಹಾಗೂ ವಿವಿಧ ಯೋಜನೆಗಳ ಸಾಲ ಸೌಲಭ್ಯ ಮಾಹಿತಿ ಕುರಿತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿಯ ನೋಟಿಸ್ ಬೋರ್ಡ್ ನಲ್ಲಿ ಮಾಹಿತಿ ನಮೂದಿಸಬೇಕು ಇದರಿಂದ ಇಲಾಖೆಯ ಯೋಜನೆಗಳ ಸೌಲಭ್ಯ ಕೋರಿ ಬರುವ ಜನರಿಗೆ ಸಹಾಯ ಆಗಲಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ನಿರ್ದೇಶನ ನೀಡಿದರು.

ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿ ಅಬ್ದುಲ್ ರಶೀದ್ ಮಿರ್ಜನ್ನವರ, ಜಿಲ್ಲಾ ನಗರಾಭಿವೃದ್ಧಿ ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ ಕಲಾದಗಿ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಗಂಗಾಧರ, ಲೀಡ್ ಬ್ಯಾಂಕ್ ಮ್ಯಾನೇಜರ್ ಪ್ರಶಾಂತ ಕುಲಕರ್ಣಿ, ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಕೆಆರ್‌ಎನ್ ಹೀಟ್ ಎಕ್ಸ್ಚೇಂಜರ್ ರೆಫ್ರಿಜರೇಶನ್ ನಿಂದ ಸೆಬಿಗೆ ವಿವರಣೆ ಸಲ್ಲಿಕೆ

ಹುಬ್ಬಳ್ಳಿ: ಕೆಆರ್‌ಎನ್ ಹೀಟ್ ಎಕ್ಸ್‌ಚೇಂಜರ್ ಅಂಡ್ ರೆಫ್ರಿಜರೇಶನ್ ಲಿಮಿಟೆಡ್, ಹೀಟ್ ವೆಂಟಿಲೇಶನ್ ಏರ್ ಕಂಡೀಷನಿಂಗ್ ಮತ್ತು ರೆಫ್ರಿಜರೇಶನ್ ಇಂಡಸ್ಟ್ರಿ ಗಾಗಿ ಫಿನ್ ಮತ್ತು ಟ್ಯೂಬ್ ಪ್ರಕಾರದ ಶಾಖ ವಿನಿಮಯಕಾರಕಗಳ ತಯಾರಕರು ಐಪಿಓ (ಆರಂಭಿಕ ಸಾರ್ವಜನಿಕ ಕೊಡುಗೆ) ಗಾಗಿ ಜ. 16 ರಂದು ಸೆಬಿ ಗೆ ಕರಡು ವಿವರಣಾ ಪುಸ್ತಿಕೆ ಸಲ್ಲಿಸಿದ್ದಾರೆ.

ಈ ಕೊಡುಗೆಯು ರೂ 10/– ಮುಖಬೆಲೆಯ 1,93,05,000 ಈಕ್ವಿಟಿ ಷೇರುಗಳವರೆಗಿನ ತಾಜಾ ಸಂಚಿಕೆಗಳನ್ನು ಒಳಗೊಂಡಿದೆ. ಕಂಪನಿಯು ತನ್ನ ಸಂಪೂರ್ಣ ಸ್ವಾಮ್ಯದ ಅಂಗಸಂಸ್ಥೆಯಾದ ಕೆಆರ್‌ಎನ್ ಹೆಚ್‌ವಿಎಸಿ ಪ್ರಾಡಕ್ಟ್ಸ್ ಪ್ರೈವೇಟ್ ಲಿಮಿಟೆಡ್‌ನಲ್ಲಿ ಹೂಡಿಕೆಯ ಕಡೆಗೆ IPO ನಿಂದ ನಿವ್ವಳ ಆದಾಯವನ್ನು ಬಳಸಲು ಪ್ರಸ್ತಾಪಿಸುತ್ತದೆ, ರಾಜಸ್ಥಾನದ ನೀಮ್ರಾನಾ, ಅಲ್ವಾರ್ ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿ ಹೊಸ ಉತ್ಪಾದನಾ ಸೌಲಭ್ಯ ಸ್ಥಾಪಿಸಲು ಈ ಹೂಡಿಕೆ ಬಳಿಸಿಕೊಳ್ಳಲಿದೆ.

ಇದು ಉತ್ಪಾದಿಸುವ ಶಾಖ ವಿನಿಮಯಕಾರಕ ಟ್ಯೂಬ್‌ಗಳ ವ್ಯಾಸವು 5 ಎಂಎಂನಿಂದ 15.88 ಎಂಎಂ ವರೆಗೆ ಇರುತ್ತದೆ. ಕಂಪನಿಯ ಉತ್ಪನ್ನಗಳು ವ್ಯಾಪಕ ಶ್ರೇಣಿಯ ಹವಾನಿಯಂತ್ರಣ, ತಾಪನ ಮತ್ತು ವಾತಾಯನ, ಶೈತ್ಯೀಕರಣ ಮತ್ತು ಪ್ರಕ್ರಿಯೆ ಕೂಲಿಂಗ್ ಅಪ್ಲಿಕೇಶನ್‌ಗಳಿಗೆ ಸೂಕ್ತವಾಗಿವೆ. ಸಂಪೂರ್ಣ ಉತ್ಪಾದನಾ ಕಾರ್ಯಾಚರಣೆಗಳನ್ನು ರಾಜಸ್ಥಾನದ ನೀಮ್ರಾನಾ, ರಿಕೋ ಕೈಗಾರಿಕಾ ಪ್ರದೇಶದಲ್ಲಿ ನೆಲೆಗೊಂಡಿರುವ 2 ಕೈಗಾರಿಕಾ ಪ್ಲಾಟ್‌ಗಳನ್ನು ಒಳಗೊಂಡಿರುವ ಏಕೀಕೃತ ಉತ್ಪಾದನಾ ಸೌಲಭ್ಯದಲ್ಲಿ ಕೈಗೊಳ್ಳಲಾಗುತ್ತದೆ.

ಕೆಆರ್‌ಎನ್ ಶಾಖ ವಿನಿಮಯಕಾರಕ ಮತ್ತು ರೆಫ್ರಿಜರೇಶನ್ ಲಿಮಿಟೆಡ್ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಸಂತೋಷ್ ಕುಮಾರ್ ಯಾದವ್ ನೇತೃತ್ವದಲ್ಲಿದೆ. ಯಾದವ್ ಅವರು ಘಾಜಿಯಾಬಾದ್‌ನ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಟೆಕ್ನಾಲಜಿಯಿಂದ ಎಂಬಿಎ ಪದವೀಧರ ಆಗಿದ್ದಾರೆ ಮತ್ತು ರಾಜಸ್ಥಾನದ ತಾಂತ್ರಿಕ ಶಿಕ್ಷಣ ಮಂಡಳಿಯಿಂದ ಮೆಕ್ಯಾನಿಕಲ್ ಇಂಜಿನಿಯರಿಂಗ್‌ನಲ್ಲಿ ಡಿಪ್ಲೋಮಾ ಮಾಡಿದ್ದಾರೆ.

ಶಾಖ ವಿನಿಮಯಕಾರಕಗಳು ಮತ್ತು ಶೈತ್ಯೀಕರಣ ಘಟಕಗಳ ತಯಾರಿಕೆಯಲ್ಲಿ 19 ವರ್ಷಗಳ ಶ್ರೀಮಂತ ಅನುಭವ ಹೊಂದಿರುವ ಯಾದವ್ ಅವರು ಅಸಾಧಾರಣ ಕಾರ್ಯಾಚರಣೆಯ ಕೌಶಲ್ಯಗಳನ್ನು ಸತತವಾಗಿ ಪ್ರದರ್ಶಿಸಿದ್ದಾರೆ.

ವ್ಯವಹಾರವನ್ನು ವಿಸ್ತರಿಸಲು ಕಂಪನಿಯು ತನ್ನ ಅಸ್ತಿತ್ವದಲ್ಲಿರುವ ಪೋರ್ಟ್‌ಫೋಲಿಯೊದಲ್ಲಿ ಮೌಲ್ಯವರ್ಧಿತ ಉತ್ಪನ್ನಗಳನ್ನು ಹೆಚ್ಚಿಸಲು ಕೆಆರ್‌ಎನ್ ಹೆಚ್‌ವಿಎಸಿ ಪ್ರಾಡಕ್ಟ್ಸ್ ಪ್ರೈವೇಟ್ ಲಿಮಿಟೆಡ್ ಎಂಬ ಸಂಪೂರ್ಣ ಸ್ವಾಮ್ಯದ ಅಂಗಸಂಸ್ಥೆಯನ್ನು ಸಂಯೋಜಿಸಿದೆ.

ಹೊಲಾನಿ ಕನ್ಸಲ್ಟೆಂಟ್ಸ್ ಪ್ರೈವೇಟ್ ಲಿಮಿಟೆಡ್ ಈ ಸಮಸ್ಯೆಯ ಪುಸ್ತಕ ರನ್ನಿಂಗ್ ಲೀಡ್.

## ಪರಿಹಾರ ಮೊತ್ತ ಪಾವತಿಸುವಂತೆ ಇನ್ಶೂರೆನ್ಸ್ ಕಂಪೆನಿಗೆ ಆದೇಶ

ಶಿವಮೊಗ್ಗ: ಜಿಲ್ಲೆಯ ಭದ್ರಾವತಿ ತಾಲೂಕಿನ ಅಪೂರ್ವಾ ಎಂಬುವವರು ಭದ್ರಾವತಿಯ ಕೆನರಾ ಬ್ಯಾಂಕ್ ಮ್ಯಾನೇಜರ್ ಮತ್ತು ಕೆನರಾ ಎಚ್.ಎಸ್.ಬಿ.ಸಿ.–ಓ.ಬಿ.ಸಿ. ಲೈಫ್ ಇನ್ಶೂರೆನ್ಸ್ ಕಂ. ಹುಬ್ಬಳ್ಳಿ, ಕೆನರಾ ಎಚ್.ಎಸ್.ಬಿ.ಸಿ.–ಓ.ಬಿ.ಸಿ. ಲೈಫ್ ಇನ್ಶೂರೆನ್ಸ್ ಕಂ. ಗೋರ್ಗಾಂ, ಹರಿಯಾಣ ಮತ್ತು ಕೆನರಾ ಎಚ್.ಎಸ್.ಬಿ.ಸಿ.–ಓ.ಬಿ.ಸಿ. ನ್ಯೂಡೆಲ್ಲಿ ಎಂಬ ನಾಲ್ಕು ಜನರ ವಿರುದ್ದ ಸೇವಾನ್ಯೂನ್ಯತೆ ಕುರಿತು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮುಂದೆ ಜಿ.ಪಿ.ಎ.ಹೋಲ್ಡರ್ ಮೂಲಕ ದಾಖಲಿಸಿದ್ದ ಪ್ರಕರಣದಲ್ಲಿ ಅರ್ಜಿದಾರರಿಗೆ ವಿಮಾ ಮೊತ್ತ ನೀಡುವಂತೆ ಆಯೋಗದ ಪೀಠ ಆದೇಶಿಸಿದೆ.

ಅರ್ಜಿದಾರರು ಬಿ.ಇ. ವಿದ್ಯಾರ್ಥಿನಿ ಆಗಿದ್ದು, ಕೆನರಾ ಎಚ್.ಎಸ್.ಬಿ.ಸಿ.–ಓ.ಬಿ.ಸಿ. ಲೈಫ್ ಇನ್ಶೂರೆನ್ಸ್ ಕಂ.ಇವರಿಂದ ಶೈಕ್ಷಣಿಕ ಸಾಲವನ್ನು ಪಡೆದಿದ್ದು, ಸಾಗದ ಭದ್ರತೆಗಾಗಿ ಪಾಲಿಸಿ ಪಡೆದಿರುತ್ತಾರೆ. 5 ವರ್ಷಗಳ ನಂತರ ಪಾಲಿಸಿ ಮೊತ್ತವನ್ನು ಸೌಲಭ್ಯದೊಂದಿಗೆ ಹಿಂತಿರುಗಿಸುವಂತೆ ಕೇಳಿದಾಗ ವಿಮಾ ಪಾಲಿಸಿಯು ಲ್ಯಾಪ್ಸ್ ಕಂಡಿಶನ್ನಲ್ಲಿ ಇದೆ ಎಂದು ತಿಳಿಸಿ, ಸಲ್ಲಬೇಕಾದ ವಿಮಾ ಸೌಲಭ್ಯವನ್ನು ಒದಗಿಸಲು ನಿರಾಕರಿಸುತ್ತಾರೆ.

ಗ್ರಾಹಕರ ಆಯೋಗವು ಪ್ರಕರಣವನ್ನು ಕೂಲಂಕಷವಾಗಿ ಪರಿಶೀಲಿಸಿ, ಫಿರ್ಯಾದಿದಾರರು ಹಾಜರುಪಡಿಸಿದ ಎಲ್ಲ ದಾಖಲೆಗಳನ್ನು ಪರಿಶೀಲಿಸಿ ಎದುರುದಾರ ವಿಮಾಕಂಪೆನಿ ನಿರಾಕರಣೆಯು ಸೇವಾನ್ಯೂನ್ಯತೆಯಿಂದ ಕೂಡಿರುತ್ತದೆ ಎಂದು ತೀರ್ಮಾನಿಸಿ ಪ್ರಕರಣವನ್ನು ಭಾಗಶಃ ಪುರಸ್ಕರಿಸುತ್ತದೆ.

ವಿಮಾ ಕಂಪೆನಿಯು ಈ ಆದೇಶವಾದ 45 ದಿನಗಳೊಳಗಾಗಿ ಅರ್ಜಿದಾರರು ಪಾಲಿಸಿಯ ಪ್ರಿಮಿಯಮ್ಗೋಸ್ಕರ ಪಾವತಿಸಿದ ರೂ. 1,04,906/– ಗಳನ್ನು ಪಾಲಿಸಿಯ ಪ್ರಯೋಜನಗಳೊಂದಿಗೆ ವಾರ್ಷಿಕ ಶೇ.10 ಬಡ್ಡಿ ಸಮೇತ ಪಾವತಿಸತಕ್ಕದ್ದು ಮತ್ತು ರೂ.25,000 ಗಳನ್ನು ಮಾನಸಿಕ ಹಾನಿಗೆ ಪರಿಹಾರವಾಗಿ, ರೂ.5,000 ಗಳನ್ನು ವ್ಯಾಜ್ಯದ ಖರ್ಚು ವೆಚ್ಚಗಳ ಬಾಬ್ತು ಪಾವತಿಸಬೇಕೆಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಟಿ.ಶಿವಣ್ಣ, ಸದಸ್ಯರಾದ ಸವಿತಾ ಬಿ ಪಟ್ಟಣಶೆಟ್ಟಿ, ಬಿ.ಡಿ.ಯೋಗಾನಂದ ಭಾಂಡ್ಯ ಇವರ ಪೀಠವು ದಿ: 11–01–2024 ರಂದು ಆದೇಶಿಸಿರುತ್ತದೆ.

## ಆಕಾಶವಾಣಿ ಕೇಂದ್ರಕ್ಕೆ 10 ಕಿಲೋ ವ್ಯಾಟ್ ಸಿಕ್ಕಿರುವುದು ಮಲೆನಾಡಿಗೆ ಸಿಕ್ಕ ಗೌರವ: ಸಂಸದ ಬಿವೈ ರಾಘವೇಂದ್ರ

ಶಿವಮೊಗ್ಗ: ಪ್ರಸಾರ ಭಾರತಿ ವತಿಯಿಂದ ಭದ್ರಾವತಿ ಆಕಾಶವಾಣಿಯಲ್ಲಿ 10 ಕಿಲೋ ವ್ಯಾಟ್ ಎಫ್.ಎಂ ಪ್ರಸರಣ ಕೇಂದ್ರ ಶಿಲಾನ್ಯಾಸ ಕಾರ್ಯಕ್ರಮಕ್ಕೆ ವರ್ಚುವಲ್ ವಿಡಿಯೋ ಮೂಲಕ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಿದರು.

ಶಿವಮೊಗ್ಗ ನಗರದ ವಿದ್ಯಾನಗರದಲ್ಲಿರುವ ದೂರದರ್ಶನ ಕೇಂದ್ರದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಸಂಸದರಾದ ಬಿ.ವೈ. ರಾಘವೇಂದ್ರ ಅವರು ಮಾತನಾಡಿ, ಶಿವಮೊಗ್ಗ ನಗರದ ಜನತೆಯ ಬಹುದಿನದ ಬೇಡಿಕೆ ಆಗಿದ್ದ ಎಫ್.ಎಂ ಕೇಂದ್ರ 10 ವ್ಯಾಟ್ ನ ಎಫ್.ಎಂ ಕೇಂದ್ರವಾಗಿ ವಿಸ್ತರಣೆ ಹೊಂದಿದೆ.

1 ಕಿಲೋ ವ್ಯಾಟ್ ಇದ್ದ ಶಿವಮೊಗ್ಗ ಭದ್ರಾವತಿ ಕೇಂದ್ರಕ್ಕೆ 10 ಕಿಲೋ ವ್ಯಾಟ್ ಸಿಕ್ಕಿರುವುದು ಮಲೆನಾಡಿಗೆ ಸಿಕ್ಕ ಗೌರವ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಪ್ರಸ್ತುತ ಶಿವಮೊಗ್ಗ ಮತ್ತು ಭದ್ರಾವತಿ ವ್ಯಾಪ್ತಿಯಲ್ಲಿ ಆಕಾಶವಾಣಿ ಮತ್ತು ಎಫ್.ಎಂ ರೇಡಿಯೋ ಸುಮಾರು 1 ಕೆವಿ ಸಾಮರ್ಥ್ಯ



ಟ್ರಾನ್ಸ್ಮಿಟರ್ ಮೂಲಕ ಕಾರ್ಯನಿರ್ವಹಿಸುತ್ತಿದ್ದು, ಉನ್ನತೀಕರಣದ ನಂತರ ಇದರ ವ್ಯಾಪ್ತಿ ಶಿವಮೊಗ್ಗ, ಚಿಕ್ಕಮಗಳೂರು, ದಾವಣಗೆರೆ ,ಉತ್ತರ ಕನ್ನಡ, ಉಡುಪಿ ಸೇರಿದಂತೆ ಅಕ್ಕಪಕ್ಕದ 8 ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸಲು ಸಹಕಾರಿಯಾಗಲಿದೆ.

ಇದರ ಪೂರ್ಣಪ್ರಮಾಣದ ಕಾರ್ಯಾರಂಭವಾದ ಮೇಲೆ ನಾವು ಕಾರ್ನಲ್ಲಿ ಪ್ರಯಾಣಿಸು ಘುಣಡುವಾಗ ಶಿವಮೊಗ್ಗದ ಯಾವುದೇ ಮೂಲೆಗೆ ಸಮಾರು 150 ಕಿಲೋ ಮೀಟರವರೆಗೆ ರೇಡಿಯೋ ಕೇಳಿಕೊಂಡು ಹೋಗಬಹುದು.

ರಾಜಧಾನಿ ಬೆಂಗಳೂರು ಹೊರತುಪಡಿಸಿ ರಾಜ್ಯದಲ್ಲಿ ಅತ್ಯಧಿಕ ಸಾಮರ್ಥ್ಯದ ಟ್ರಾನ್ಸ್ಮಿಟರ್ ಅಳವಡಿಕೆ ಕಾರ್ಯ ನಮ್ಮ ಶಿವಮೊಗ್ಗದಲ್ಲಿ ಆಗುತ್ತಿರುವುದು ನಮಗೆಲ್ಲ ಹೆಮ್ಮೆ ಹಾಗೂ ಸಂತೋಷ ತರುವ ವಿಚಾರವಾಗಿದೆ ಎಂದರು.

ಆಕಾಶವಾಣಿಗೆ 59 ವರ್ಷ ತುಂಬಿದ್ದು ಇಳಿ ವಯಸ್ಸಿನಲ್ಲಿ ಯೌವನ ಬಂದಿದೆ. ಪ್ರಧಾನಿ ಮೋದಿ ಅವರ ದೂರದೃಷ್ಟಿ ನಾಯಕತ್ವವು ನಮ್ಮ ಮಲೆನಾಡಿನ ಅಭಿವೃದ್ಧಿಗೆ ಸಹಕಾರಿಯಾಗಿದೆ.

ಈ ಯೋಜನೆಗೆ ರೂ. 10 ಕೋಟಿ ಅನುದಾನ ನೀಡಲಾಗಿದ್ದು ಅನುಗಣ್ಣದ ನಂತರ ತುಮಕೂರುವರೆಗೂ ರೇಡಿಯೋ ಸೇವೆ ದೊರೆಯಲಿದೆ.

ಮೊಬೈಲ್ ನಲ್ಲೂ ಇಂಟರ್ನೆಟ್ ಇಲ್ಲದೆ ಬಳಸಬಹುದು. ನಮ್ಮ ಮಲೆನಾಡಿನ ಗ್ರಾಮೀಣ ಮಕ್ಕಳ ಪ್ರತಿಭೆ ಅನಾವರಣಕ್ಕೆ ಸಹ ಸಹಕಾರಿ ಆಗಲಿದ್ದು ಮುಂದಿನ ದಿನಗಳಲ್ಲಿ ಭಾರತದಲ್ಲಿ ಅತೀ ದೊಡ್ಡ ಎಫ್ ಎಂ ಕೇಂದ್ರ ಆಗಲಿದೆ ಎಂದು ವಿಶ್ವಾಸವನ್ನು ವ್ಯಕ್ತಪಡಿಸಿದರು.

ಭದ್ರಾವತಿ ಆಕಾಶವಾಣಿ ಸ್ಟುಡಿಯೋವನ್ನು ಮೇಲ್ದರ್ಜೆಗೇರಿಸಲಾಗುವುದು. ಈ ರೀತಿಯ ಯೋಜನೆಯನ್ನು ನೀಡಿದ ಪ್ರಧಾನಿ ನರೇಂದ್ರ ಮೋದಿ ಅವರಿಗೆ, ಕೇಂದ್ರದ ಮಂತ್ರಿಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ವಿಧಾನ ಪರಿಷತ್ ಶಾಸಕರಾದ ರುದ್ರೇಗೌಡರು ಮಾತನಾಡಿ, ನಮ್ಮ ಹೆಮ್ಮೆಯ ಪ್ರಧಾನ ಮಂತ್ರಿಗಳು ಈ ದೇಶದಲ್ಲಿ ಅಧಿಕಾರ ವಹಿಸಿಕೊಂಡ ನಂತರ ದೇಶದ ಅಭಿವೃದ್ಧಿ ಚಿಂತನೆಯೊಂದಿಗೆ ಈ ರೀತಿಯ ಅನೇಕ ಯೋಜನೆಯನ್ನು ನೀಡಿದ್ದಾರೆ. ಸಂಸದ ಬಿ.ವೈ. ರಾಘವೇಂದ್ರ ಅವರು ಎಲ್ಲಾ ಕ್ಷೇತ್ರದಲ್ಲಿ ಅಭಿವೃದ್ಧಿ ಮಾಡಿದ್ದಾರೆ.

ಭದ್ರಾವತಿ ಆಕಾಶವಾಣಿ ಕೇಂದ್ರದ ಮುಖ್ಯಸ್ಥರಾದ ಎಸ್ ಆರ್ ಭಟ್ ಅವರು ಮಾತನಾಡಿ ನಮ್ಮ ಆಕಾಶವಾಣಿಗೆ ಹೊಸ ಹುರುಪು ಬರುತ್ತಿದೆ. ಈ ನಿಟ್ಟಿನಲ್ಲಿ ಸಂಸದ ಬಿ.ವೈ ರಾಘವೇಂದ್ರ ಅವರ ಶ್ರಮ ಅತ್ಯಂತ ಅಮೂಲ್ಯವಾದದ್ದು ಎಂದು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಶಿವಮೊಗ್ಗ ಶಾಸಕರಾದ ಎಸ್.ಎನ್ ಚನ್ನಬಸಪ್ಪ, ವಿಧಾನ ಪರಿಷತ್ ಸದಸ್ಯರಾದ ಅರುಣ್ ಬಿಜೆಪಿ ಶಿವಮೊಗ್ಗ ನಗರ ಅಧ್ಯಕ್ಷರಾದ ಜಗದೀಶ್ ಸೇರಿದಂತೆ ಪಕ್ಷದ ಅನೇಕ ಮುಖಂಡರು ಮತ್ತು ಗಣ್ಯರು ಉಪಸ್ಥಿತರಿದ್ದರು.

## ರಾಮ ಮಂದಿರ ಉದ್ಘಾಟನೆ ದಿನ 'ಬೃಹತ್ ಹನುಮ ಪಾದಯಾತ್ರೆ' ಕೈಗೊಂಡ ಚಿಕ್ಕೋಡಿ ಕಾಂಗ್ರೆಸ್ ಶಾಸಕ



ಬೆಳಗಾವಿ: ರಾಮ ಮಂದಿರ ಸಮಾರಂಭದಿಂದ ದೂರ ಉಳಿಯಲು ಕಾಂಗ್ರೆಸ್ ನಿರ್ಧರಿಸಿದೆ. ಇದರ ಬೆನ್ನಲ್ಲೇ ಅದೇ ದಿನದಂದು ಹನುಮ ಭಕ್ತರ ಜೊತೆ ಬೃಹತ್ ಪಾದಯಾತ್ರೆ ಮಾಡಲು ಕಾಂಗ್ರೆಸ್ ಶಾಸಕ ಗಣೇಶ್ ಹುಕ್ಕೇರಿ ಮುಂದಾಗಿದ್ದಾರೆ.

ಬೆಳಗಾವಿಯ ಚಿಕ್ಕೋಡಿ–ಸದಲಗಾ ಕ್ಷೇತ್ರದ ಶಾಸಕ ಗಣೇಶ್ ಹುಕ್ಕೇರಿಯವರು ಯಕ್ಸಂಭಾ ಪಟ್ಟಣದ ಹನುಮಾನ್ ಮಂದಿರದಿಂದ ತೋರಣಹಳ್ಳಿ ಗ್ರಾಮದ ಹನುಮ ಮಂದಿರದವರೆಗೆ ಪಾದಯಾತ್ರೆ ಕೈಗೊಂಡಿದ್ದಾರೆ. ಬಳಿಕ ಗ್ರಾಮದಲ್ಲಿ 25 ಲಕ್ಷ ರೂಪಾಯಿ ವೆಚ್ಚದಲ್ಲಿ ಮಾರುತಿ ದೇವಸ್ಥಾನದ ಜೀರ್ಣೋದ್ಧಾರ ಕಾಮಗಾರಿಗೆ ಚಾಲನೆ ನೀಡಲಿದ್ದಾರೆ.

ಫೇಸ್ಬುಕ್ನಲ್ಲಿ ಪೋಸ್ಟ್ ಶೇರ್ ಮಾಡಿರುವ ಶಾಸಕರು, ಯಕ್ಸಂಭಾ ಪಟ್ಟಣದ ಹನುಮಾನ್ ಮಂದಿರದಿಂದ ತೋರಣಹಳ್ಳಿ ಗ್ರಾಮದ ಮಾರುತಿ ದೇವಸ್ಥಾನದವರೆಗೆ ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ. ಹನುಮ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದ್ದಾರೆ.

## ರಾಮ ಲಲ್ಲಾ ಪ್ರಾಣ ಪ್ರತಿಷ್ಠಾಪನೆಗೆ ಕ್ಷಣಗಣನೆ: ರಾಜ್ಯದ ವಿವಿಧ ಮಠಾಧಿಪತಿಗಳು ಬಾಗಿ

ಅಯೋಧ್ಯೆ: ರಾಮಜನ್ಮಭೂಮಿಯಲ್ಲಿ ರಾಮ ಲಲ್ಲಾ ಮೂರ್ತಿಯ ಪ್ರಾಣ ಪ್ರತಿಷ್ಠಾಪನೆಗೆ ಕ್ಷಣಗಣನೆ ಶುರುವಾಗಿದೆ. ದೈವಿಕ ನಗರಿ ಅಯೋಧ್ಯೆ ರಾಮಮಂದಿರದ ಉದ್ಘಾಟನೆಯ ಸಂಭ್ರಮದಲ್ಲಿ ತೇಲುತ್ತಿದೆ. ರಾಮನೂರಿಗೆ ಇಡೀ ದೇಶದ ಸಾಧು, ಸಂತರು, ಧಾರ್ಮಿಕ ಮುಖಂಡರ ಆಗಮನವಾಗುತ್ತಿದೆ.

ಜ. 22ರಂದು ಅಯೋಧ್ಯೆಯಲ್ಲಿ ರಾಮಮಂದಿರದ ಲೋಕಾರ್ಪಣೆ ನೆರವೇರಲಿದೆ. ಈ ಸಮಾರಂಭದ ಹಿನ್ನೆಲೆಯಲ್ಲಿ ಅಯೋಧ್ಯೆಗೆ ಕರ್ನಾಟಕದ ವಿವಿಧ ಮಠಗಳ ಪೀಠಾಧಿಪತಿಗಳು ಆಗಮಿಸಿದ್ದಾರೆ. ರಾಮಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಆಹ್ವಾನದ ಹಿನ್ನೆಲೆಯಲ್ಲಿ ಚಿತ್ರದುರ್ಗ



ಮತ್ತು ದಾವಣಗೆರೆ ಜಿಲ್ಲೆಯಿಂದ ಪ್ರಮುಖ ಮಠಾಧೀಶರು ಈಗಾಗಲೇ ಅಯೋಧ್ಯೆಯನ್ನು ತಲುಪಿದ್ದಾರೆ.

ಕಾಗಿನೆಲೆ ಮಹಾ ಸಂಸ್ಥಾನ ಕನಕ ಗುರುಪೀಠದ ಜಗದ್ಗುರು ಶ್ರೀ ನಿರಂಜನಾನಂದ ಮಹಾಸ್ವಾಮೀಜಿ, ಚಿತ್ರದುರ್ಗದ ಮಾದರ ಚನ್ನಯ್ಯ ಗುರುಪೀಠದ ಜಗದ್ಗುರು ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಮಹಾಸ್ವಾಮೀಜಿ, ಹೊಸದುರ್ಗದ ಶ್ರೀ ಜಗದ್ಗುರು ಕುಂಚಿಟಿಗ ಮಹಾಸಂಸ್ಥಾನ ಮಠದ ಜಗದ್ಗುರು ಶ್ರೀ ಶಾಂತವೀರ ಮಹಾಸ್ವಾಮೀಜಿ, ಸಿದ್ದರಾಮೇಶ್ವರ ಮಹಾ ಸಂಸ್ಥಾನ ಭೋವಿ ಗುರುಪೀಠದ ಜಗದ್ಗುರು ಶ್ರೀ ಇಮ್ಮಡಿ ಸಿದ್ದರಾಮಯ್ಯ ಮಹಾಸ್ವಾಮೀಜಿ, ಹರಿಹರದ ಶ್ರೀ ವಾಲ್ಮೀಕಿ ಗುರುಪೀಠದ ಜಗದ್ಗುರು ಶ್ರೀ ವಾಲ್ಮೀಕಿ ಪ್ರಸನ್ನಾನಂದ ಮಹಾಸ್ವಾಮೀಜಿ, ಪಂಚಮಸಾಲಿ ಗುರುಪೀಠದ ಜಗದ್ಗುರು ಶ್ರೀ ವಚನಾನಂದ ಸ್ವಾಮೀಜಿ ಮಹಾಸ್ವಾಮೀಜಿ, ಮಧುರೆನ ಭಗೀರಥ ಪೀಠದ ಜಗದ್ಗುರು ಶ್ರೀ ಪುರುಷೋತ್ತಮಾನಂದ ಪುರಿ ಮಹಾಸ್ವಾಮೀಜಿ ಅಯೋಧ್ಯೆಯನ್ನು ತಲುಪಿದ್ದಾರೆ.

ರಾಜ್ಯದ ವಿವಿಧ ಮಠಾಧಿಪತಿಗಳು ಇದೇ ಜನವರಿ 22ರಂದು ರಾಮಮಂದಿರದಲ್ಲಿ ನಡೆಯಲಿರುವ ಶ್ರೀರಾಮ ಪ್ರಾಣ ಪ್ರತಿಷ್ಠಾಪನೆಯಲ್ಲಿ ಭಾಗಿಯಾಗುತ್ತಿದ್ದಾರೆ.

## ಎನ್‌ಕೌಂಟರ್‌ನಲ್ಲಿ ಇಬ್ಬರು ಮಹಿಳೆಯರು ಸೇರಿ ಮೂವರು ನಕ್ಸಲೀಯರ ಹತ್ಯೆ

ರಾಯ ಪುರ: ಛತ್ತೀಸ್‌ಗಢದ ಬಿಜಾಪುರ ಜಿಲ್ಲೆಯಲ್ಲಿ ಶನಿವಾರ ಬೆಳಗ್ಗೆ ಭದ್ರತಾ ಪಡೆಗಳು ನಡೆಸಿದ ಎನ್‌ಕೌಂಟರ್‌ನಲ್ಲಿ ಇಬ್ಬರು ಮಹಿಳೆಯರು ಸೇರಿದಂತೆ ಮೂವರು ನಕ್ಸಲರು ಹತರಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ರಾಜ್ಯ ರಾಜಧಾನಿ ರಾಯ ಪುರದಿಂದ 400 ಕಿಮೀ ದೂರದಲ್ಲಿರುವ ಬಸಗುಡ ಪೊಲೀಸ್ ಠಾಣೆ ವ್ಯಾಪ್ತಿಯ ಬೆಲಂ ಗುಟ್ಟಾ ಬೆಟ್ಟಗಳಲ್ಲಿ ಬೆಳಗ್ಗೆ 8 ಗಂಟೆ ಸುಮಾರಿಗೆ ಈ ಎನ್ ಕೌಂಟರ್ ನಡೆದಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ರಾಜ್ಯ ಪೊಲೀಸ್ ನ ಜಿಲ್ಲಾ ಮೀಸಲು ಪಡೆ ಸಿಬ್ಬಂದಿ ಮತ್ತು ಸಿಆರ್ ಪಿಎಫ್ ನ ಆಯ್ದು ಕೋಬ್ರಾ ತಂಡಗಳು ಈ ಪ್ರದೇಶದಲ್ಲಿ ನಕ್ಸಲ್ ವಿರೋಧಿ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ ಎಂದು ಅವರು ಹೇಳಿದರು.

ಬಲಂ ನೇದ್ರಾ ಅರಣ್ಯದಲ್ಲಿ ನಕ್ಸಲ್ ಹಿರಿಯ ನಾಯಕರಾದ ವಿನೋದ್ ವರ್ಮಾ, ರಾಜು ಪುಣೆಂ, ವಿಶ್ವನಾಥ್ ಮತ್ತು ಗುಡ್ಡು ತೇಲಂ ಸೇರಿದಂತೆ ಮದ್ದೇಡ್ ಪ್ರದೇಶ ಸಮಿತಿಯ ನಕ್ಸಲ್ ಕಾರ್ಯಕರ್ತರು ಇರುವ ಬಗ್ಗೆ ಭದ್ರತಾ ಪಡೆಗಳಿಗೆ ಗುಪ್ತಚರ ಮಾಹಿತಿ ಸಿಕ್ಕಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಗುಂಡಿನ ಚಕಮಕಿ ನಿಂತ ನಂತರ ಇಬ್ಬರು ಮಹಿಳೆಯರು ಸೇರಿದಂತೆ ಮೂವರು ನಕ್ಸಲರ ಶವಗಳನ್ನು ಸ್ಥಳದಿಂದ ವಶಪಡಿಸಿಕೊಳ್ಳಲಾಗಿದೆ. ಎನ್‌ಕೌಂಟರ್ ಸ್ಥಳದಿಂದ ಸ್ಫೋಟಕಗಳು, ಶಸ್ತ್ರಾಸ್ತ್ರಗಳು, ನಕ್ಸಲ್ ಸಮವಸ್ತ್ರ, ಸಾಹಿತ್ಯ ಮತ್ತು ಇತರ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಹತ್ಯೆಯಾದ ನಕ್ಸಲರ ಗುರುತು ಇನ್ನೂ ಪತ್ತೆಯಾಗಿಲ್ಲ, ಹತ್ತಿರದ ಪ್ರದೇಶಗಳಲ್ಲಿ ಶೋಧ ಕಾರ್ಯಾಚರಣೆ ನಡೆಯುತ್ತಿದೆ ಎಂದು ಅವರು ಮಾಹಿತಿ ನೀಡಿದ್ದಾರೆ ತಿಳಿಸಿದ್ದಾರೆ.

## ವಕೀಲನ ಉಚ್ಛಾಟನೆ




ಮಂಡ್ಯ: ಮುಸ್ಲಿಂ ಮಹಿಳೆಯರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿದ್ದ ಆರ್.ಎಸ್.ಎಸ್ ಮುಖಂಡ ಕಲ್ಲಡ್ಕ ಪ್ರಭಾಕರ್ ಭಟ್ ಅವರಿಗೆ ಮಂಡ್ಯ ಜಿಲ್ಲೆಯ 3ನೇ ಅಪರ ಜಿಲ್ಲಾ ಸತ್ರ ನ್ಯಾಯಾಲಯ ಜಾಮೀನು ಮಂಜೂರು ಮಾಡಿತು. ಆದರೆ ಪ್ರಭಕರ್ ಭಟ ಪರ ವಕಾಲತ್ತು ವಸಿದ್ದ ಕಾಂಗ್ರೆಸ್ ನ ವಕೀಲರನ್ನು ಪಕ್ಷದಿಂದ ಉಚ್ಛಾಟನೆ ಮಾಡಲಾಗಿದೆ. ಪ್ರಭಾಕರ್ ಭಟ್ ಪರ ಶ್ರೀರಂಗಪಟ್ಟಣ ಕಾಂಗ್ರೆಸ್ ಕಾನೂನು ಘಟಕದ ಅಧ್ಯಕ್ಷ ಚಂದ್ರೇಗೌಡ ವಕಾಲತ್ತು ವಹಿಸಿದ್ದರು ಎಂದು ತಿಳಿದು ಬಂದಿದೆ. ಇದೀಗ ಅವರನ್ನು ಹುದ್ದೆಯಿಂದ ಹಾಗೂ ಪಕ್ಷದಿಂದ ಉಚ್ಛಾಟನೆ ಮಾಡಲಾಗಿದೆ. ಪ್ರಭಾಕರ್ ಭಟ್ ಗೆ ಜಾಮೀನು ಕೊಡಿಸಿರುವ ವಿಚಾರವಾಗಿ ವಕೀಲರ ವಿರುದ್ಧ ಕಾಂಗ್ರೆಸ್ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದ್ದರು. ಕಾಂಗ್ರೆಸ್ ಕಾನೂನು ಘಟಕದ ನಿಯಮ ಉಲ್ಲಂಘನೆ ಹಿನ್ನೆಲೆಯಲ್ಲಿ ಜಿಲ್ಲಾ ಕಾನೂನು ಘಟಕದ ಅಧ್ಯಕ್ಷ ಗೌರಿಶಂಕರ್, ಚಂದ್ರೇಗೌಡ ಅವರನ್ನು ಉಚ್ಛಾಟನೆ ಮಾಡಿ ಆದೇಶ ಹೊರಡಿಸಿದ್ದಾರೆ.

## ಸಾನಿಯಾ ಮಿರ್ಜಾಗೆ ಕೈಕೊಟ್ಟು, ಪಾಕ್ ನಟಿ ಸನಾ ಜಾವೆದ್ ವಿವಾಹವಾದ ಕ್ರಿಕೆಟಿಗ ಶೊಯೆಬ್ ಮಲ್ಲಿಕ್

ಇಸ್ಲಾಮಾಬಾದ್: ಭಾರತದ ಟೆನ್ನಿಸ್ ತಾರೆ ಸಾನಿಯಾ ಮಿರ್ಜಾಗೆ 'ತಲ್ಲಾಖ್' ನೀಡಿರುವ ಪಾಕಿಸ್ತಾನಿ ಕ್ರಿಕೆಟಿಗ ಶೊಯೆಬ್ ಮಲ್ಲಿಕ್ ನಟಿ ಸನಾ ಜಾವೆದ್ ರನ್ನು ವಿವಾಹವಾಗಿದ್ದಾರೆ.

ಪಾಕಿಸ್ತಾನದ ಕ್ರಿಕೆಟಿಗ ಶೋಯೆಬ್ ಮಲಿಕ್ ಮೂರನೇ ಮದುವೆಯಾಗಿದ್ದು, ನಟಿ ಸನಾ ಜಾವೇದ್ ಅವರನ್ನು ಶನಿವಾರದಂದು ಆತ್ಮೀಯ ಸಮಾರಂಭದಲ್ಲಿ ಮದುವೆಯಾಗಿ ಸಾಮಾಜಿಕ ಜಾಲತಾಣಗಳಲ್ಲಿ ಈ ಕುರಿತು ಮಾಹಿತಿ ಘೋಷಿಸಿದ್ದಾರೆ. "ಅಲ್ಹಮ್ದುಲ್ಲಿಲಾಹ್. ನಾವು ಜೋಡಿಯಾಗಿದ್ದೇವೆ" ಎಂದು 41 ವರ್ಷದ ಕ್ರಿಕೆಟಿಗ ಮಲ್ಲಿಕ್ ತಮ್ಮ ಇನ್ಸ್ಟಾಗ್ರಾಮ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ. ಪ್ರಕಟಣೆಯ ನಂತರ, ಸನಾ ಜಾವೇದ್ ತನ್ನ ಖಟಿಣಚಿರಡಿಚಿಟ ಬಯೋವನ್ನು "ಸನಾ ಶೋಯೆಬ್ ಮಲಿಕ್" ಎಂದು ಬದಲಾಯಿಸಿಕೊಳ್ಳುವ



ಮೂಲಕ ಮದುವೆ ವಿಚಾರವನ್ನು ಸ್ಪಷ್ಟಪಡಿಸಿದ್ದಾರೆ.

**ಸನಾಗೆ ಎರಡನೇ ಮದುವೆ**

41 ವರ್ಷದ ಶೋಯೆಬ್ ಮಲಿಕ್ ಅವರನ್ನು ವಿವಾಹ ಆಗಿರುವ ಸನಾ ಜಾವೇದ್ ಅವರಿಗೆ ಕೂಡ ಇದು ಎರಡನೇ ಮದುವೆ. ಸನಾ ಈ ಹಿಂದೆ ಪಾಕಿಸ್ತಾನಿ ಗಾಯಕ ಉಮರ್ ಜಸ್ವಾಲ್ ಅವರನ್ನು ವಿವಾಹ ಆಗಿದ್ದರು. ಸದ್ಯ ಸನಾ ಮತ್ತು ಉಮರ್ ತಮ್ಮ ಹಳೆಯ ಫೋಟೋಗಳನ್ನು ಇನ್ಸ್ಟಾಗ್ರಾಮ್ನಿಂದ ಡಿಲೀಟ್ ಮಾಡಿದ್ದಾರೆ.

ಸನಾ ಅವರ ಮೊದಲ ಮದುವೆ 2020 ರಲ್ಲಿ ನಡೆದಿದ್ದರೆ, ಈಗ ಅವರ ಎರಡನೇ ಮದುವೆ 2024 ರಲ್ಲಿ ಆಗಿದೆ.

ಶೋಯೆಬ್ ಈ ಹಿಂದೆ ಭಾರತದ ಟೆನಿಸ್ ಸೆನ್ಸೇಷನ್ ಸಾನಿಯಾ ಮಿರ್ಜಾ ಅವರನ್ನು ಮದುವೆಯಾಗಿದ್ದರು. ಆದರೆ , ಕಳೆದ ಕೆಲವು ಸಮಯದಿಂದ ಇಬ್ಬರ ನಡುವೆ ಎಲ್ಲವೂ ಸರಿಯಿಲ್ಲ ಎಂಬ ಸುದ್ದಿ ಹರಿದಾಡಿತ್ತು.

ಇಬ್ಬರು ಬೇರ್ಪಟ್ಟಿದ್ದಾರೆ ಎಂದು ಹೇಳಲಾಗಿತ್ತು. ಇವುಗಳ ನಡುವೆ ಶೋಯಬ್ ಮಲಿಕ್ ಅವರ ಮದುವೆಯ ಸುದ್ದಿ ಬೆಳಕಿಗೆ ಬಂದಿದೆ.

ಶೋಯೆಬ್ ಮಲಿಕ್ ಮತ್ತು ಸಾನಿಯಾ ಮಿರ್ಜಾ ಅವರ ವಿವಾಹವು 12 ಏಪ್ರಿಲ್ 2010 ರಂದು ನಡೆಯಿತು. ಇವರಿಬ್ಬರ ವಿವಾಹದ ಬಗ್ಗೆ ಭಾರತದಲ್ಲಿ ಸಾಕಷ್ಟು ವಿವಾದಗಳು ನಡೆದವು.

ಇಬ್ಬರೂ ಹೈದರಾಬಾದ್‌ನಲ್ಲಿ ಮದುವೆಯಾಗಿದ್ದರು ಮತ್ತು 2018 ರಲ್ಲಿ ಸಾನಿಯಾ ಗಂಟು ಮಗುವಿಗೆ ಜನ್ಮ ನೀಡಿದ್ದರು.

ಆದರೆ ಕೊರೋನ ನಂತರ, ಇಬ್ಬರ ನಡುವೆ ಅಸಮಾಧಾನ ಉಂಟಾಗಿತ್ತು. ಇಬ್ಬರೂ ಪ್ರತ್ಯೇಕವಾಗಿ ವಾಸಿಸುತ್ತಿದ್ದರು. ಎರಡು ದಿನಗಳ ಹಿಂದೆಯಷ್ಟೇ ಸಾನಿಯಾ ಮಿರ್ಜಾ ಇನ್‌ಸ್ಟಾಗ್ರಾಮ್‌ನಲ್ಲಿ ಪೋಸ್ಟ್ ಒಂದನ್ನು ಹಂಚಿಕೊಂಡಿದ್ದರು. ಅದರಲ್ಲಿ, "ವಿಚ್ಛೇದನ ತುಂಬಾ ಕಷ್ಟ, ಮದುವೆ ಕೂಡ ತುಂಬಾ ಕಷ್ಟ," ಎಂದು ಬರೆದುಕೊಂಡಿದ್ದರು.

ಈ ಮೂಲಕ ಶೋಯೆಬ್ ಮಲಿಕ್ ಮತ್ತು ಸಾನಿಯಾ ಮಿರ್ಜಾ ವಿಚ್ಛೇದನ ಪಡೆದಿದ್ದಾರೆ ಎಂಬ ಸೂಚನೆ ಸಿಕ್ಕಿದ್ದವು. ಇದೀಗ ಅಧಿಕೃತವಾಗಿದೆ.

# ಜೆಜೆಎಂ ಕಾಮಗಾರಿಗಳನ್ನು ಪೂರ್ಣಗೊಳಿಸಿ ಜಿಪಂ ಸಿಇಓ ರಾಹುಲ್ ಶಿಂಧೆ ಸೂಚನೆ

ಬೆಳಗಾವಿ: ಜಲ ಜೀವನ್ ಮಿಷನ್ (ಜೆಜೆಎಂ) ಕಾಮಗಾರಿಗಳನ್ನು ಕೂಡಲೇ ಮುಕ್ತಾಯಗೊಳಿಸಬೇಕು. ಹರ್ ಘರ್ ಜಲ ಗ್ರಾಮವೆಂದು ಘೋಷಣೆ ಮಾಡಬೇಕು ಎಂದು ಜಿಪಂ ಸಿಇಓರಾಹುಲ್ ಶಿಂಧೆ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶನಿವಾರ (ಜ.20) ಬೆಳಗಾವಿ ಹಾಗೂ ಚಿಕ್ಕೋಡಿ ವಿಭಾಗದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾಮಗಾರಿಗಳ ಆರ್ಥಿಕ ಮತ್ತು ಭೌತಿಕವಾಗಿ ಪರಿಶೀಲನೆ ಮಾಡಿ, ಬೆಳಗಾವಿ ವಿಭಾಗದಡಿ 4 ಹೊಸದಾಗಿ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳಿದ್ದು,



ಅರಣ್ಯ ಇಲಾಖೆಯ ಸಮಸ್ಯೆಗಳನ್ನು ಕೂಡಲೇ ಬಗೆಹರಿಸಿ ಕೆಲಸ ಪ್ರಾರಂಭಿಸಬೇಕು ಎಂದು ಸೂಚಿಸಿದರು.

ಬೇಸಿಗೆ ಕಾಲದಲ್ಲಿ ಗ್ರಾಮಗಳಲ್ಲಿ ಕುಡಿಯುವ ನೀರಿಗೆ ಯಾವುದೇ ರೀತಿ ತೊಂದರೆಯಾಗದಂತೆ ಕ್ರಮವಹಿಸಬೇಕು. ಕುಡಿಯುವ ನೀರಿನ ಗುಣಮಟ್ಟ ಪರೀಕ್ಷೆ ಮಾಡಬೇಕು. ಎರಡು ವಿಭಾಗಗಳ ಗ್ರಾಮ ಮಟ್ಟದಲ್ಲಿನ ಓವರ್ ಹೆಡ್ ಟ್ಯಾಂಕ್ ಗಳನ್ನು ತಿಂಗಳಿಗೆ ಕನಿಷ್ಠ ಒಂದು ಬಾರಿ ಗ್ರಾಪಂಗಳು ಸ್ವಚ್ಛಗೊಳಿಸಬೇಕು. ಅದರ ಉಸ್ತುವಾರಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಪಂ ಯೋಜನಾ ನಿರ್ದೇಶಕ ರವಿ ಬಂಗಾರೆಪ್ಪನವರ, ಕಾರ್ಯನಿರ್ವಾಹಕ ಅಭಿಯಂತರರು, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಮೊದಲಾದವರು ಇದ್ದರು.

## 40 ವರ್ಷದ ವಿವಾಹಿತೆಯೊಂದಿಗೆ ಓಡಿಹೋದ 30 ವರ್ಷದ ವಿವಾಹಿತ



ಬೆಂಗಳೂರು : ಬೆಂಗಳೂರಿನ ಪುಟ್ಟೇನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವಿವಾಹಿತ ಮಹಿಳೆ ಹಾಗೂ ವಿವಾಹಿತ ಪುರುಷ ಓಡಿಹೋದ ಘಟನೆ ನಡೆದಿದೆ.

ಪರಾರಿಯಾದ ಜೋಡಿ ವಸೀಂ (30)ಮತ್ತು ದಿಲ್ ಷಾದ್ (40) ಎಂದು ತಿಳಿದುಬಂದಿದೆ.

ಕೆಲ ದಿನಗಳಿಂದ ವಸೀಂ ಹಾಗೂ ದಿಲ್ ಷಾದ್ ನಡುವೆ ಅನೈತಿಕ ಸಂಬಂಧ ಇತ್ತು. ಈ ಸುಳಿವು ತಿಳಿದ ಸುಮೈಯಾ ಬಾನು ರೆಡ್ ಹ್ಯಾಂಡಾಗಿ ಹೋಟೆಲ್ ರೂಂ ಒಂದರಲ್ಲಿ ಹಿಡಿದಿದ್ದಳು.

ಈ ವಿಚಾರ ಪೊಲೀಸರವರೆಗೆ ಹೋಗಿ ಅವರು ಇಬ್ಬರಿಗೂ ಛೀಮಾರಿ ಹಾಕಿ ಕಳಿಸಿದ್ದರು. ಆದರೀಗ ಇಬ್ಬರು ಓಡಿ ಹೋಗಿದ್ದಾರೆ.

ಸದಯ ದಿಲ್ಷಾದ್ ಗಂಡ ದೂರು ದಾಖಲಿಸಿದ್ದು, ಮನೆಯಿಂದ 70 ಲಕ್ಷ ರೂ. ಹಣ ಮತ್ತು 5 ಲಕ್ಷ ರೂ. ಮೌಲ್ಯದ ಚಿನ್ನಾಭರಣಗಳೊಂದಿಗೆ ತನ್ನ ಹೆಂಡತಿ ಓಡಿಹೋಗಿದ್ದಾಳೆ ಎಂದು ತಿಳಿಸಿದ್ದಾನೆ.

ಇನ್ನೂ ವಸೀಂ ಪತ್ನಿ ಸುಮೈಯಾ ಬಾನು ಸಹ ನ್ಯಾಯ ಕೊಡಿಸುವಂತೆ ಪೊಲೀಸ್ ಠಾಣೆಯ ಮೆಟ್ಟಿಲೇರಿದ್ದಾರೆ.

## ಹುಕ್ಕೇರಿ ಕ್ಷೇತ್ರದ ವಿವಿಧ ಹಳ್ಳಿಗಳಲ್ಲಿ ರಮೇಶ ಕತ್ತಿ ಮಿಂಚಿನ ಸಂಚಾರ

ಹುಕ್ಕೇರಿ: ಕ್ಷೇತ್ರದ ವಿವಿಧ ಹಳ್ಳಿಗಳಲ್ಲಿ ಶುಕ್ರವಾರ ಮಿಂಚಿನ ಸಂಚಾರ ನಡೆಸಿದ ಮಾಜಿ ಸಂಸದರೂ ಆದ ಡಿಸಿಸಿ ಬ್ಯಾಂಕ್ ಅಧ್ಯಕ್ಷ ರಮೇಶ ಕತ್ತಿ ಅವರು ಸರ್ಕಾರಿ ಕನ್ನಡ ಪ್ರಾಥಮಿಕ ಶಾಲಾ ಕೊಠಡಿಗಳನ್ನು ಉದ್ಘಾಟಿಸಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ವೇಗ ನೀಡಿದರು.

2022-23 ನೇ ಸಾಲಿನ ವಿವೇಕ ಯೋಜನೆಯಡಿ ಲೋಕೋಪಯೋಗಿ ಇಲಾಖೆಯಿಂದ ಕೈಗೆತ್ತಿಕೊಂಡ ದಾಸರಟ್ಟಿಯ 28.80 ಲಕ್ಷ ರೂ ವೆಚ್ಚದ 2 ಕೊಠಡಿ, ರಕ್ಷಿಯ 41.70 ಲಕ್ಷ ರೂ ವೆಚ್ಚದ 3 ಕೊಠಡಿ, ಶಿಂದಿಹಟ್ಟಿಯ 14.50 ಲಕ್ಷ ರೂ ವೆಚ್ಚದ 1 ಕೊಠಡಿ, ಲೇಬರ್ ಕ್ಯಾಂಪ್‌ನ 14.50 ಲಕ್ಷ ರೂ ವೆಚ್ಚದ 1 ಕೊಠಡಿ, ಗೌಡವಾಡದಲ್ಲಿ 14.30 ಲಕ್ಷ ರೂ ವೆಚ್ಚದಲ್ಲಿ ನಿರ್ಮಿಸಿದ ನೂತನ ಕೊಠಡಿಗಳನ್ನು ರಮೇಶ ಕತ್ತಿ ಲೋಕಾರ್ಪಣೆ ಮಾಡಿದರು.

ಬಳಿಕ ಮಾತನಾಡಿದ ಅವರು, ಹುಕ್ಕೇರಿ ಕ್ಷೇತ್ರದಲ್ಲಿ ವಿವೇಕ ಯೋಜನೆಯಡಿ 1.14 ಕೋಟಿ ರೂ ವೆಚ್ಚದಢಲ್ಲಿ ನಿರ್ಮಾಣಗೊಂಡ 8 ಕೊಠಡಿಗಳನ್ನು ಇದೀಗ ಉದ್ಘಾಟಿಸಲಾಗಿದೆ. ಮಕ್ಕಳಲ್ಲಿ ಸಂಸ್ಕಾರ,



ಮಾನವೀಯ ಮೌಲ್ಯಗಳ ಜತೆಗೆ ಗುಣಮಟ್ಟದ ಶಿಕ್ಷಣ ನೀಡಬೇಕಿದೆ. ಪ್ರಾಥಮಿಕ ಹಂತದಲ್ಲಿಯೇ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವಲ್ಲಿ ಪಾಲಕರು ಮುತುರ್ವಜಿ ವಹಿಸಬೇಕು. ಸ್ಪರ್ಧಾತ್ಮಕ ಯುಗದಲ್ಲಿ ಮಕ್ಕಳನ್ನು ಅಂಕಗಳಿಗೆ ಸೀಮಿತ ಮಾಡುತ್ತಿರುವುದರಿಂದ ನೈತಿಕ ಶಿಕ್ಷಣ ಮಟ್ಟ ಕುಸಿಯುತ್ತಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಗ್ರಾಪಂ ಅಧ್ಯಕ್ಷ ಬಸವರಾಜ ಬೂಸಾರಿ, ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಭಾವತಿ ಪಾಟೀಲ, ಕ್ಷೇತ್ರ ಸಮನ್ವಯ ಅಧಿಕಾರಿ ಎ.ಎಸ್.ಪದ್ಮಣ್ಣವರ, ಗುತ್ತಿಗೆದಾರರಾದ ಪಿ.ಬಿ.ಮಗದುಮ್ಮ, ಬಸವರಾಜ ಗಂಗನ್ನವರ, ಮುಖಂಡರಾದ ಬಸವರಾಜ ಮಟಗಾರ, ಬಸವರಾಜ ಮರಡಿ, ರವಿ ಹಿಡಕಲ್, ರಾಯಪ್ಪ ಡೂಗ, ರಾಜು ಹುದ್ದಾರ, ಮಹೇಶ ಬಡಗಾಂವಿ, ಕೆಂಪಣ್ಣ ಖೋತ, ಸಹಾಯಕ ಅಭಿಯಂತರ ವಿಜಯ ಕುರಾಡಗಿ, ಸುಹಾಸಿನಿ ಮಗದುಮ್ಮ, ಕಾಡಪ್ಪ ಶಿಡ್ಲಾಳಿ, ತಾನಾಜಿ ಕದಂ ಮತ್ತಿತರರು ಉಪಸ್ಥಿತರಿದ್ದರು.

## ಕಿಚ್ಚ ಸುದೀಪ್ 'ಮ್ಯಾಕ್ಸ್' ಹೆಸರಲ್ಲಿ ಆ್ಯಂಬುಲೆನ್ಸ್ ಸೇವೆ ಆರಂಭ

ಬೆಂಗಳೂರು: ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ತಮ್ಮ ನಟನೆಯ ಮೂಲಕ ಅಭಿಮಾನಿಗಳನ್ನು ರಂಜಿಸುತ್ತಾರೆ. ಜೊತೆಗೆ ಸದ್ದಿಲ್ಲದೇ ಕಷ್ಟ ಎಂದುಕೊಂಡು ಬಂದವರಿಗೆ ಸಹಾಯಹಸ್ತ ಚಾಚಿದ್ದಾರೆ.

ಈಗಾಗಲೇ ತಮ್ಮ ಹೆಸರಿನಲ್ಲಿರುವ ಚಾರಿಟೇಬಲ್ ಟ್ರಸ್ಟ್ ಮೂಲಕ ಅವರು ಮಾಡಿರುವ ಸಹಾಯಗಳು ಎಲ್ಲರ ಕಣ್ಣ ಮುಂದಿವೆ. ಗ್ರಾಮ, ಶಾಲೆಗಳನ್ನು ದತ್ತು ತೆಗೆದುಕೊಳ್ಳುವುದರ ಜೊತೆಗೆ ಕಷ್ಟದಲ್ಲಿರುವವರಿಗೆ ಸಹಾಯದ ನೆರವು ನೀಡಿದ್ದಾರೆ. ಕಿಚ್ಚನ ಹೆಸರಿನ ಟ್ರಸ್ಟ್ ಹೊರತಾಗಿ ಅವರ ಅಭಿಮಾನಿಗಳೇ ಸಂಸ್ಥಾಪಿಸಿರುವ ಸಂಜೀವಿನಿ ಜೀವ ರಕ್ಷಕ ಟ್ರಸ್ಟ್ ಸಾವಿರಾರು ಜೀವಗಳ ಉಳಿವಿಗೆ ನೆರವಾಗಿದೆ.

ಬಹಳ ವರ್ಷಗಳಿಂದ ಕಿಚ್ಚ ಸುದೀಪ್ ಫ್ಯಾನ್ಸ್ ಪ್ರಾರಂಭಿಸಿರುವ ಸಂಜೀವಿನಿ ಜೀವ ರಕ್ಷಕ ಟ್ರಸ್ಟ್ ಸಮಾಜ ಸೇವೆಗೆ ಟೊಂಕ ಕಟ್ಟಿ ನಿಂತಿದೆ. ಅದರಂತೆ ಈ ಟ್ರಸ್ಟ್ ಈಗ ಮ್ಯಾಕ್ಸ್ ಹೆಸರಿನ ಆಂಬುಲೆನ್ಸ್ ಸೇವೆ ಪ್ರಾರಂಭಿಸಿದೆ.




ಮಾಕ್ಸ್ ಹೆಸರಿನ ಆಂಬುಲೆನ್ಸ್ ನ್ನು ಸುದೀಪ್ ಸಾವರ್ಜನಿಕ ಸೇವೆಗೆ ಲೋಕಾರ್ಪಣೆಗೊಳಿಸಿದ್ದಾರೆ.

## ನಿಯಂತ್ರಣ ತಪ್ಪಿ ಗ್ಯಾಸ್ ಲಾರಿ ಪಲ್ಟಿ




ಚಿಕ್ಕಮಗಳೂರು: ದಟ್ಟ ಮಂಜು ಕವಿದ ವಾತಾವರಣದ ಹಿನ್ನೆಲೆ ಚಾಲಕನ ನಿಯಂತ್ರಣ ತಪ್ಪಿ ಗ್ಯಾಸ್ ಲಾರಿ ಪಲ್ಟಿಯಾಗಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯಲ ಕಳಸ ತಾಲೂಕಿನ ಬಾಳೆಹೊಳೆ ರಸ್ತೆಯ ಹಳುವಳ್ಳಿ ಸಮೀಪದ ಯಡ್ರಗೋಡು ಗ್ರಾಮದ ಬಳಿ ನಡೆದಿದೆ.

ಭದ್ರಾವತಿಯಿಂದ ಭರ್ತಿ ಎಲ್‌ಪಿಜಿ ಸಿಲಿಂಡರ್‌ಗಳನ್ನ ಹೊತ್ತ ಲಾರಿ ಕಳಸದಿಂದ ಬರುತ್ತಿತ್ತು. ಬೆಳಗ್ಗಿನ ಜಾವ 6:30ರ ಸುಮಾರಿಗೆ ದಟ್ಟ ಮಂಜು ಕವಿದಿದ್ದ ಹಿನ್ನೆಲೆಯಲ್ಲಿ ರಸ್ತೆಯ ತಿರುವಿನಲ್ಲಿ ಚಾಲಕನ ನಿಯಂತ್ರಣ ತಪ್ಪಿ ಗ್ಯಾಸ್ ಲಾರಿ ಪಲ್ಟಿಯಾಗಿದೆ. ಅಪಘಾತದಲ್ಲಿ ಲಾರಿ ಚಾಲಕ ಆನಂದ್‌ಗೆ ಗಂಭೀರ ಗಾಯವಾಗಿ ಕಳಸ ತಾಲೂಕು ಆಸ್ಪತ್ರೆಗೆ ದಾಖಲಿಸಲಾಗಿದೆ. ಲಾರಿಯಲ್ಲಿ ನೂರಕ್ಕೂ ಹೆಚ್ಚು ಭರ್ತಿ ಸಿಲಿಂಡರ್‌ಗಳು ಇದ್ದವು. ರಸ್ತೆಯ ತಿರುವಿನಲ್ಲಿ ಚಾಲಕನ ನಿಯಂತ್ರಣ ತಪ್ಪಿ ಲಾರಿ ಪಟ್ಟಿ ಆಗುತ್ತಿದ್ದಂತೆ ಸಿಲಿಂಡರ್‌ಗಳು ಹೊರಗಡೆ ಚೆಲ್ಲಾಪಿಲ್ಲಿಯಾಗಿದ್ದವು. ಅದೃಷ್ಟವಶಾತ್ ಯಾವುದೇ ಅನಾಹುತ ಸಂಭವಿಸಿಲ್ಲ.

ಅಪಘಾತ ಸಂಭವಿಸಿದ ಕೆಲವೇ ಸಮಯದಲ್ಲಿ ಕಳಸ ತಾಲೂಕಿನ ಗ್ಯಾಸ್ ಏಜೆನ್ಸಿಯ ಸಿಬ್ಬಂದಿ ಮೋಹನ್ ಮತ್ತೊಂದು ವಾಹನ ತಂದು ಸಿಲಿಂಡರ್‌ಗಳನ್ನ ಬೇರೆಡೆ ಸಾಗಿಸಿದರು. ಕಳಸ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಜಗಜ್ಯೋತಿ ಶ್ರೀ ಗುರು ಬಸವಣ್ಣನವರನ್ನು ಸಂಸ್ಕೃತಿಕ ನಾಯಕ; ಘೋಷಣೆಗೆ ಸ್ವಾಗತ

ಬೆಳಗಾವಿ: ಬೆಳಗಾವಿಯಲ್ಲಿ ಜಗಜ್ಯೋತಿ ಶ್ರೀ ಗುರು ಬಸವಣ್ಣನವರನ್ನು ಸಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿದ್ದಕ್ಕಾಗಿ ಸ್ವಾಮೀಜಿಗಳ ದಿವ್ಯ ಸಾನಿಧ್ಯದಲ್ಲಿ ಬೆಳಗಾವಿ ಜೈಕಿಸಾನ್ ಸರ್ಕಾರಿ ಕೃಷಿ ಮಾರು ಕಟ್ಟೆಯಲ್ಲಿ ಸಂಭ್ರಮಾಚರಣೆ ಮಾಡಿ ಘೋಷಣೆ ಸ್ವಾಗತಿಸಿ ಸಿಹಿ ಹಂಚಲಾಯಿತು. ಕಾರ್ಯ ಕ್ರಮದ ದಿವ್ಯ ಸಾನಿಧ್ಯವನ್ನು



ಪರಮ ಪುಜ್ಯ ಶ್ರೀ. ನಿಜಗುಣನಂದ ಸ್ವಾಮೀಜಿ ತೊಂಟದಾರ್ಯಮಠ ಮುಂಡರಗಿ ಹಾಗೂ ಪರಮ ಪೂಜ್ಯ ಶ್ರೀ. ಪ್ರಭುಲಿಂಗ ಸ್ವಾಮೀಜಿ ಬಸವ ಮಂಟಪ ಬೆಳಗಾವಿ ಇವರು ವಹಿಸಿದ್ದರು ಮುಖ್ಯ ಅತಿಥಿಗಳಾಗಿ ಬೆಳಗಾವಿ ಉತ್ತರ ಮತ ಕ್ಷೇತ್ರದ ಮಾಜಿ ಶಾಸಕ ಅನಿಲ ಬೆನಕೆ, ಮಾಜಿ ವಿಧಾನ ಪರಿಷತ್ ಸದಸ್ಯ ಶ್ರೀ. ಮಹಾಂತೇಶ ಕವಟಗಿಮಠ, ಶ್ರೀ. ಸಂಜು ಭಾವಿ, ಶ್ರೀ. ಶಂಕರ್‌ಗುಡಸ್, ಶ್ರೀ ಈರಣ್ಣ ದಯನ್ನಾವರ,ಶ್ರೀ ಅಶೋಕ ಬೆಂಡಿಗೇರಿ, ಶ್ರೀ. ಸೂರ್ಯಕಂತ ಶ್ರೀ. ಎ.ಆರ್.ಪಾಟೀಲ, ಶ್ರೀ. ಮಲಗೌಡ ಪಾಟೀಲ, ಸಂಜಯರಾಮಣ್ಣವರ ಸೇರಿದಂತೆ ಬಸವಾದಿ ಪ್ರಮುಖರು ಉಪಸ್ಥಿತರಿದ್ದರು.

## ಗಂಡು ಮಗುವಿಗೆ ಜನ್ಮ ಕೊಟ್ಟ 10ನೇ ತರಗತಿ ವಿದ್ಯಾರ್ಥಿನಿ

ಕಲಬುರಗಿ: ಅಚ್ಚರಿ ಎಂಬಂತೆ 10ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿನಿಯೊಬ್ಬಳು ಗಂಡು ಮಗುವಿಗೆ ಜನ್ಮ ನೀಡಿದ ಪ್ರಕರಣವೊಂದು ಕಲಬುರಗಿಯಲ್ಲಿ ನಡೆದಿರುವ ಬಗ್ಗೆ ಬೆಳಕಿಗೆ ಬಂದಿದೆ.

ಕಲಬುರಗಿ ಜಿಲ್ಲೆಯ ಆಳಂದ ತಾಲೂಕಿನಲ್ಲಿ ಈ ಘಟನೆ ನಡೆದಿದ್ದು, ವಿದ್ಯಾರ್ಥಿನಿಯ ದೊಡ್ಡಪ್ಪನ ಮಗನೇ ಕೃತ್ಯ ಎಸಗಿರುವುದಾಗಿ ಬಯಲಾಗಿದೆ. ಅಲ್ಲದೇ ಪ್ರಕರಣ ಸಂಬಂಧ ಆರೋಪಿ ಅಣ್ಣನನ್ನು ಕೂಡ ಆಳಂದ ಪೊಲೀಸರು ಬಂಧಿಸಿದ್ದಾರೆ.

ಘಟನೆ ವಿವರ: ವಿದ್ಯಾರ್ಥಿನಿ ಕಲಬುರಗಿ \ ಜಿಲ್ಲೆಯಲ್ಲಿರುವ ವಸತಿ ಶಾಲೆಯೊಂದರಲ್ಲಿ ಓದುತ್ತಿದ್ದಳು. ಶಾಲೆಗೆ ರಜೆ ಇದ್ದಾಗೆಲ್ಲ ಆಕೆ ಮನೆಗೆ ಬರುತ್ತಿದ್ದಳು. ಹೀಗೆ ಬಂದಾಗ ಸಹೋದರ ಆಕೆಯನ್ನು ಬಳಸಿಕೊಳ್ಳುತ್ತಿದ್ದನು. ರಾತ್ರಿ ಹೊತ್ತು ಮನೆಯಲ್ಲಿ ಎಲ್ಲರೂ ಮಲಗಿದ್ದಾಗ ಆತ ತಂಗಿ ಎನ್ನುವುದನ್ನೂ ನೋಡದೇ ರೇಪ್ ಮಾಡುತ್ತಿದ್ದ. ಹೀಗೆ ಕಳೆದ ಮಾರ್ಚ್ ನಿಂದ ವಿದ್ಯಾರ್ಥಿನಿ ಹಲವು ಬಾರಿ ತನ್ನ ಅಣ್ಣನಿಂದ ಅತ್ಯಾಚಾರಕ್ಕೆ ಒಳಗಾಗಿದ್ದಳು. ಅಲ್ಲದೇ ಈ ವಿಚಾರವನ್ನು ಬಾಯಿಬಿಟ್ಟರೆ ಕೊಲೆ ಮಾಡುವ ಬೆದರಿಕೆಯನ್ನು ಕೂಡ ಹಾಕಿದ್ದನು. ಹೀಗಾಗಿ ಆಕೆ ಅತ್ಯಾಚಾರ



ವಿಚಾರವನ್ನು ಮುಚ್ಚಿಟ್ಟಿದ್ದಳು.

ಇತ್ತ ವಿದ್ಯಾರ್ಥಿನಿ ದಪ್ಪ ಇರೋದ್ರಿಂದ ಕುಟುಂಬಸ್ಥರು ಕೂಡ ಆಕೆಯ ದೇಹದಲ್ಲಿ ಆಗುತ್ತಿರುವ ಬದಲಾವಣೆ ಕಂಡು ಹಿಡಿಯುವ ಪ್ರಯತ್ನ ಮಾಡಿಲ್ಲ. ಆದರೆ ಡಿಸೆಂಬರ್ 24 ರಂದು ಶಾಲೆಯಲ್ಲಿ ಇದ್ದಾಗ ಆಕೆಗೆ ಜೋರಾಗಿ ಹೊಟ್ಟೆ ನೋವು ಕಾಣಿಸಿಕೊಂಡಿದೆ. ಹೀಗಾಗಿ ಶಿಕ್ಷಕರಿಗೆ ಹೇಳಿ ಆಕೆ ಸಂಬಂಧಿಕರ ಮನೆಗೆ ತೆರಳಿದ್ದಾಳೆ. ನಂತರ ಸಂಬಂಧಿಕರು ವಿದ್ಯಾರ್ಥಿನಿ ಕುಟಂಬದವರಿಗೆ ಮಾಹಿತಿ ನೀಡಿದ್ದಾರೆ. ಬಳಿಕ ಆಕೆಯನ್ನು ಮಹಾರಾಷ್ಟ್ರದ ಸೊಲ್ಲಾಪುರದ ಆಸ್ಪತ್ರೆಗೆ ಚಿಕಿತ್ಸೆಗೆ ದಾಖಲು ಮಾಡಲಾಯಿತು.

ಚಿಕತ್ಸೆಗೆ ದಾಖಲು ಮಾಡುತ್ತಿದ್ದಂತೆಯೇ ಆಕೆ ಗಂಡು ಮಗುವಿಗೆ ಜನ್ಮ ಕೊಟ್ಟಿದ್ದಾಳೆ. ವಿದ್ಯಾರ್ಥಿನಿ ಗಂಡು ಮಗುವಿಗೆ ಜನ್ಮ ಕೊಟ್ಟಿರುವ ವಿಚಾರ ಗೊತ್ತಾಗ್ತಿದ್ದಂತೆ ಕುಟುಂಬಸ್ಥರು ಕೂಡ ಶಾಕ್ ಆಗಿದ್ದಾರೆ. ಈಕೆಗೆ ಮದುವೆಯೇ ಆಗಿಲ್ಲ ಮಗುವಿಗೆ ಜನ್ಮ ಅಂದ್ರೆ ಹೇಗೆ ಅಂತಾ ಮಾತಾಡಿಕೊಳ್ಳಲು ಆರಂಭಿಸಿದರು. ಬಳಿಕ ಆಸ್ಪತ್ರೆಯವರು ಮಹಾರಾಷ್ಟ್ರದ ಪೊಲೀಸರಿಗೆ ಮಾಹಿತಿ ರವಾನೆ ಮಾಡಿದರು. ಮಹಾರಾಷ್ಟ್ರ ಪೊಲೀಸರು ನಿಂಬರ್ಗಾ ಪೊಲೀಸರನ್ನು ಸಂಪರ್ಕ ಮಾಡಿ ನಿಂಬರ್ಗಾ ಪೊಲೀಸರು ವಿದ್ಯಾರ್ಥಿನಿಯ ವಿಚಾರಣೆ ನಡೆಸಿದರು. ಈ ವೇಳೆ ಅಣ್ಣನಿಂದ ಕೃತ್ಯ ಆಗಿರುವುದು ಬಯಲಾಗಿದೆ. ಕೂಡಲೇ ನಿಂಬರ್ಗಾ ಪೊಲೀಸ್ ಠಾಣೆಯಲ್ಲಿ ಪೋಕ್ಸೊ ಪ್ರಕರಣ ದಾಖಲು ಮಾಡಲಾಯಿತು.

## ಧಾರವಾಡ ಆದರ್ಶ ವಿದ್ಯಾಲಯ: 6 ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

ಧಾರವಾಡ: 2024-25 ನೇ ಸಾಲಿನಲ್ಲಿ ಧಾರವಾಡದ ಆದರ್ಶ ವಿದ್ಯಾಲಯ ಶಾಲೆಯಲ್ಲಿ 6 ನೇ ತರಗತಿಗಳಿಗೆ ಪ್ರವೇಶಕ್ಕಾಗಿ ಆನ್ ಲೈನ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು **www.schooleducation.kar.nic.in, www.vidyavahini.karnataka.gov.in** ಗೆ ಜನವರಿ 17 ರಿಂದ ಫೆಬ್ರವರಿ 6, 2024 ವರೆಗೆ ಅರ್ಜಿ ಸಲ್ಲಿಸಬಹುದು.

ಅಭ್ಯಥಿಗಳು ಅರ್ಜಿ ಸಲ್ಲಿಸುವಾಗ, ವಿದ್ಯಾರ್ಥಿಯ SATS Number, ಆಧಾರ ಕಾರ್ಡ, ಇತ್ತೀಚಿನ ಭಾವಚಿತ್ರ, ಜಾತಿ ಪ್ರಮಾಣಪತ್ರ (ಮಿಸಲಾತಿ ಬಯಸಿದ್ದಲ್ಲಿ), ವಿಕಲಚೇತನ ವಿದ್ಯಾರ್ಥಿಗಳಾಗಿದ್ದರೆ, ಸಕ್ಷಮ ಪ್ರಾಧಿಕಾರಿಗಳಿಂದ ಪಡೆದ ಪ್ರಮಾಣಪತ್ರ, ಪಾಲಕ, ಪೋಷಕರ ಮೊಬೈಲ್ ನಂಬರ, ಪಾಲಕರು ತಮ್ಮ ಮಕ್ಕಳನ್ನು ಬೇರೆ ತಾಲೂಕ, ಜಿಲ್ಲೆ, ರಾಜ್ಯಗಳಲ್ಲಿ ವ್ಯಾಸಂಗ ಮಾಡುತ್ತಿದ್ದರೆ ತಹಶೀಲ್ದಾರ ರಿಂದ ಪಡೆದ ವಾಸಸ್ಥಳ ಪ್ರಮಾಣಪತ್ರ ಮತ್ತು ವ್ಯಾಸಂಗ ಪ್ರಮಾಣಪತ್ರ ದಾಖಲೆಗಳನ್ನು ಸಲ್ಲಿಸಬೇಕು.

ಹಾಗೂ ಧಾರವಾಡ ತಾಲೂಕಿಗೆ ಸಂಭಂಧಿಸಿದ 5ನೇ ತರಗತಿ ವಿದ್ಯಾರ್ಥಿಗಳು ಅರ್ಜಿಸಲ್ಲಿಸಬಹುದಾಗಿದೆ ಹೆಚ್ಚಿನ ಮಾಹಿತಿಗಾಗಿ ದೂ.ಸಂ. 9741779832 ಗೆ ಸಂಪರ್ಕಿಸಿಬಹುದೆಂದು ಧಾರವಾಡದ ಆದರ್ಶ ವಿದ್ಯಾಲಯದ ಮುಖ್ಯೋಪಾಧ್ಯಾಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನ

ಧಾರವಾಡ: ಬೆಂಗಳೂರಿನ ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ 2023-24 ನೇ ಸಾಲಿನ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ ( State Scholarship portal -SSP) ನ ಮೆಟ್ರಿಕ್ ನಂತರ ಮತ್ತು (ಮೆರಿಟ್-ಕಮ್-ಮೀನ್ಸ್) ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ವಿದ್ಯಾರ್ಥಿವೇತನ ಆನ್ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಮೆಟ್ರಿಕ್ ನಂತರದ & ಮೆರಿಟ್-ಕಮ್-ಮೀನ್ಸ್ ಶುಲ್ಕ ಮರುಪಾವತಿ ವಿದ್ಯಾರ್ಥಿವೇತನಕ್ಕೆ ಜನವರಿ 30, 2024 ರ ಒಳಗಾಗಿ ಅಲ್ಪಸಂಖ್ಯಾತರ ನಿರ್ದೇಶನಾಲಯದ https://dom.karnataka gov.in ವೆಬ್ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ 0836-2971590, ಧಾರವಾಡ ಮಾಹಿತಿ ಕೇಂದ್ರ. 9738287549, ಹುಬ್ಬಳ್ಳಿ ಮಾಹಿತಿ ಕೇಂದ್ರ. 8867718261, ಕಲಘಟಗಿ ಮಾಹಿತಿ ಕೇಂದ್ರ. 9538912399, ಕುಂದಗೋಳ ಮಾಹಿತಿ ಕೇಂದ್ರ. 8904661872, ನವಲಗುಂದ ಮಾಹಿತಿ ಕೇಂದ್ರ. 8746894524 ಕ್ಕೆ ಸಂಪರ್ಕಿಸಬಹುದೆಂದು ಧಾರವಾಡದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಗೋಪಾಲ. ಎಚ್.ಲಮಾಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರ ಮಾಹಿತಿಗಾಗಿ ಅರಣ್ಯ ಇಲಾಖೆಯ ಪ್ರಕಟಣೆ

ಧಾರವಾಡ: ವನ್ಯಜೀವಿ ಸಂರಕ್ಷಣಾ ಕಾಯ್ದೆ 1972 ರನ್ವಯ 1972 ರ ಇಸ್ವಿಯ ನಂತರ ಕಾಡು ಪ್ರಾಣಿಗಳನ್ನು ಬೇಟೆಯಾಡುವುದು, ಕಾಡು ಪ್ರಾಣಿಗಳ ಸಲಕರಣೆಗಳಾದ ಹುಲಿ ಚರ್ಮ, ಹುಲಿ ಉಗುರು, ಜಿಂಕೆ ಚರ್ಮ, ಜಿಂಕೆಯ ಕೊಂಬುಗಳು, ಆನೆ ಬಾಲದ ಕೂದಲುಗಳು ಮುಂತಾದವುಗಳನ್ನು ಸಾರ್ವಜನಿಕರು ವಶದಲ್ಲಿಟ್ಟುಕೊಳ್ಳುವುದು ಕಾನೂನು ಬಾಹೀರವಾಗಿರುತ್ತದೆ.

ಈ ಹಿಂದೆ 1972 ರ ಕಾಯ್ದೆಯ ಅನುಷ್ಠಾನದ ದಿನದಿಂದ 30 ದಿಗಳವರೆಗೆ ಮತ್ತು 2003 ರಲ್ಲಿ 180 ದಿನಗಳ ಕಾಲಾವಕಾಶವನ್ನು 1972 ರ ಪೂರ್ವದಲ್ಲಿಯ ವನ್ಯಪ್ರಾಣಿಗಳ ಸಲಕರಣೆಗಳನ್ನು ಕಾನೂನುಬದ್ದವಾಗಿ ಸಾರ್ವಜನಿಕರು ತಮ್ಮ ವಶದಲ್ಲಿರಿಸಿಕೊಳ್ಳಲು ಮುಖ್ಯ ವನ್ಯಜೀವಿ ಪರಿಪಾಲಕರಿಂದ ಅನುಮತಿ ಪಡೆಯಲು ಅವಕಾಶ ಕಲ್ಪಿಸಿಕೊಡಲಾಗಿತ್ತು. ಆದಾಗ್ಯೂ ಸಾರ್ವಜನಿಕರು ಅಮಾನ್ಯವಾಗಿ, ಕಾನೂನು ಬಾಹೀರವಾಗಿ ವನ್ಯಜೀವಿ ಸಲಕರಣೆಗಳನ್ನು ತಮ್ಮ ವಶದಲ್ಲಿಟ್ಟುಕೊಂಡಿರುವುದು ಸರಕಾರದ ಗಮನಕ್ಕೆ ಬಂದಿರುತ್ತದೆ. ಆದ್ದರಿಂದ ದಿನಾಂಕ:10-1-2024 ರಿಂದ 8-4-2024 ರವರೆಗೆ ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿಯಲ್ಲಿ 90 ದಿನಗಳಲ್ಲಿ ಕಾನೂನುಬಾಹೀರವಾಗಿ ತಮ್ಮ ವಶದಲ್ಲಿರುವ ವನ್ಯಜೀವಿ ಸಲಕರಣೆಗಳನ್ನು ಸರಕಾರಕ್ಕೆ ಅಧ್ಯರ್ಪಿಸಲು ಸಮಯವನ್ನು ಕಲ್ಪಿಸಿಕೊಡಲಾಗಿದೆ.

ಸಾರ್ವಜನಿಕರು ಈ ಸಮಯದಲ್ಲಿ (10-1-2024 ರಿಂದ 8-4-2024) ತಮ್ಮ ವಶದಲ್ಲಿಯ ಅಘೋಷಿತ ವನ್ಯಪ್ರಾಣಿಯ ಸಲಕರಣೆಗಳನ್ನು ಧಾರವಾಡ ಹಾಗೂ ಅಳ್ನಾವರ ತಾಲ್ಲೂಕಿನವರು ಧಾರವಾಡ ವಲಯ ಕಚೇರಿಗೆ, ಕಲಘಟಗಿ ತಾಲ್ಲೂಕಿನವರು ಕಲಘಟಗಿ ವಲಯ ಕಚೇರಿಗೆ ಮತ್ತು ಹುಬ್ಬಳ್ಳಿ, ಅಣ್ಣಿಗೇರಿ, ನವಲಗುಂದ ಮತ್ತು ಕುಂದಗೋಳ ತಾಲ್ಲೂಕಿನ ಜನರು ಹುಬ್ಬಳ್ಳಿ ವಲಯ ಕಚೇರಿಗೆ ಖುದ್ದಾಗಿ ಬಂದು ನಿಗದಿತ ನಮೂನೆ 1 ರಲ್ಲಿ ವಿವರಣೆಯನ್ನು ಸಲ್ಲಿಸಿ ಅಧ್ಯರ್ಪಿಸಲು ಪ್ರಕಟಿಸಲಾಗಿದೆ. ವನ್ಯಜೀವಿ ಸಲಕರಣೆಗಳ ಅಧ್ಯರ್ಪಣೆಗೆ ಯಾವುದೇ ಪರಿಹಾರವನ್ನು ಕಾಯ್ದೆಯಲ್ಲಿ ಕಲ್ಪಿಸಲಾಗಿರುವುದಿಲ್ಲ. ಆದ್ದರಿಂದ ಸಾರ್ವಜನಿಕರು ಸಹಕರಿಸಿ ಕಾಯ್ದೆಯನ್ನು ಗೌರವಿಸಲು ಧಾರವಾಡ ಜಿಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರಿಸರ ಸಮಾಲೋಚನೆ-ಪ್ರಯೋಗಾಲಯ ಕಚೇರಿ ಉದ್ಘಾಟನಾ ಸಮಾರಂಭ ಜ.24 ರಂದು

ಬೆಳಗಾವಿ: ಬೆಳಗಾವಿ ಟೆಸ್ಟ್ ಹೌಸ್ ವತಿಯಿಂದ ನೂತನ ಪರಿಸರ ಸಮಾಲೋಚನೆ ಮತ್ತು ಪ್ರಯೋಗಾಲಯ ಕಚೇರಿಯ ಉದ್ಘಾಟನೆ ಸಮಾರಂಭವನ್ನು ನಗರದ ಕಣಬರಗಿ ಇಂಡಸ್ಟ್ರಿಯಲ್ ಏರಿಯಾ ಆಟೋನಗರದಲ್ಲಿ ಜ. 24 ರಂದು ಬೆಳಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರು ನೂತನ ಪರಿಸರ ಸಮಾಲೋಚನೆ ಮತ್ತು ಪ್ರಯೋಗಾಲಯ ಕಚೇರಿಯನ್ನು ಉದ್ಘಾಟಿಸಲಿದ್ದಾರೆ.ವಿಧಾನಸಭಾ ಸದಸ್ಯರಾದ ಆಸಿಫ್ ಸೇಠ್, ವಿಜಯಾನಂದ ಕಾಶಪ್ಪನವರ್, ಮಾಜಿ ಶಾಸಕಿ ಡಾ. ಅಂಜಲಿ ನಿಂಬಾಳ್ಕರ್ ಹಾಗೂ ಕೆ. ಎಸ್. ಪಿ. ಸಿ.ಬಿ ಹಿರಿಯ ಪರಿಸರ ಅಧಿಕಾರಿ ಗೋಪಾಲ ಸಣ್ಣತಂಗಿ ಮತ್ತಿತರರು ಅವರು ಮುಖ್ಯ ಅತಿಥಗಳಾಗಿ ಭಾಗವಹಿಸಲಿದ್ದಾರೆ ಎಂದು ವ್ಯವಸ್ಥಾಪಕ ನಿರ್ದೇಶಕ ಮತ್ತು ಅಧ್ಯಕ್ಷರಾದ ಶಿವಾನಂದ. ಎಂ. ಡಂಬಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಮಗಾರಿಗಳಿಗೆ ವೇಗನೀಡಿ; ಅರ್ಹ ಪ್ರತಿ ಫಲಾನುಭವಿಗೆ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆ ತಲುಪಿಸುವಲ್ಲಿ ಖಾತ್ರಿ ಇರಲಿ: ದೀಪಾ ಚೋಳನ್


ಧಾರವಾಡ: ಜಿಲ್ಲೆಯಲ್ಲಿ ಕೈಗೊಂಡಿರುವ ಕಾಮಗಾರಿಗಳಿಗೆ ವೇಗ ನೀಡಿ, ಬರುವ ಮಾರ್ಚದೊಳಗೆ ಪೂರ್ಣಗೊಳಿಸಲು ಕ್ರಮ ವಹಿಸಬೇಕು ಮತ್ತು ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳನ್ನು ಒಳಗೊಂಡಿರುವ ಗ್ಯಾರಂಟಿಗಳನ್ನು ಪ್ರತಿ ಅರ್ಹ ಫಲಾನುಭವಿಗೆ ತಲುಪಿಸುವಲ್ಲಿ ಅಧಿಕಾರಿಗಳು ಖಾತ್ರಿ ಮಾಡಿಕೊಳ್ಳಬೇಕೆಂದು ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿರುವ ಧಾರವಾಡ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ದೀಪಾ ಚೋಳನ್ ಅವರು ಹೇಳಿದರು.

ಅವರು ಜಿಲ್ಲೆಯಲ್ಲಿ ಅನುಷ್ಠಾನದಲ್ಲಿರುವ ವಿವಿಧ ಯೋಜನೆಗಳು, ಬರಗಾಲ ಪರಿಸ್ಥಿತಿ ಮತ್ತು ಖಾತ್ರಿ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿ, ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದರು.

ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಎಲ್ಲ ಇಲಾಖೆಗಳಿಗೆ ನಿರ್ದೇಶನ ನೀಡಿದ್ದು, ಜಿಲ್ಲೆಯ ಕಾಮಗಾರಿಗಳನ್ನು ಆಯಾ ಇಲಾಖೆ ಅಧಿಕಾರಿಗಳು ಮುತುವರ್ಜಿ ವಹಿಸಿ, ಸಕಾಲದಲ್ಲಿ ಪೂರ್ಣಗೊಳಿಸಬೇಕೆಂದು ಹೇಳಿದರು.

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳಾದ ಗೃಹಜ್ಯೋತಿ, ಗೃಹಲಕ್ಷ್ಮೀ, ಅನ್ನಭಾಗ್ಯ, ಶಕ್ತಿ ಮತ್ತು ಯುವನಿಧಿ ಯೋಜನೆಗಳ ಅನುಷ್ಠಾನದಲ್ಲಿ ಅಧಿಕಾರಿಗಳು ಆಸಕ್ತಿಯಿಂದ ಕಾರ್ಯನಿರ್ವಹಿಸಬೇಕು. ಪ್ರತಿ ಅರ್ಹ ಫಲಾನುಭವಿಗಳಿಗೆ ಖಾತ್ರಿ ಯೋಜನೆ ತಲುಪುವಂತೆ ಕ್ರಮ ವಹಿಸಬೇಕು. ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಉತ್ತಮ ಪ್ರಗತಿ ಸಾಧಿಸಬೇಕೆಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ತಿಳಿಸಿದರು.

ಧಾರವಾಡ ಜಿಲ್ಲೆಯಲ್ಲಿ ಎಲ್ಲ ಎಂಟು



ತಾಲೂಕುಗಳನ್ನು ತೀವ್ರ ಬರಪೀಡಿತ ತಾಲೂಕುಗಳೆಂದು ರಾಜ್ಯ ಸರ್ಕಾರ ಘೋಷಣೆ ಮಾಡಿದೆ. 2023ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಅಂದಾಜು 1.89 ಲಕ್ಷ ಹೆಕ್ಟೆರ್ ಕೃಷಿ ಬೆಳೆ ಹಾಗೂ 0.22 ಲಕ್ಷ ಹೆಕ್ಟೆರನಷ್ಟು ತೋಟಗಾರಿಕೆ ಬೆಳೆ ಸೇರಿ ಒಟ್ಟು ಅಂದಾಜು 2.11 ಲಕ್ಷ ಹೆಕ್ಟೆರ್‌ನಷ್ಟು ಬೆಳೆ ಹಾನಿಯಾಗಿದೆ. ಎಡಿಆರ್‌ಎಫ್ ಮತ್ತು ಎನ್ಡಿಆರ್‌ಎಫ್ಗಳ ಮಾರ್ಗ ಸೂಚಿಯಂತೆ ರೂ. 212 ಕೋಟಿಗಳ ಇನ್ ಪುಟ್ ಸಬ್ಸಿಡಿ ಪರಿಹಾರಕ್ಕಾಗಿ ಈಗಾಗಲೇ ಜಿಲ್ಲಾಡಳಿತದಿಂದ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಅವರು ಹೇಳಿದರು.

ಈಗ ಜನವರಿ 22 ರಿಂದ ಫೆಬ್ರವರಿ 1 ರವರೆಗೆ ಎಂಆರ್ಬಿಸಿ ಕಾಲುವೆ ಮುಖಾಂತರ ಕುಡಿಯುವ ನೀರಿನ ಕೆರೆಗಳನ್ನು ತುಂಬಿಸಿಕೊಳ್ಳಲು ನವಿಲುತೀರ್ಥ ಜಲಾಶಯದಿಂದ ನೀರು ಬಿಡುಗಡೆ ಮಾಡಲಾಗುತ್ತಿದೆ. ಮತ್ತು ಈಗಾಗಲೇ ಕಳೆದ ನವೆಂಬರ್ 7 ರಿಂದ 16ರವರೆಗೂ ಸಹ ನೀರು ಬಿಡಲಾಗಿತ್ತು. ಜಿಲ್ಲೆಯಲ್ಲಿ ಪ್ರಸ್ತುತ ಕುಡಿಯುವ ನೀರಿನ ಸಮಸ್ಯೆ ಇರುವುದಿಲ್ಲ. ಒಂದು ವೇಳೆ ಸಮಸ್ಯೆ ಕಂಡುಬಂದಲ್ಲಿ ತಕ್ಷಣ ಕುಡಿಯುವ ನೀರು ಸರಬರಾಜು ಮಾಡಲು ತಾಲೂಕುವಾರು ಟೆಂಡರ್ ಪ್ರಕ್ರೀಯೆಗಳನ್ನು ಮಾಡಲಾಗುತ್ತಿದೆ ಅಧಿಕಾರಿಗಳು ಜನರ ಮಧ್ಯದಲ್ಲಿದ್ದು, ಸಾರ್ವಜನಿಕರ ಸಮಸ್ಯೆ, ಅಹವಾಲು ಮತ್ತು ಬೇಡಿಕೆಗಳಿಗೆ ತಕ್ಷಣ ಸ್ಪಂದಿಸಬೇಕೆಂದು ಅವರು ಹೇಳಿದರು.

ರಾಜ್ಯ ಸರ್ಕಾರವು ಕಳೆದ ನವೆಂಬರ್ 3 ರಂದು ಧಾರವಾಡ ಜಿಲ್ಲೆಗೆ ಬರ ಪರಿಹಾರಕ್ಕಾಗಿ ರೂ.12ಕೋಟಿಗಳನ್ನು ಬಿಡುಗಡೆ ಮಾಡಿದೆ ಮತ್ತು ಜಿಲ್ಲೆಯ ಪ್ರತಿ ತಾಲೂಕಿಗೆ ರೂ. 50 ಲಕ್ಷಗಳನ್ನು ಅಂದರೇ 4 ಕೋಟಿ ರೂ.ಗಳನ್ನು ತಾಲೂಕು ಆಡಳಿತಗಳಿಗೆ ಬಿಡುಗಡೆ ಮಾಡಿದೆ. ಜಿಲ್ಲಾಧಿಕಾರಿಗಳ ವಿಪತ್ತು ನಿರ್ವಹಣಾ ಪಿಡಿ ಖಾತೆಯಲ್ಲಿ ರೂ. 3.28 ಕೋಟಿ ಅನುದಾನ ಮತ್ತು ತಹಶೀಲ್ದಾರರ ಖಾತೆಯಲ್ಲಿ ರೂ. 1.99 ಕೋಟಿ ಅನುದಾನ ಸೇರಿದಂತೆ ಒಟ್ಟು 6.27 ಕೋಟಿ ಅನುದಾನವು ಬರ ನಿರ್ವಹಣೆಗಾಗಿ ಜಿಲ್ಲೆಯಲ್ಲಿ ಲಭ್ಯವಿದ್ದು ಅಗತ್ಯವಿದ್ದಲ್ಲಿ ಸೂಕ್ತ ಕ್ರಮ ವಹಿಸುವಂತೆ ದೀಪಾ ಚೋಳನ್ ಅವರು ಅಧಿಕಾರಿಗಳಿಗೆ ನಿರ್ದೇಶಿಸಿದರು.

ಸಾರ್ವಜನಿಕರಿಗೆ ತಕ್ಷಣಕ್ಕೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ನಿರ್ಮಿಸಲು ಆದ್ಯತೆ ನೀಡಬೇಕು.

ಅಧಿಕಾರಿಗಳು ಎಲ್ಲ ಕಾಮಗಾರಿಗಳನ್ನು ಉತ್ತಮ ಗುಣ ಮಟ್ಟದಲ್ಲಿ ಮತ್ತು ಕಾಲ ಮೀತಿಯಲ್ಲಿ ಪೂರ್ಣಗೊಳಿಸಲು ಗಮನ ಹರಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ವೇದಿಕೆಯಲ್ಲಿ ಪ್ರಭಾರ ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ., ಅಪರ ಜಿಲ್ಲಾಧಿಕಾರಿ ಗೀತಾ.ಸಿ.ಡಿ., ಬಿಆರ್ಟಿಎಸ್ ಯೋಜನೆಯ ವ್ಯವಸ್ಥಾಪಕ ನಿರ್ದೇಶಕ ಶಿವಾನಂದ ಭಜಂತ್ರಿ ಮತ್ತು ಕೆಯುಐಡಿಎಫ್ಸಿಯ ಹುಬ್ಬಳ್ಳಿ ಪ್ರಾದೇಶಿಕ ಕಚೇರಿಯ ಕಾರ್ಯನಿರ್ವಾಹಕ ಅಧಿಕಾರಿ ಮೇಜರ್ ಸಿದ್ದಲಿಂಗಯ್ಯ ಹಿರೇಮಠ ಇದ್ದರು.

## 2022ನೇ ವರ್ಷದ ಪುಸ್ತಕ ಬಹುಮಾನಕ್ಕಾಗಿ ಕೃತಿಗಳ ಆಹ್ವಾನ

ಬೆಳಗಾವಿ: ಕರ್ನಾಟಕ ಸಾಹಿತ್ಯ ಅಕಾಡೆಮಿಯು ಪ್ರತಿ ವರ್ಷದಂತೆ 2022ನೇ ವರ್ಷದ ಪುಸ್ತಕ ಬಹುಮಾನಕ್ಕಾಗಿ ಕನ್ನಡ ಪುಸ್ತಕಗಳನ್ನು ಸಲ್ಲಿಸಲು ಅರ್ಜಿ ಆಹ್ವಾನಿಸಲಾಗಿದೆ.

ಪ್ರತಿ ಪ್ರಕಾರದಲ್ಲಿ ವಿಮರ್ಶಕರು ಆಯ್ಕೆ ಮಾಡುವ ಒಂದು ಕೃತಿಗೆ ಬಹುಮಾನ ನೀಡಲಾಗುವುದು. ಬಹುಮಾನಕ್ಕೆ ಸಲ್ಲಿಸುವ ಕೃತಿಗಳು 2022ರ ಜನವರಿ 01 ರಿಂದ 2022ರ ಡಿಸೆಂಬರ್ 31 ರೊಳಗೆ ಪ್ರಥಮ ಆವೃತ್ತಿಯಾಗಿ ಪ್ರಕಟವಾಗಿರುವ ಕೃತಿಗಳಾಗಿರಬೇಕು. ಕೃತಿಯಲ್ಲಿ ಪ್ರಥಮ ಮುದ್ರಣ 2022 ಎಂದು ಮುದ್ರಿತವಾಗಿರಬೇಕು.

ಕಾವ್ಯ (ವಚನಗಳು ಮತ್ತು ಹನಿಗವನಗಳು ಸೇರಿ). ನವಕವಿಗಳ ಪ್ರಥಮ ಕವನಸಂಕಲನ (ದೃಢೀಕರಣ ಪತ್ರದೊಂದಿಗೆ). ಕಾವ್ಯ ಹಸ್ತಪ್ರತಿ (30 ವರ್ಷ ಒಳಗಿನ ಯುವಕವಿಗಳ ಅಪ್ರಕಟಿತ ಕವನ ಸಂಕಲನದ ಹಸ್ತಪ್ರತಿಯನ್ನು ಕಳಿಸಿಕೊಡಬೇಕು. (ಚಿ.ಶ್ರೀನಿವಾಸರಾಜು ದತ್ತಿನಿಧಿ ಬಹುಮಾನಕ್ಕಾಗಿ). ಕಾದಂಬರಿ (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ಚದುರಂಗ ದತ್ತಿನಿಧಿ ಬಹುಮಾನಗಳಿಗಾಗಿ), ಸಣ್ಣಕತೆ, ನಾಟಕ, ಲಲಿತ ಪ್ರಬಂಧ (ಹರಟೆ ಮತ್ತು ವಿನೋದ ಸಾಹಿತ್ಯ ಸೇರಿ)(ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ವಿ.ಸೀತಾರಾಮಯ್ಯ ಸೋದರಿ ಇಂದಿರಾ ದತ್ತಿನಿಧಿ ಬಹುಮಾನಗಳಿಗಾಗಿ), ಪ್ರವಾಸ ಸಾಹಿತ್ಯ, ಜೀವನಚರಿತ್ರೆ/ಆತ್ಮಕಥೆ (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ಸಿಂಪಿ ಲಿಂಗಣ್ಣ ದತ್ತಿನಿಧಿ ಬಹುಮಾನಗಳಿಗಾಗಿ), ಸಾಹಿತ್ಯ ವಿಮರ್ಶೆ (ಸಾಹಿತ್ಯಚರಿತ್ರೆ, ಸಾಹಿತ್ಯತತ್ವ ಮತ್ತು ಸೌಂದರ್ಯ ಮೀಮಾಂಸೆ ಸೇರಿ) (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ಪಿ. ಶ್ರೀನಿವಾಸರಾವ್ ದತ್ತಿನಿಧಿ ಬಹುಮಾನಗಳಿಗಾಗಿ), ಗ್ರಂಥ ಸಂಪಾದನೆ (ಪ್ರಾಚೀನ ಕೃತಿಗಳ ಸಂಪಾದನೆ), ಮಕ್ಕಳ ಸಾಹಿತ್ಯ, ವಿಜ್ಞಾನ ಸಾಹಿತ್ಯ (ಭೌತ, ರಸಾಯನ, ಗಣಿತ, ಪ್ರಾಣಿ, ಸಸ್ಯ, ಇಂಜಿನಿಯರಿಂಗ್, ವೈದ್ಯ, ಭೂ, ಖಗೋಳ, ಗೃಹವಿಜ್ಞಾನ, ಪರಿಸರ), ಮಾನವಿಕ (ಜಾನಪದ, ಇತಿಹಾಸ, ರಾಜ್ಯ ಶಾಸ್ತ್ರ, ಸಮಾಜಶಾಸ್ತ್ರ, ಮಾನವಶಾಸ್ತ್ರ, ಮನಃಶಾಸ್ತ್ರ, ಭಾಷಾಶಾಸ್ತ್ರ, ಶಿಕ್ಷಣ, ವಾಣಿಜ್ಯ, ಕಾನೂನು, ಗ್ರಂಥಭಂಡಾರ ವಿಜ್ಞಾನ, ಸಮೂಹಸಂವಹನ,ಧಾರ್ಮಿಕ, ದಾರ್ಶನಿಕ), ಸಂಶೋಧನೆ (ಕನ್ನಡ ಭಾಷೆ ಸಾಹಿತ್ಯ ಮತ್ತು ಸಂಸ್ಕೃತಿ ಗಳಿಗೆ ಸಂಬಂಧಿಸಿದ ಸಂಶೋಧನೆ), ವೈಚಾರಿಕ / ಅಂಕಣ ಬರಹ (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ಬಿ.ವಿ. ವೀರಭದ್ರಪ್ಪ ದತ್ತಿನಿಧಿ ಬಹುಮಾನಗಳಿಗಾಗಿ), ಅನುವಾದ–1 (ಇಂಗ್ಲಿಷ್ ಸೇರಿದಂತೆ ಭಾರತೀಯ ಭಾಷೆಯಿಂದ ಕನ್ನಡಕ್ಕೆ ಅನುವಾದಗೊಂಡ (ಸೃಜನ, ಸೃಜನೇತರ ಕೃತಿಗಳು) (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ಎಲ್. ಗುಂಡಪ್ಪ ಮತ್ತು ಶಾರದಮ್ಮ ದತ್ತಿನಿಧಿ ಬಹುಮಾನಗಳಿಗಾಗಿ), ಅನುವಾದ–2 (ಕನ್ನಡದಿಂದ ಅನ್ಯಭಾಷೆಗಳಿಗೆ ಅನುವಾದಗೊಂಡ ಸೃಜನ /ಸೃಜನೇತರ ಕೃತಿ), ಲೇಖಕರ ಮೊದಲ ಸ್ವತಂತ್ರಕೃತಿ (2022ರಲ್ಲಿ ಮುದ್ರಣಗೊಂಡ ಮೊದಲ ಸ್ವತಂತ್ರಕೃತಿ. ಖಾತರಿಪಡಿಸಲು ದೃಢೀಕರಣ ಪತ್ರ ಲಗತ್ತಿಸಬೇಕು.) (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ಮಧುರಚೆನ್ನ ದತ್ತಿನಿಧಿ ಬಹುಮಾನಗಳಿಗಾಗಿ), ಕನ್ನಡದಿಂದ ಇಂಗ್ಲಿಷಿಗೆ ಅನುವಾದ (ಅಮೆರಿಕನ್ನಡ ದತ್ತಿನಿಧಿ ಬಹುಮಾನಕ್ಕಾಗಿ), ದಾಸ ಸಾಹಿತ್ಯ (ದಾಸ ಸಾಹಿತ್ಯಕುರಿತ ಸೃಜನ/ ಸೃಜನೇತರ ಕೃತಿಗಳು) (ಶ್ರೀಮತಿ ಜಲಜಾ ಶ್ರೀಪತಿ ಆಚಾರ್ಯಗಂಗೂರ್ ದತ್ತಿನಿಧಿ ಬಹುಮಾನಕ್ಕಾಗಿ), ಸಂಕೀರ್ಣ (ಮೇಲಿನ ಯಾವುದೇ ಪ್ರಕಾರಕ್ಕೆ ಹೊಂದಿಕೊಳ್ಳದ ವಿಶಿಷ್ಟ ಕೃತಿಗಳು.

ಬಹುಮಾನಕ್ಕಾಗಿ ಪರಿಗಣಿಸಲ್ಪಡದ ಕೃತಿಗಳು:

ಮರುಮುದ್ರಣವಾದ ಪುಸ್ತಕಗಳು, ಪಿಎಚ್.ಡಿ. ಪದವಿಗಾಗಿ ಸಿದ್ಧಪಡಿಸಿದ ಸಂಶೋಧನಾ ಗ್ರಂಥಗಳು, ಪಠ್ಯಪುಸ್ತಕಗಳು, ಅಕಾಡೆಮಿಯ ಗೌರವ ಪ್ರಶಸ್ತಿ ಪುರಸ್ಕೃತ ಸಾಹಿತಿಗಳ ಕೃತಿಗಳು, ಈಗಾಗಲೇ ಕರ್ನಾಟಕ ಸಾಹಿತ್ಯ ಅಕಾಡೆಮಿಯಿಂದ ಒಟ್ಟಾರೆ ಮೂರು ಬಾರಿ ಪುಸ್ತಕ ಬಹುಮಾನ ಪಡೆದವರ ಕೃತಿಗಳು, ಒಂದು ಪ್ರಕಾರದಲ್ಲಿ ಒಂದು ಬಾರಿ ಪುಸ್ತಕ ಬಹುಮಾನ ಪಡೆದವರ ಕೃತಿಗಳನ್ನು ಮತ್ತದೇ ಪ್ರಕಾರದಲ್ಲಿ ಮುಂದಿನ ಮೂರು ವರ್ಷದವರೆಗೆ ಪರಿಗಣಿಸುವುದಿಲ್ಲ.

ಒಬ್ಬ ಲೇಖಕರಿಗೆ ಮೂರು ಬಾರಿ ಬೇರೆ ಬೇರೆ ಪ್ರಕಾರಗಳಲ್ಲಿ ಬಹುಮಾನ ಪಡೆಯುವ ಅವಕಾಶವಿದೆ.

ಮೇಲ್ಕಂಡ ಅವಧಿಯಲ್ಲಿ ಪ್ರಕಟವಾದ ಪುಸ್ತಕಗಳ ತಲಾ 4 ಪ್ರತಿಗಳನ್ನು ರಿಜಿಸ್ಟ್ರಾರ್, ಕರ್ನಾಟಕ ಸಾಹಿತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು–560002 ಇವರಿಗೆ ರಿಜಿಸ್ಟರ್ಡ್ ಅಂಚೆ / ಕೊರಿಯರ್ ಮೂಲಕ ಅಥವಾ ಖುದ್ದಾಗಿ 2024ರ ಫೆಬ್ರವರಿ 20 ರೊಳಗೆ ತಲುಪಿಸಬೇಕಾಗಿ ಕೋರಿದೆ.

ಬಹುಮಾನಕ್ಕಾಗಿ ಕಳುಹಿಸುವ ಕೃತಿಯ ಮೇಲೆ ತಿಳಿಸಿದ ಪ್ರಕಾರಗಳಲ್ಲಿ ಯಾವ ಸಾಹಿತ್ಯ ಪ್ರಕಾರಕ್ಕೆ ಸೇರುತ್ತದೆ ಎನ್ನುವುದನ್ನು ಸ್ಪಷ್ಟವಾಗಿ ಪುಸ್ತಕದ ಶೀರ್ಷಿಕೆ ಪುಟದಲ್ಲಿ ಬರೆದಿರಬೇಕು ಎಂದು ರಿಜಿಸ್ಟ್ರಾರ ಕರಿಯಪ್ಪ ಎನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯಲ್ಲಮ್ಮನಗುಡ್ಡದ ವಿವಿಧ ಅಭಿವೃದ್ಧಿ ಕಾಮಗಾರಿಗೆ ಆರ್ಕಿಟೇಕ್ಷರ ಅವಶ್ಯಕ: ಆಸಕ್ತರು ಸಂಪರ್ಕಿಸಲು ಕೋರಿಕೆ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ಶ್ರೀ ರೇಣುಕಾ ಯಲ್ಲಮ್ಮಾ ದೇವಸ್ಥಾನದ ಯಲ್ಲಮ್ಮಾ ಗುಡ್ಡದಲ್ಲಿರುವ ಒಟ್ಟು 87 ಎಕ್ಕರೆ ಜಾಗದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಯನ್ನು ನಿರ್ಮಿಸಲು ಕೈಗೊಂಡಿದೆ.

ಆದ ಕಾರಣ ಒಟ್ಟು 87 ಎಕರೆ ಕ್ಷೇತ್ರದ ಅಭಿವೃದ್ಧಿ ಪಡಿಸುವ ಸಲುವಾಗಿ ಇಚ್ಚಿತ ಆರ್ಕಿಟೇಕ್ಷರು ದೇವಸ್ಥಾನದ ಅಭಿವೃದ್ಧಿ ಪಡಿಸುವ ಸಲುವಾಗಿ ಉಚಿತವಾಗಿ ಮಾಸ್ಟರ್ ಪ್ಲಾನ್ ಮಾಡಿ ಕೊಡಲು ಇಚ್ಛಿಸುವರು ಶ್ರೀ ರೇಣುಕಾ ಯಲ್ಲಮ್ಮಾ ದೇವಸ್ಥಾನ ಯಲ್ಲಮ್ಮನಗುಡ್ಡದ ಕಾರ್ಯಾಲಯಕ್ಕೆ ಬೇಟಿ ನೀಡಿ ಮಾಹಿತಿ ಪಡೆದುಕೊಳ್ಳಬೇಕು ಎಂದು ಶ್ರೀ ರೇಣುಕಾ ಯಲ್ಲಮ್ಮಾ ದೇವಸ್ಥಾನ, ಯಲ್ಲಮ್ಮನಗುಡ್ಡ, ಕಾರ್ಯನಿರ್ವಾಹಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.21 ರಂದು ಗಿರಿಜನ ಉತ್ಸವ

ಯರಗಟ್ಟಿ: ಬೆಳಗಾವಿಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 2023–24 ರ ಸಾಲಿನ ಗಿರಿಜನ ಉತ್ಸವವನ್ನು ಯರಗಟ್ಟಿಯ ಮಹಾಂತ ದುರದುಂಡೇಶ್ವರ ಮಠದಲ್ಲಿ ರವಿವಾರ (ಜ.21) ರಂದು ಸಂಜೆ 5 ಗಂಟೆಗೆ ಗಿರಿಜನ ಉತ್ಸವ ನಡೆಯಲಿದೆ.

ವಿಧಾನ ಸಭೆ ಶಾಸಕ ವಿಶ್ವಾಸ ವೈದ್ಯ ಅವರು ಅಧ್ಯಕ್ಷರಾಗಿ ಆಗಮಿಸಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಈ ಸಂದರ್ಭದಲ್ಲಿ ಮುಖ್ಯ ಅಥಿತಿಗಳಾಗಿ ಬೆಳಗಾವಿಯ ಕನ್ನಡ–ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾಗಿರುವ ಕೆ. ಎಚ್. ಚೆನ್ನೂರು, ಇಲ್ಲಿಯ ತಹಶೀಲ್ದಾರ ಎಂ. ಎನ್. ಮಠದ, ಪಟ್ಟಣ ಪಂಚಾಯತ ಮುಖ್ಯಾಧಿಕಾರಿಗಳು ಡಿ.ಎನ್. ತಹಶೀಲ್ದಾರ, ತಾಲೂಕಾ ಅಧ್ಯಕ್ಷರು ತಮ್ಮಣ್ಣಾ ಕಾಮನ್ನವರ, ಅರ್ಬನ್ ಕೊ–ಆಪ್ ಸೊಸಾಯಿಟಿ ಅಧ್ಯಕ್ಷರು ಮಹಾಂತೇಶ ಜಕಾತಿ ಹಾಗೂ ಮಾಜಿ ಜಿಲ್ಲಾ ಪಂಚಾಯತ ಸದಸ್ಯರು ಅಜಿತ. ಕೃ. ದೇಸಾಯಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ. ನಂತರ ಸಾಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಬೆಳಗಾವಿಯ ಕನ್ನಡ–ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಗೆಲ್ಲೋದು ಗ್ಯಾರಂಟಿ: ಶಾಸಕ ಬಾಲಚಂದ್ರ

ಗೋಕಾಕ: ಬರುವ ಲೋಕಸಭಾ ಚುನಾವಣೆಯಲ್ಲಿ ಮತ್ತೊಂದು ಅವಧಿಗೆ ಬಿಜೆಪಿ ಅಧಿಕಾರಕ್ಕೆ ಬರಲಿದ್ದು, ಪ್ರಧಾನಿ ನರೇಂದ್ರ ಮೋದಿಯವರು ಮತ್ತೊಮ್ಮೆ ಪ್ರಧಾನಿಯಾಗಿ ದೇಶದ ಚುಕ್ಕಾಣಿ ಹಿಡಿಯಲಿದ್ದಾರೆ ಎಂದು ಅರಭಾವಿ ಶಾಸಕ ಬಾಲಚಂದ್ರ ಜಾರಕಿಹೊಳಿ ವಿಶ್ವಾಸ ವ್ಯಕ್ತಪಡಿಸಿದರು.



ನಗರದ ಬ್ಯಾಳಿ ಕಾಟಾ ಹತ್ತಿರ ಇರುವ ಎನ್‌ಎಸ್‌ಎಫ್ ಕಛೇರಿಯಲ್ಲಿ ಜರುಗಿದ ಬಿಜೆಪಿ ನೂತನ ಜಿಲ್ಲಾಧ್ಯಕ್ಷರ ಅಭಿನಂದನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಎಲ್ಲ ಸಮೀಕ್ಷೆಗಳು ಕೂಡ ಬಿಜೆಪಿ ಅಧಿಕಾರಕ್ಕೆ ಬರಲಿದೆ ಎಂದು ತಮ್ಮ ಅಂಕಿ–ಅಂಶಗಳನ್ನು ನೀಡಿವೆ ಎಂದು ತಿಳಿಸಿದರು.

ಪ್ರಧಾನಿ ನರೇಂದ್ರ ಮೋದಿಯವರು ಕಳೆದ 116 ತಿಂಗಳಿನಿಂದ ಈ ದೇಶದ ಪ್ರಧಾನಿಗಳಾಗಿ ಇಡೀ ಜಗತ್ತೇ ಮೆಚ್ಚುವ ರೀತಿಯಲ್ಲಿ ಆಡಳಿತ ನಡೆಸುತ್ತಿದ್ದಾರೆ. ಇದಕ್ಕೂ ಮುನ್ನ ಭಾರತವೆಂದರೆ ಅಸಡ್ಡೆ ಪಡುತ್ತಿದ್ದ ಜಗತ್ತಿನ ಪ್ರಬಲ ರಾಷ್ಟ್ರಗಳು ಇಂದು ಪ್ರಧಾನಿ ಮೋದಿಯವರ ಆಡಳಿತದ ಸಲಹೆಗಳನ್ನು ಪಡೆದುಕೊಂಡು ಮುನ್ನಡೆಯುತ್ತಿವೆ. ಇನ್ನೇನೂ ಕೆಲವೇ ದಿನಗಳಲ್ಲಿ ಭಾರತವು ವಿಶ್ವಕ್ಕೆ ಗುರುವಾಗಲಿದೆ ಎಂದು ಅವರು ಆಶಾ ಭಾವನೆ ವ್ಯಕ್ತಪಡಿಸಿದರು.

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬೆಳಗಾವಿ ಕ್ಷೇತ್ರದ ಅಭ್ಯರ್ಥಿ ಪರ ಪ್ರಚಾರವನ್ನು ಕೈಗೊಂಡು ಗೆಲುವಿಗೆ ಶ್ರಮಿಸಬೇಕು. ಇತ್ತೀಚೆಗೆ ನಡೆದ ಬಿಜೆಪಿ ಜಿಲ್ಲಾಧ್ಯಕ್ಷರ ಆಯ್ಕೆಯು ಸಮತೋಲನದಿಂದ ಕೂಡಿದೆ. ಬೆಳಗಾವಿ ಜಿಲ್ಲಾಧ್ಯಕ್ಷ ಸ್ಥಾನವು ಪಂಚಮಸಾಲಿ ಸಮಾಜ, ಬೆಳಗಾವಿ ಮಹಾನಗರ ಘಟಕಕ್ಕೆ ಓಬಿಸಿ ಮತ್ತು ಚಿಕ್ಕೋಡಿ ಜಿಲ್ಲಾ ಅಧ್ಯಕ್ಷ ಸ್ಥಾನಕ್ಕೆ ಪರಿಶಿಷ್ಟ ಜಾತಿಯ ಕಾರ್ಯಕರ್ತರಿಗೆ ನೀಡುವ ಮೂಲಕ ನಿಷ್ಠಾವಂತರಿಗೆ ಮಣೆ ಹಾಕಿದೆ. ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಪಕ್ಷವನ್ನು ಬಲಪಡಿಸುವ ಕೆಲಸವನ್ನು ನೂತನ ಪದಾಧಿಕಾರಿಗಳು ಮಾಡುವಂತೆ ಅವರು ಸಲಹೆ ಮಾಡಿದರು.

ಬರುವ ಸೋಮವಾರದಂದು ಇಡೀ ವಿಶ್ವವೇ ಕಣ್ತುಂಬಿಕೊಳ್ಳುತ್ತಿರುವ ಅಯೋಧ್ಯೆ ಶ್ರೀ ರಾಮನ ಪ್ರಾಣ ಪ್ರತಿಷ್ಠಾಪನಾ ನಡೆಯಲಿದ್ದು, ಇದರ ಅಂಗವಾಗಿ ಇಡೀ ದೇಶಾದ್ಯಂತ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ನಮ್ಮ ಅರಭಾವಿ ಕ್ಷೇತ್ರದ ಪ್ರತಿ ಗ್ರಾಮಗಳಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಎಲ್ಲ ದೇವಸ್ಥಾನಗಳಲ್ಲಿ ರುದ್ರಾಭಿಷೇಕ,

ಸಾರ್ವಜನಿಕರಿಗೆ ಅಯೋಧ್ಯೆ ಕಾರ್ಯಕ್ರಮವನ್ನು ವೀಕ್ಷಿಸಲು ಬೃಹತ್ ಎಲ್‌ಇಡಿ ಸ್ಕ್ರೀನ್ ವ್ಯವಸ್ಥೆಯನ್ನು ಮಾಡಲಾಗಿದೆ ಎಂದು ಹೇಳಿದರು.

ಬೆಳಗಾವಿ ಗ್ರಾಮೀಣ ಬಿಜೆಪಿ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಮೂಡಲಗಿ ತಾಲೂಕಿನ ಅವರಾದಿ ಗ್ರಾಮದ ಸುಭಾಸ ಪಾಟೀಲ ಅವರನ್ನು ಕಾರ್ಯಕ್ರಮದಲ್ಲಿ ಅಭಿನಂದಿಸಲಾಯಿತು.

ಜಿಲ್ಲೆಯ ಎಲ್ಲ ಹಿರಿಯರು, ಮುಖಂಡರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪಕ್ಷದ ಸಂಘಟನಾತ್ಮಕ ಕಾರ್ಯಗಳನ್ನು ಮಾಡುವುದಾಗಿ ಹೇಳಿದರು. ಈ ಬಾರಿ ಬಿಜೆಪಿ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಒಟ್ಟು 15 ಜನ ಆಕಾಂಕ್ಷಿಗಳು ಇದ್ದರು. ಅವರಲ್ಲಿ ನನ್ನನ್ನು ಅಧ್ಯಕ್ಷನನ್ನಾಗಿ ಅಯ್ಕೆ ಮಾಡಿದ್ದಾರೆ. ಅದಕ್ಕಾಗಿ ಪಕ್ಷದ ಎಲ್ಲ ಮುಖಂಡರು ಮತ್ತು ಕಾರ್ಯಕರ್ತರಿಗೆ

ಆಭಾರಿಯಾಗಿರುವದಾಗಿ ಅವರು ಕೃತಜ್ಞತೆ ಸಲ್ಲಿಸಿದರು.

ಜಿ.ಪಂ. ಮಾಜಿ ಅಧ್ಯಕ್ಷ ಬಸಗೌಡ ಪಾಟೀಲ, ಮೂಡಲಗಿ ತಾಲ್ಲೂಕು ಪಂಚಮಸಾಲಿ ಸಮಾಜದ ಅಧ್ಯಕ್ಷ ಬಸನಗೌಡ ಪಾಟೀಲ, ಎಸ್‌ಎಲ್ಡಿಪಿ ನಿರ್ದೇಶಕ ರಾಜು ಬೈರುಗೋಳ, ಪ್ರಭಾ ಶುಗರ್ ನಿರ್ದೇಶಕ ಕೆಂಚನಗೌಡ ಪಾಟೀಲ, ಘಟಪ್ರಭಾ ಜೆಜಿ– ಕೋ ನಿರ್ದೇಶಕ ಶಿವನಗೌಡ ಪಾಟೀಲ, ಜಿಲ್ಲಾ ಸಹಕಾರಿ ಯುನಿಯನ್ ಅಧ್ಯಕ್ಷ ಬಿ.ಡಿ.ಪಾಟೀಲ, ಎಂ.ಎಂ.ಪಾಟೀಲ, ಅರಭಾವಿ ಮಂಡಲ ಅಧ್ಯಕ್ಷ ಮಹಾದೇವ ಶೆಕ್ಕಿ, ಟಿಎಪಿಸಿಎಸ್ ಅಧ್ಯಕ್ಷ ಅಶೋಕ ನಾಯಿಕ, ಗೋಕಾಕ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಬಸವರಾಜ ಕೋಟಗಿ,ಪಿಎಲ್ಡಿ ಬ್ಯಾಂಕ್ ಅಧ್ಯಕ್ಷ ಅಪ್ಪಯ್ಯ ಬಡ್ನಿಂಗೋಳ,ಶಂಕರ ಬಿಲಕುಂದಿ, ಸುಭಾಸ ಕುರಬೇಟ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ಅನುಷಾ ಸಂಗೊಂದಿಮಠ ಅವರಿಗೆ ಪಿ.ಹೆಚ್.ಡಿ. ಪದವಿ ಪ್ರಧಾನ



ಧಾರವಾಡ: ವಿಜಯಪುರದಲ್ಲಿರುವ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ವ್ಯವಹಾರ ಅಧ್ಯಯನ ವಿಭಾಗದಲ್ಲಿ ಪ್ರೊ. ಎಸ್.ಬಿ.ಕಾಮಶೆಟ್ಟಿ ಅವರ ಮಾರ್ಗದರ್ಶನದಲ್ಲಿ "ಎ ಸ್ಟಡಿ ಆನ್ ಎಫೆಕ್ಟಿವನೆಸ್ ಆಫ್ ಕ್ಯಾಂಡಲ್ ಸ್ಟಿಕ್ ಇನ್ ಟೆಕ್ನಿಕಲ್ ಅನಾಲಿಸಿಸ್ ವಿಥ್ ಸ್ಪೆಷಲ್ ರೆಫರೆನ್ಸ್ ಟು ನೇಪ್ಟಿ 50 ಸ್ಟಾಕ್ಸ್ ವಿಷಯ ಕುರಿತು ಸಂಶೋಧನೆ ಕೈಗೊಂಡಿದ್ದ ಅನುಷಾ ಸಂಗೊಂದಿಮಠ ಅವರಿಗೆ ವಿಶ್ವವಿದ್ಯಾಲಯವು ಪಿಎಚ್ಡಿ ಪದವಿ ಪ್ರಧಾನ ಮಾಡಿದೆ. ವಿಶ್ವವಿದ್ಯಾಲಯದ ವಾಣಿಜ್ಯ ಮತ್ತು ವ್ಯವಹಾರ ವಿಭಾಗದ ಪ್ರೊ. ಎಸ್.ಬಿ.ಕಾಮಶೆಟ್ಟಿ ಅವರ ಮಾರ್ಗದರ್ಶನದಲ್ಲಿ ವಿಶ್ವವಿದ್ಯಾನಿಲಯಕ್ಕೆ ಸಾದರಪಡಿಸಿದ ಮಹಾಪ್ರಬಂಧವನ್ನು ಪರೀಕ್ಷಕರು ಮೌಲ್ಯಮಾಪನ ಮಾಡಿ ಸಲ್ಲಿಸಿದ ವರದಿಗಳನ್ನು ಅನುಲಕ್ಷಿಸಿದೆ. ಡಾಕ್ಟರ್ ಆಫ್ ಫಿಲಾಸಫಿ ಪದವಿಯನ್ನು ಕೋರ್ಸ್ವರ್ಕನೊಂದಿಗೆ ಯು.ಜಿ.ಸಿ ಕ್ರಮ ನಿಯಮಾವಳಿ –2016 ಪ್ರಕಾರ ಪ್ರದಾನ ಮಾಡಲು ಕುಲಪತಿಗಳು, ಸಿಂಡಿಕೇಟ್ ಸಭೆಯ ಪರವಾಗಿ ಒಪ್ಪಿಗೆ ನೀಡಿದ್ದಾರೆ.

## ನರೇಗಾ ಯೋಜನೆಯಲ್ಲಿ 150 ಕೋಟಿ ಅಕ್ರಮ ಪ್ರಕರಣ: ದೇವದುರ್ಗ ತಾಲೂಕಿನ 32 ಪಿಡಿಒಗಳ ಅಮಾನತು

ರಾಯಚೂರು: 2020ರಿಂದ 2023ರ ಅವಧಿಯಲ್ಲಿನ ನರೇಗಾ ಯೋಜನೆಯಲ್ಲಿ ಭ್ರಷ್ಟಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಯಚೂರು ಜಿಲ್ಲಾಪಂಚಾಯ್ತಿ ಸಿಇಒ ಪಿ. ರಾಹುಲ್ ತುಕಾರಾಂ ಅವರು ದೇವದುರ್ಗ ತಾಲೂಕಿನ 32 ಪಿಡಿಒಗಳನ್ನು ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ. ನರೇಗಾ ಯೋಜನೆಯಲ್ಲಿ 150 ಕೋಟಿ ರೂಪಾಯಿಗೂ ಹೆಚ್ಚಿನ ಅಧಿಕ ಹಣ ಅಕ್ರಮ ನಡೆದಿರುವುದು ಲೆಕ್ಕ ಪರಿಶೋಧನಾ ಸಮಿತಿಯ ತನಿಖೆಯಲ್ಲಿ ಬಹಿರಂಗಗೊಂಡಿತ್ತು. ಇನ್ನು ದೇವದುರ್ಗ ಠಾಣೆಯಲ್ಲಿ ಇಬ್ಬರು ಗೆಜೆಟೆಡ್ ಅಧಿಕಾರಿಗಳ ವಿರುದ್ಧ ಇತ್ತೀಚೆಗೆ ಎಫ್ಐಆರ್ ದಾಖಲಾಗಿತ್ತು.

# ಜಗಜ್ಯೋತಿ ಬಸವಣ್ಣನವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕನೆಂದು ಘೋಷಣೆ

### ಕರ್ನಾಟಕ ರಾಜ್ಯದ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರಿಗೆ ಅಭಿನಂದನೆಗಳು

ಬೆಳಗಾವಿ: 12 ನೇ ಶತಮಾನದಲ್ಲಿಅನುಭವ ಮಂಟಪ ಸ್ಥಾಪನೆ ಮಾಡಿ ವರ್ಗರಹಿತ, ವರ್ಣರಹಿತ, ಲಿಂಗ ಸಮಾನತೆ ಬೋಧಿಸಿ ಸಮ ಸಮಾಜವನ್ನುಕಟ್ಟಿದವರು ಬಸವೇಶ್ವರರು. ರಾಜಸತ್ತೆಯ ಕಾಲದಲ್ಲಿ ಅನುಭವ ಮಂಟಪದ ಮೂಲಕ ಸಮ ಸಮಾಜ, ಲಿಂಗ ಸಮಾನತೆಯನ್ನು ಅನಿಷ್ಠಾನಗೊಳಿಸಲು ಪ್ರಯತ್ನಿಸಿದವರು ಬಸವಣ್ಣನವರು. ಅಂದಿನ ಅನುಭವ ಮಂಟಪದ ಅನುರೂಪವೇ ಇಂದಿನ ಪಾರ್ಲಿಮೆಂಟು ಅಥವಾ ಸಂಸತ್ತು. ಪ್ರಜಾಪ್ರಭುತ್ವದ ನೆಲೆಯಲ್ಲಿ ಸಂವಿಧಾನಿಕ ಚಿಂತನೆಗಳ ಮೂಲಕ ಮೇಲು ಕೀಳು, ಸ್ಪರ್ಶಅಸ್ಪೃಶ್ಯ ಎಂಬ ಭಾವನೆಯನ್ನು ಹೋಗಲಾಡಿಸಿ, "ಇವನಾರವ ಇವನಾರವ ಎನ್ನದೆ, ಇವ ನಮ್ಮವ ಇವ ನಮ್ಮವ" ಎಂದುಎಲ್ಲರನ್ನೂ ಅಪ್ಪಿಕೊಂಡು ಒಪ್ಪಿಕೊಂಡುಎಲ್ಲರ ಬಾಳಿಗೆ ಬೆಳಕಾದವರು ಬಸವಣ್ಣನವರು. ಇದನ್ನು ಮನಗಂಡು ಸುಮಾರು ವರ್ಷಗಳಿಂದ ಮಂಡಿಸಿದ ಬೇಡಿಕೆಯನ್ನು ಪರಿಗಣಿಸಿ ಕರ್ನಾಟಕದ ಘನ ಸರಕಾರದ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಹಾಗೂ ಅವರ ಸಚಿವ ಸಂಪುಟದ ಸಹೋದ್ಯೋಗಿಗಳು ಜಗಜ್ಯೋತಿ ಬಸವೇಶ್ವರ ಅವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕರೆಂದು ಘೋಷಣೆ ಮಾಡಿದ್ದಕ್ಕಾಗಿ ಇಂದು ಜರುಗಿದ ಸಭೆಯಲ್ಲಿ, ಜಾಗತಿಕ ಲಿಂಗಾಯತ ಮಹಾಸಭಾಕೇಂದ್ರ ಸಮಿತಿ ವತಿಯಿಂದ ಅವರನ್ನು ಅಭಿನಂದಿಸಲಾಯಿತು.



ನಾಗನೂರುರುದ್ರಾಕ್ಷಿ ಮಠದ ಪೂಜ್ಯಡಾ॥ ಅಲ್ಲಮಪ್ರಭು ಮಹಾಸ್ವಾಮಿಗಳವರ ಸಾನಿಧ್ಯದಲ್ಲಿಜರುಗಿದ ಸಭೆಯಅಧ್ಯಕ್ಷತೆಯನ್ನು,ಜಾಗತಿಕಲಿಂಗಾಯತ ಮಹಾಸಭಾದರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ನ್ಯಾಯವಾದಿ ಬಸವರಾಜರೊಟ್ಟಿ ವಹಿಸಿದ್ದರು.ಸಭೆಯಲ್ಲಿಅಡಿವೆಪ್ಪ ಬೆಂಡಿಗೇರಿ, ಅಶೋಕ ಮಳಗಲಿ, ಚಂದ್ರಪ್ಪ ಬೂದಿಹಾಳ, ಪ್ರವೀಣಕುಮಾರಚಿಕಲಿ, ಮೋಹನ ಗುಂಡ್ಲೂರ, ಈರಣ್ಣಚಿನಗುಡಿ, ಪ್ರೇಮಕ್ಕಅಂಗಡಿ, ಶೈಲಜಾ ಬಿಂಗೆ, ಸುಜಾತಾ ಮತ್ತಿಕಟ್ಟಿ ಹಾಗೂ ಜಾಗತಿಕ ಲಿಂಗಾಯತ ಮಹಾಸಭಾದಎಲ್ಲ ಘಟಕಗಳ ಪದಾಧಿಕಾರಿಗಳು, ಸದಸ್ಯರು ಸಭೆಯಲ್ಲಿ ಹಾಜರಿದ್ದರು.

## ಅಕ್ರಮ ಆಸ್ತಿ ಗಳಿಕೆ; ಶಾಸಕ ಅಭಯ್ ಪಾಟೀಲ್‌ಗೆ ಮತ್ತೊಂದು ಸಂಕಷ್ಟ

### ಸುಪ್ರೀಂಕೋರ್ಟ್ ಮೆಟ್ಟಿಲೇರಿದ ಸುಜೀತ ಮುಳಗುಂದ



ಬೆಳಗಾವಿ: ಆದಾಯ ಮೀರಿ ಅಕ್ರಮ ಆಸ್ತಿ ಗಳಿಕೆ ಆರೋಪಕ್ಕೆ ಸಂಬಂಧಿಸಿದಂತೆ ಬೆಳಗಾವಿ ದಕ್ಷಿಣ ಕ್ಷೇತ್ರದ ಶಾಸಕ ಅಭಯ ಕುಮಾರ್ ಪಾಟೀಲ ವಿರುದ್ಧದ ಖಾಸಗಿ ದೂರನ್ನು ಹೈಕೋರ್ಟ್ ರದ್ದುಪಡಿಸಿದ್ದು, ಈ ಕುರಿತು ಲೋಕಾಯುಕ್ತ ಅಧಿಕಾರಿಗಳು ಸಮರ್ಥವಾಗಿ ನ್ಯಾಯಮಂಡಿಸಲು ವಿಫಲರಾಗಿದ್ದಾರೆ ಎಂದು ಸಾಮಾಜಿಕ ಕಾರ್ಯಕರ್ತ ಸುಜೀತ ಮುಳಗುಂದ ಹೇಳಿದರು.


ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಕಳೆದ 2012ರಲ್ಲಿ ಶಾಸಕ ಅಭಯ ಪಾಟೀಲ ವಿರುದ್ಧ ಅಕ್ರಮವಾಗಿ ಆಸ್ತಿ ಕಬಳಿಕೆ ಮಾಡಿರುವ ಕುರಿತು ಲೋಕಾಯುಕ್ತದಲ್ಲಿ ದೂರು ದಾಖಲಿಸಿ, ನ್ಯಾಯಾಲಯದಲ್ಲೂ ವಾದ ವಿವಾದ ನಡೆಯಿತು. ಲೋಕಾಯುಕ್ತ ಅಧಿಕಾರಿಗಳ ನಿರ್ಲಕ್ಷ್ಯದಿಂದ ಅದು ರದ್ದಾಗಿತ್ತು. ಈಗ ಸುಪ್ರೀಂಕೋರ್ಟ್ ನಲ್ಲಿ ಮತ್ತೆ ಪ್ರಕರಣ ದಾಖಲಿಸಲಾಗಿದೆ ಎಂದು ಹೇಳಿದರು.

ನಾನು ಯಾವುದೇ ವ್ಯಕ್ತಿಯ ವಿರುದ್ಧ ಹೋರಾಟ ನಡೆಸಿಲ್ಲ. ಭ್ರಷ್ಟಾಚಾರದ ವಿರುದ್ಧ ಹೋರಾಟ ನಡೆಸಿದ್ದೇನೆ. ಸುಪ್ರೀಂಕೋರ್ಟ್ ಲೋಕಾಯುಕ್ತರು ಶಾಸಕ ಅಭಯ ಪಾಟೀಲಗೆ ನೋಟಿಸ್ ಜಾರಿ ಮಾಡಿದ್ದಾರೆ ಎಂದರು.

2004 ರಿಂದ 2008ರ ಅವಧಿಯಲ್ಲಿ ಶಾಸಕರಾಗಿದ್ದ ಅಭಯ್ ಪಾಟೀಲ್ ಆದಾಯ ಮೀರಿ ಅಕ್ರಮವಾಗಿ ಆಸ್ತಿ ಗಳಿಕೆ ಮಾಡಿದ್ದಾರೆ ಎಂದು ಆರೋಪಿಸಿ 2012ರಲ್ಲಿ ಬೆಳಗಾವಿ ಲೋಕಾಯುಕ್ತ ಕೋರ್ಟ್‌ಗೆ ಖಾಸಗಿ ದೂರು ದಾಖಲಿಸಿತ್ತು, ದೂರಿನ ಅನ್ವಯ ನ್ಯಾಯಾಲಯ ಲೋಕಾಯುಕ್ತ ಪೊಲೀಸರ ತನಿಖೆಗೆ ಆದೇಶಿಸಿತ್ತು. ಆದರೆ, ಸಾಕಷ್ಟು ಕಾಲಾವಕಾಶ ಇದ್ದರೂ ಪ್ರಕರಣವನ್ನು ಕುಲಕುಂಶವಾಗಿ ತನಿಖೆ ಪರಿಗಣಿಸದೇ ರದ್ದು ಮಾಡಲಾಗಿದೆ. ಲೋಕಾಯುಕ್ತ ಅಧಿಕಾರಿಗಳ ನಿರ್ಲಕ್ಷ್ಯದಿಂದ ಅದು ರದ್ದಾಗಿದೆ ಹೀಗಾಗಿ, ಸುಪ್ರೀಂಕೋರ್ಟ್ ಮೊರೆ ಹೋಗಿದ್ದೆವೆ, ನಮ್ಮ ಹೋರಾಟಕ್ಕೆ ಇಲ್ಲಿಯಾದರೂ ನಮಗೆ ನ್ಯಾಯ ಸಿಗುವ ನಂಬಿಕೆ ಇದೆ ಎಂದು ಹೇಳಿದರು.

ನ್ಯಾ. ನಿತಿನ್ ಬೋಳಬಂದಿ ಇತರರು ಇದ್ದರು.

## ಅಯೋಧ್ಯಾಪುರಕ್ಕೆ ತೆಳಿದ ಶ್ರೀ ಗಳು



ವಾರಣಾಸಿ: ಕಾಶಿ ಜಂಗಮವಾಡಿ ಮಠದಲ್ಲಿ ಶ್ರೀ ಕಾಶಿ ಜಗದ್ಗುರು ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಸ್ವಾಮೀಜಿ ನೇತೃತ್ವದಲ್ಲಿ ಕರ್ನಾಟಕ, ಮಹಾರಾಷ್ಟ್ರ, ಆಂದ್ರಪ್ರದೇಶದ, ತೆಲಂಗಾಣ ರಾಜ್ಯಗಳಿಂದ ಶನಿವಾರ ಅಯೋಧ್ಯಾಪುರಕ್ಕೆ ತೆರಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕಾಶಿ ಜಗದ್ಗುರುಗಳು, ವೀರಶೈವ ಮಠಾಧೀಶರು ಇವತ್ತು ಅಯೋಧ್ಯಾಪುರಕ್ಕೆ ಶ್ರೀ ಪೀಠದಿಂದ ತೆರಳುತ್ತಿದ್ದೇವೆ. ಅಯೋಧ್ಯೆಯ ಶ್ರೀರಾಮನ ಬಾಲ ಮೂರ್ತಿ ಪ್ರತಿಷ್ಠಾಪನೆ ಯಲ್ಲಿ ಭಾಗಿಯಾಗುವುದರ ಮೂಲಕ ಅಲ್ಲಿಯ ಕಾರ್ಯವನ್ನು ನೋಡಿ ಸಂತೋಷ ಪಡುತ್ತಿದ್ದೇವೆ ಎಂದರು.

ಕೊಟ್ಟೂರು ಚಾಣುಕೋಟಿ ಮಠದ ಡಾ. ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ, ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, ಬೆಂಗಳೂರು ವಿಭೂತಿಪುರಮಠದ ಶ್ರೀ ಡಾ.ಮಹಾಂತಲಿಂಗ ಶಿವಾಚಾರ್ಯ ಸ್ವಾಮೀಜಿ, ಚನ್ನಗಿರಿ ವಿರಕ್ತಮಠದ ಡಾ. ಜಯಚಂದ್ರ ಸ್ವಾಮೀಜಿ, ಗುಬ್ಬಿ ವಿಭವ ವಿದ್ಯಾಶಂಕರ ದೇಶಿಕೇಂದ್ರ ಸ್ವಾಮೀಜಿ, ಮಹಾರಾಷ್ಟ್ರದ ನಾಗನಸೂರ ಶ್ರೀಕಂಠ ಶಿವಾಚಾರ್ಯರು, ಸೋಗೂರೇಶ್ವರ ಸ್ವಾಮೀಜಿ ಸೇರಿದಂತೆ ಸುಮಾರು 25 ಜನ ಮಠಾಧೀಶರು ಅಯೋಧ್ಯಾಪುರಕ್ಕೆ ತೆರಳಿದರು.

# 20 ನೇ ಸತೀಶ ಶುರ್ಗಸ್ ಆವಾರ್ಡ್ಸ: ಜಾನಪದ ಸ್ಪರ್ಧೆಯಲ್ಲಿ ಶಂಕರಲಿಂಗ ಪ್ರೌಢಶಾಲೆ ಪ್ರಥಮ

ಗೋಕಾಕ : ನಗರದ ಮಹರ್ಷಿ ಶ್ರೀ ವಾಲ್ಮೀಕಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ 20 ನೇ ಸತೀಶ ಶುರ್ಗಸ್ ಆವಾರ್ಡ್ಸ ಅಂತಿಮ ಹಂತದ ಮೊದಲನೆಯ ದಿನದ ಪೌಢಶಾಲಾ ವಿಭಾಗದ ಜಾನಪದ ನೃತ್ಯ ಸ್ವರ್ಧೆಯಲ್ಲಿ ಗೋಕಾಕನ ಶಂಕರಲಿಂಗ ಪ್ರೌಢಶಾಲಾ ತಂಡ ಪ್ರಥಮ , ನಾಗನೂರಿನ ಮುರಾರ್ಜಿ ವಸತಿ ಶಾಲೆ ದ್ವಿತೀಯ ಹಾಗೂ ಮಹಾಲಿಂಗೇಶ್ವರ ಪ್ರೌಢಶಾಲೆಯ ವಿದ್ಯಾರ್ಥಿಗಳು ತೃತೀಯ ಸ್ಥಾನದ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡರು.

ಮುಕ್ತ ವಿಭಾಗದ ಸಮೂಹ ನೃತ್ಯ ಸ್ವರ್ಧೆಯಲ್ಲಿ ಬೆಳಗಾವಿ ವಡಗಾವಿಯ ವ್ಹಿ.ಬಿ.ಡ್ಯಾನ್ಸ್ ಅಕ್ಯಾಡಮಿ ತಂಡ ಪ್ರಥಮ, ಗೋಕಾಕನ ಸ್ಕಾಯ್ ಡ್ಯಾನ್ಸ್ ಗ್ರೂಪ್ ದ್ವಿತೀಯ, ರಾಯಬಾಗನ ವಿ.ಕೆ ಡ್ಯಾನ್ಸ್ ಅಕ್ಯಾಡಮಿ ತೃತೀಯ ಸ್ಥಾನವನ್ನು ಪಡೆದಿದ್ದಾರೆ. ಪ್ರಮಥ ಸ್ಥಾನ ಪಡೆದ ತಂಡಕ್ಕೆ 50 ಸಾವಿರ, ದ್ವಿತೀಯ 30 ಸಾವಿರ, ತೃತೀಯ 20 ಸಾವಿರ ರೂ ನಗದು ಬಹುಮಾನ ಹಾಗೂ ಆಕರ್ಷಕ ಟ್ರೋಪಿಯನ್ನು ನೀಡಿ ಗೌರವಿಸಲಾಯಿತು.




ಪ್ರಾಥಮಿಕ ಶಾಲಾ ವಿಭಾಗದ ಗಾಯನ ಸ್ವರ್ಧೆಯಲ್ಲಿ ಗೋಕಾಕನ ಶರ್ಪಡ್ ಮಿಶನ ಆಂಗ್ಲ ಮಾಧ್ಯಮ ಶಾಲೆಯ ರಾಘವೇಂದ್ರ ಖಾನಪ್ಪನವರ ಪ್ರಥಮ, ಕೆಎಲ್‌ಇ ಮುನ್ನವಳ್ಳಿ ಶಾಲೆಯ ಪ್ರಥಮ ಪರೀಟ್ ದ್ವಿತೀಯ, ಎಂ.ಎನ್ ಮಟ್ಟಿಕಲ್ಲಿ ಶಾಲೆಯ ರಾಜಶೇಖರ ಚಿಕ್ಕಡೊಳ್ಳಿ ತೃ ಸ್ಥಾನ ಪಡೆದಿದ್ದಾರೆ.

ಪ್ರೌಢಶಾಲಾ ವಿಭಾಗದ ಜಾನಪದ ಗಾಯನ ಸ್ವರ್ಧೆಯಲ್ಲಿ ಕಲ್ಲೋಳಿಯ ಎಸ್.ಆರ್.ಇ ಶಾಲೆಯ ಸುಪ್ರಿಯಾ ಮಠಪತಿ ಪ್ರಥಮ, ಗೋಕಾಕನ ಶಂಕರಲಿಂಗ ಪ್ರೌಢಶಾಲೆಯ ವಿದ್ಯೋಧನ ಗಂಟೆನ್ನವರ ದ್ವಿತೀಯ, ಪಟ್ಟಗುಂಡಿಯ ಶಾಂತಿ ಸಾಗರ ಪ್ರೌಢಶಾಲೆಯ ಬಾಳಗೌಡ ಪಾಟೀಲ ತೃತೀಯ ಸ್ಥಾನ ಪಡೆದಿದ್ದಾರೆ.

ಈ ವಿದ್ಯಾರ್ಥಿಗಳಿಗೆ ಪ್ರಥಮ 10 ಸಾವಿರ, ದ್ವಿತೀಯ 7 ಸಾವಿರ, ತೃತೀಯ 5 ಸಾವಿರ ನಗದು ರೂ ಗೊಳೊಂದಿಗೆ ಆಕರ್ಷಕ ಟ್ರೋಪಿ ನೀಡಿ ಗೌರವಿಸಲಾಯಿತು.

ಪ್ರಾಥಮಿಕ ವಿಭಾಗದ ಭಾಷಣ ಸ್ವರ್ಧೆಯಲ್ಲಿ ಗೋಕಾಕನ ಕೆಬಿಎಸ್ ನಂ 1 ಶಾಲೆಯ ವಿನಾಯಕ ಇಟ್ಟನ್ನವರ ಪ್ರಥಮ, ಶಿವಾಪೂರ ಎಚ್.ಪಿ.ಎಸ್. ಶಾಲೆಯ ಸ್ಮೃತಿ ದೇವರಮನಿ ದ್ವಿತೀಯ, ಮೆಳವಂಕಿಯ ಎಚ್.ಪಿ.ಎಸ್. ಸಿದ್ದಾರೂಢಮಠ ಶಾಲೆಯ ಲಕ್ಷ್ಮೀ ಮಠಪತಿ ತೃತೀಯ ಸ್ಥಾನ ಪಡೆದಿದ್ದಾರೆ.

ಕಾಲೇಜು ವಿಭಾಗ ಭಾಷಣ ಸ್ವರ್ಧೆಯಲ್ಲಿ ಗೋಕಾಕನ ಎಲ್.ಆರ್.ಜೆ ಕಾಲೇಜಿನ ಪವಿತ್ರಾ ಹತರವಾಡ ಪ್ರಥಮ, ಜೆ.ಎಸ್.ಎಸ್.ಕಾಲೇಜಿನ ತಸ್ಕೀನಜೀಯಾ ಅಖಾನಿ ದ್ವಿತೀಯ, ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಮಂಜುನಾಥ್ ಕಡಕೋಳ ತೃತೀಯ ಸ್ಥಾನ ಪಡೆದಿದ್ದಾರೆ. ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗೆ 10 ಸಾವಿರ, ದ್ವಿತೀಯ 7 ಸಾವಿರ ತೃತೀಯ 5 ಸಾವಿರ ನಗದು ರೂ ಹಾಗೂ ಆಕರ್ಷಕ ಟ್ರೋಪಿ ನೀಡಿ ಗೌರವಿಸಲಾಯಿತು.

ಪ್ರೌಢಶಾಲಾ ವಿಭಾಗದ ಭಾಷಣ ಸ್ವರ್ಧೆಯಲ್ಲಿ ನಾಗನೂರಿನ ಮಹಾಲಿಂಗೇಶ್ವರ ಶಾಲೆಯ ಪ್ರಿಯಾಂಕಾ ಅಡಿಬಟ್ಟಿ ಪ್ರಥಮ , ರಾಜಾಪೂರದ ಜ್ಞಾನ ಗಂಗೋತ್ರಿ ಶಾಲೆಯ ಐಶ್ವರ್ಯ ಕೊಡ್ಲಿ ದ್ವಿತೀಯ, ಶಿವಾಪೂರದ ಜಿ.ಎಚ್.ಶಾಲೆಯ ಸುಶ್ಮಿತಾ ಗಿರೆನ್ನವರ ಹಾಗೂ ಗೋಕಾಕನ ಶಂಕರಲಿಂಗ ಪ್ರೌಡಶಾಲೆಯ ಅನುಜಾ ಚಿಕ್ಕೋಡಿ ತೃತೀಯ ಸ್ಥಾನ ಪಡೆದಿದ್ದಾರೆ. ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗೆ 15 ಸಾವಿರ, ದ್ವಿತೀಯ 13 ಸಾವಿರ, ತೃತೀಯ ತಲಾ 5 ಸಾವಿರ ನಗದು ಹಾಗೂ ಆಕರ್ಷಕ ಟ್ರೋಪಿ ನೀಡಿ ಗಣ್ಯರು ಗೌರವಿಸಿದರು.

ಈ ಸಂದರ್ಭದಲ್ಲಿ ಸತೀಶ ಶುರ್ಗಸ್ ನಿರ್ದೇಶಕಿ ಪ್ರಿಯಾಂಕಾ ಜಾರಕಿಹೊಳಿ ,ಯುವ ನಾಯಕರುಗಳಾದ ರಾಹುಲ್ ಜಾರಕಿಹೊಳಿ, ಸರ್ವೋತ್ತಮ ಜಾರಕಿಹೊಳಿ, ಆದಿತ್ಯ ಜಾರಕಿಹೊಳಿ, ಎ.ಬಿ.ಮಲ್ಲಬನ್ನವರ, ಎಸ್.ಕೆ.ಆಸಂಗಿ, ಸಿಪಿಐ ಗೋಪಾಲ ರಾಠೋಡ, ಪಿ.ಎಸ್.ಐಗಳಾದ ಕೆ.ವಾಲಿಕರ, ಕಿರಣ ಮೋಹಿತೆ, ಸಜೀವ ಸಂಸುದ್ದಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

VOL. 04 ISSUE. 297 RNI. KARKAN/2020/79084 REG.NO G-2/PMG/KA/NK/BM/139/2024-26

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089